ಸಂಪುಟ: 05 ಸಂಚಿಕೆ: 119 ಪುಟಗಳು: 08 ಶನಿವಾರ 12 ಜುಲೈ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಜಗತ್ತು ಬದಲಾಗಬೇಕು ಎನ್ನುವವರು ಮೊದಲು ತಮ್ಮಿಂದಲೇ ಬದಲಾವಣೆಯಾಗಬೇಕು ಎಂಬುದನ್ನು ಅರಿತುಕೊಳ್ಳಬೇಕು.

## ಅಕ್ರಮ ಆಸ್ತಿ ಗಳಿಕೆ ಆರೋಪ ಈಶ್ವರಪ್ಪಗೆ ತಾತ್ಕಾಲಿಕ ರಿಲೀಫ್

• ಉದಯವಾಹಿನಿ, ಬೆಂಗಳೂರು

ಆದಾಯ ಮೀರಿದ ಅಕ್ರಮ ಆಸ್ತಿ ಗಳಿಕೆ ಆರೋಪ ಪ್ರಕರಣದಲ್ಲಿ ಮಾಜಿ ಸಚಿವ ಕೆಎಸ್ ಈಶ್ವರಪ್ಪಗೆ ಹೈಕೋರ್ಟ್ ತಾತ್ಕಾಲಿಕ ರಿಲೀಫ್ ನೀಡಿದೆ. ಪ್ರಕರಣ ರದ್ದು ಕೋರಿ ಕೆಎಸ್ ಈಶ್ವರಪ್ಪ ಸಲ್ಲಿಸಿದ್ದ ಅರ್ಜಿ ಪರಿಶೀಲಿಸಿದ ನ್ಯಾ.ಎಸ್.ಆರ್.ಕೃಷ್ಣಕುಮಾರ್ ಅವರಿದ್ದ ಏಕಸದಸ್ಯ ಪೀಠ, ಲೋಕಾಯುಕ್ತ ಪೊಲೀಸರು ಹಾಗೂ ಮೂಲ ದೂರುದಾರ ವಕೀಲ ಬಿ ವಿನೋದ್‌ಗೆ ನೋಟಿಸ್ ಜಾರಿಗೊಳಿಸಿ, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಡೆಯುತ್ತಿರುವ ವಿಚಾರಣೆ ಹಾಗೂ ಎಫ್‌ಐಆರ್‌ಗೆ ತಡೆ ನೀಡಿದೆ. ಅರ್ಜಿದಾರರ ಪರ ವಾದಿಸಿದ ಹಿರಿಯ ವಕೀಲ ಅಶೋಕ್ ಹಾರನಹಳ್ಳಿ, ಸುಪ್ರೀಂಕೋರ್ಟ್ ಆದೇಶದಂತೆ ಪ್ರಾಥಮಿಕ ತನಿಖೆ ನಡೆಸದೆಯೇ ಅರ್ಜಿದಾರರ ವಿರುದ್ಧ ಶಿವಮೊಗ್ಗ ಲೋಕಾಯುಕ್ತ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ. ಹಾಗಾಗಿ, ಅರ್ಜಿದಾರರಿಗೆ ಪ್ರಕರಣದಲ್ಲಿ ಬಂಧನ ಭೀತಿ ಇದೆ. ಆದ್ದರಿಂದ ಎಫ್‌ಐಆರ್‌ಗೆ ತಡೆ ನೀಡಬೇಕು ಎಂದು ಕೋರಿದರು. ಶಿವಮೊಗ್ಗ ಮೂಲದ ವಕೀಲ ಬಿ.ವಿನೋದ್, ಈಶ್ವರಪ್ಪ, ಅವರ ಪುತ್ರ ಕೆ.ಇ.ಕಾಂತೇಶ್ ಹಾಗೂ ಕಾಂತೇಶ್ ಪತ್ನಿ ಶಾಲಿನಿ ವಿರುದ್ಧ ಆದಾಯಕ್ಕೂ ಮೀರಿದ ಅಕ್ರಮ ಆಸ್ತಿ ಗಳಿಕೆ ಆರೋಪ ಮಾಡಿ ಲೋಕಾಯುಕ್ತ ಪೊಲೀಸರ ಮುಂದೆ ಪ್ರಕರಣ ದಾಖಲಿಸಿದ್ದರು.

## ಸಿದ್ದರಾಮಯ್ಯ ವಿರುದ್ಧ ಕೇಸ್‌ಗೆ ಕರ್ನಾಟಕ ಹೈಕೋರ್ಟ್ ತಡೆಯಾಜ್ಞೆ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ವಿರುದ್ಧ ಭ್ರಷ್ಟಾಚಾರ ಆರೋಪ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಹೈಕೋರ್ಟ್‌ನಲ್ಲಿ ರಿಲೀಫ್ ಸಿಕ್ಕಿದೆ. ಸಿಎಂ ವಿರುದ್ಧ ವಿಚಾರಣೆಗೆ ತಡೆಯಾಜ್ಞೆ ನೀಡಲಾಗಿದೆ. ಹಿಂದಿನ ಬಿಜೆಪಿ ಸರಕಾರದ ವಿರುದ್ಧ ದಿನಪತ್ರಿಕೆಗಳ ಮುಖಪುಟದಲ್ಲಿ 'ಭ್ರಷ್ಟಾಚಾರ ದರ ಪಟ್ಟಿ' ಜಾಹೀರಾತು ನೀಡಿ ಪಕ್ಷದ ವರ್ಚಸ್ಸಿಗೆ ಧಕ್ಕೆ ತಂದ ಆರೋಪದಡಿ ದಾಖಲಿಸಿರುವ ಮಾನಹಾನಿ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧದ ವಿಚಾರಣೆಗೆ ಹೈಕೋರ್ಟ್ ತಡೆ ನೀಡಿದೆ.

ಬಿಜೆಪಿಯ ರಾಜ್ಯ ಘಟಕದ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯ ಬಿ.ಎಸ್.ಕೇಶವ ಪ್ರಸಾದ್ ಸಲ್ಲಿಸಿರುವ ಖಾಸಗಿ ದೂರು ರದ್ದು ಕೋರಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಸ್.ಆರ್.ಕೃಷ್ಣ ಕುಮಾರ್ ಅವರಿದ್ದ ಪೀಠ, ಪ್ರಕರಣದ ವಿಚಾರಣೆಗೆ ತಡೆಯಾಜ್ಞೆ ನೀಡಿತು. ಅರ್ಜಿದಾರರ ಪರ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಪ್ರಕರಣದಲ್ಲಿ ಇತರೆ ಆರೋಪಿಗಳ ವಿರುದ್ಧದ ವಿಚಾರಣೆಗೆ ನ್ಯಾಯಾಲಯ ಈಗಾಗಲೇ ತಡೆ ನೀಡಿದೆ.

## ಕಾಂಗ್ರೇಸ್ ಸೇರಿದ ಮಾಜಿ ಸಚಿವೆ ಬಿಟಿ ಲಲಿತಾ ನಾಯಕ್

• ಉದಯವಾಹಿನಿ, ಬೆಂಗಳೂರು

ರಾಜ್ಯಪಾಲರು, ಮುಖ್ಯಮಂತ್ರಿ, ಕೇಂದ್ರ ಸಚಿವರು, ಪಂಚಾಯಿತಿ ಸದಸ್ಯ, ನಿಗಮ ಮಂಡಳಿ ಸೇರಿದಂತೆ ಇತರೇ ಅಧಿಕಾರಯುತ ಸ್ಥಾನ ಬೇಕು ಎಂದು ಪಕ್ಷ ಸೇರುವುದು ಮುಖ್ಯವಲ್ಲ. ಈ ಪಕ್ಷಕ್ಕಾಗಿ ದುಡಿಯುವುದು ಮುಖ್ಯ. ಎಲ್ಲರಿಗೂ ಮಾತನಾಡುವ ದನಿ ಶಕ್ತಿ ನೀಡಿರುವುದೇ ಹೆಗ್ಗಳಿಕೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಅಭಿಪ್ರಾಯಪಟ್ಟರು.

ಭಾರತ್ ಜೋಡೋ ಭವನದಲ್ಲಿ ಶುಕ್ರವಾರ ನಡೆದ ಮಾಜಿ ಸಚಿವರಾದ ಬಿ.ಟಿ.ಲಲಿತಾ ನಾಯಕ್ ಅವರ ಕೈ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಶಿವಕುಮಾರ್ ಅವರು ಮಾತನಾಡಿದರು. ಬೇರೆ ಯಾವುದೇ ಪಕ್ಷದಲ್ಲಿ ಇಂತಹ ಅವಕಾಶ ಸಿಗುವುದಿಲ್ಲ. ನನಗೆ ಬೇರೆ ಪಕ್ಷದಲ್ಲಿ ಇಂತಹ ಖುರ್ಚಿ (ಅಧಿಕಾರ) ನೀಡಲು ಸಾಧ್ಯವಾಗುತ್ತಿರಲಿಲ್ಲ. ವೇದಿಕೆಯಲ್ಲಿರುವ ಪಕ್ಷದ ನಾಯಕರಿಗೆ ಇಂತಹ ಸ್ಥಾನ ನೀಡಲು ಯಾವುದೇ ಪಕ್ಷದಲ್ಲಿ ಆಗುತ್ತಿರಲಿಲ್ಲ. ಕಾಂಗ್ರೆಸ್‌ನಿಂದ ಮಾತ್ರ ಸಾಧ್ಯ ಎಂದರು.

## ಸರ್ಕಾರದ ಸಮ್ಮತಿ ಪಡೆಯದೆ ಶೇಕಡ 7.5ರಷ್ಟು ಟೋಲ್ ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ಸರ್ಕಾರದ ಸಮ್ಮತಿ ಪಡೆಯದೆ ಶೇಕಡ 7.5ರಷ್ಟು ಟೋಲ್ ಹೆಚ್ಚಿಸಿರುವ ನಂದಿ ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಎಂಟರ್‌ಪ್ರೈಸಸ್‌ಗೆ (ನೈಸ್) ಲೋಕೋಪಯೋಗಿ ಇಲಾಖೆ ನೋಟಿಸ್ ಜಾರಿ ಮಾಡಿದೆ.

1994ರಲ್ಲಿ ಆಗಿರುವ ಒಪ್ಪಂದದಂತೆ, ಸರ್ಕಾರದ ಸಮ್ಮತಿ ಇಲ್ಲದೆ ಟೋಲ್ ಹೆಚ್ಚಳ ಮಾಡುವಂತಿಲ್ಲ ಎಂದು ಲೋಕೋಪಯೋಗಿ ಇಲಾಖೆ ನೋಟಿಸ್‌ನಲ್ಲಿ ತಿಳಿಸಿದೆ. 'ಈ ರೀತಿಯ ಯಾವುದೇ ನೋಟಿಸ್ ಬಂದಿಲ್ಲ, ಒಪ್ಪಂದದಂತೆಯೇ ಟೋಲ್ ಹೆಚ್ಚಿಸಲಾಗಿದೆ' ಎಂದು ನೈಸ್ ಸಂಸ್ಥೆ ಹೇಳಿದೆ. 44 ಕಿ.ಮೀ ಉದ್ದದ ಪೆರಿಫೆರಲ್ ರಿಂಗ್ ರಸ್ತೆ ಮತ್ತು ಲಿಂಕ್ ರಸ್ತೆಯಲ್ಲಿ ಜುಲೈ 1ರಿಂದಲೇ ಟೋಲ್ ದರವನ್ನು ನೈಸ್ ಸಂಸ್ಥೆಯು ಶೇ 7.5ರಷ್ಟು ಹೆಚ್ಚಿಸಿತ್ತು. ಕಾರು ಹಾಗೂ ದ್ವಿಚಕ್ರ ವಾಹನ ಸವಾರರಿಗೆ ಇದು ದುಬಾರಿ ಎನಿಸಿದೆ. 'ಟೋಲ್ ಹೆಚ್ಚಿಸಿರುವುದನ್ನು ಒಪ್ಪಲು ಸಾಧ್ಯವಿಲ್ಲ. ಒಪ್ಪಂದದ ಪ್ರಕಾರ ಟೋಲ್ ಹೆಚ್ಚಿಸುವ ಮುನ್ನ ಸರ್ಕಾರದ ಸಮ್ಮತಿ ಪಡೆಯಬೇಕಿದೆ' ಎಂದು ಲೋಕೋಪಯೋಗಿ ಇಲಾಖೆ ಉಪ ಕಾರ್ಯದರ್ಶಿ ಎನ್. ಪಾರ್ವತಿ ಅವರು ಜುಲೈ 8ರಂದು ನೀಡಿರುವ ನೋಟಿಸ್‌ನಲ್ಲಿ ತಿಳಿಸಿದ್ದಾರೆ.

# ಖುರ್ಚಿ ಸಿಗುವುದೇ ಕಷ್ಟ, ಖುರ್ಚಿ ಸಿಕ್ಕಾಗ ತೆಪ್ಪಗೆ ಬಂದು ಕುಳಿತುಕೊಳ್ಳಬೇಕು

● ವಕೀಲರ ಸಂಘಕ್ಕೆ ರೂ.5 ಕೋಟಿ ರೂ. ಅನುದಾನ; ಇಬ್ಬರು ವಕೀಲರಿಗೆ ಕೆಂಪೇಗೌಡ ಪ್ರಶಸ್ತಿ ಘೋಷಣೆ

• ಉದಯವಾಹಿನಿ, ಬೆಂಗಳೂರು

ಖುರ್ಚಿ ಸಿಗುವುದೇ ಕಷ್ಟ. ಖುರ್ಚಿ ಸಿಕ್ಕಾಗ ತೆಪ್ಪಗೆ ಬಂದು ಕುಳಿತುಕೊಳ್ಳಬೇಕು ಎಂದು ಡಿಕೆ ಶಿವಕುಮಾರ್ ಅವರು ಹೇಳಿದ್ದಾರೆ. ವಕೀಲ ಸಂಘದ ಕಾರ್ಯಕ್ರಮದಲ್ಲಿ ಡಿಸಿಎಂ ವ್ಯಂಗ್ಯವಾಗಿ ಈ ಹೇಳಿಕೆ ನೀಡಿದ್ದಾರೆ. ಬೆಂಗಳೂರು ವಕೀಲರ ಸಂಘದಿಂದ ಶುಕ್ರವಾರ ನಡೆದ ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ಉದ್ಘಾಟಿಸಿ ಶಿವಕುಮಾರ್ ಅವರು ಮಾತನಾಡಿದರು. ಸಭಾಂಗಣದ ಇಕ್ಕೆಲಗಳಲ್ಲಿ ನಿಂತಿದ್ದ ವಕೀಲರನ್ನು ಉದ್ದೇಶಿಸಿ ಇಷ್ಟೊಂದು ಖುರ್ಚಿಗಳಿವೆ ಬನ್ನಿ ಕುಳಿತುಕೊಳ್ಳಿ. ಖುರ್ಚಿ ಸಿಗುವುದೇ ಕಷ್ಟ. ಖುರ್ಚಿ ಸಿಕ್ಕಾಗ ತೆಪ್ಪಗೆ ಬಂದು ಕುಳಿತುಕೊಳ್ಳಬೇಕು. ನಿಮ್ಮನ್ನು ನೋಡಿದರೆ ತ್ಯಾಗಿಗಳ ತರಹ ಕಾಣುತ್ತಾ ಇದ್ದೀರಿ ಎಂದು ಹಾಸ್ಯ ಚಟಾಕಿ ಹಾರಿಸಿದರು.



**ಆತ್ಮತೃಪ್ತಿಗೆ ಕೆಲಸ ಮಾಡಬೇಕು**

ವಕೀಲರ ಬಳಿ ನ್ಯಾಯ ಕೊಡಿಸಿ ಎಂದು ಜನರು ಬರುತ್ತಾರೆ. ನಿಮ್ಮ ಆತ್ಮತೃಪ್ತಿಗೆ ಕೆಲಸ ಮಾಡಬೇಕು. ನಿಮ್ಮ ಬಳಿ ಬಂದ ಕಕ್ಷಿದಾರನಿಗೆ ಸಂತೋಷವಾಗುವಂತೆ ಕೆಲಸ ಮಾಡಬೇಕು. ಕಪ್ಪು ಕೋಟು ಹಾಕಿದ್ದೇನೆ ಎಂದು ಕಾನೂನನ್ನು ಕೈಗೆತ್ತಿಕೊಳ್ಳಬೇಡಿ. ನಿಮ್ಮ ಹಾಗೂ ಪೊಲೀಸರ ನಡುವೆ ಆಗಾಗ್ಗೆ ಸಂಘರ್ಷವಾಗುತ್ತಾ ಇರುತ್ತದೆ. ಈ ಪೋಲೀಸರು ಮೈಮೇಲೆ ಖಾಕಿ ಬಂದ ತಕ್ಷಣ ದೇವರು ಬಂದಂತೆ ಆಡುತ್ತಾರೆ ಎಂದರು. ಬೆಂಗಳೂರು ಯೋಜಿತ ನಗರವಲ್ಲ. ಆದರೆ, ಕೆಂಪೇಗೌಡರು ಅಂದೇ ಯೋಜಿತವಾಗಿ ನಗರ ಕಟ್ಟಿದವರು. ಕೃಷ್ಣದೇವರಾಯ ಅವರ ಚಿಂತನೆಗಳನ್ನು ಇಲ್ಲಿ ಅಳವಡಿಸಿದರು. ವ್ಯಾಪಾರ ವಹಿವಾಟುಗಳನ್ನು ಬೆಳೆಸಲು ಈ ಊರನ್ನು ಕಟ್ಟಿ ಬೆಳಗಿದರು. ಅವರ ಆಚಾರ ವಿಚಾರಗಳನ್ನು ಉಳಿಸಲು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮೂಲಕ ಮುಂದಡಿ ಇಟ್ಟಿದ್ದೇವೆ ಎಂದು ಹೇಳಿದರು.

ವಕೀಲರ ಸಂಘಕ್ಕೆ ಪ್ರತಿ ವರ್ಷ ರೂ.5 ಲಕ್ಷವನ್ನು ಕೆಂಪೇಗೌಡ ಜಯಂತಿ ಆಚರಣೆಗೆ ನೀಡಲಾಗುವುದು. ಸಂಘದ ಉಪಯೋಗಕ್ಕಾಗಿ ರೂ.5 ಕೋಟಿಯನ್ನು ಜಿಬಿಎಯಿಂದ ನೀಡಲಾಗುವುದು. ಕೆಂಪೇಗೌಡ ಪ್ರಶಸ್ತಿಯನ್ನು ಕಡ್ಡಾಯವಾಗಿ ಇಬ್ಬರು ವಕೀಲರಿಗೆ ಪ್ರತಿ ವರ್ಷ ನೀಡಲಾಗುವುದು ಎಂದು ಹೇಳಿದರು. ಒಂದು ವಾರದೊಳಗೆ ಸಂಘದ ಕಟ್ಟಡಕ್ಕೆ ಸೋಲಾರ್ ಗ್ರಿಡ್ ವ್ಯವಸ್ಥೆಗೆ ಪರಿಶೀಲನೆ ನಡೆಸಲಾಗುವುದು. ಇದರ ಬಗ್ಗೆ ಹಿಂದೆಯೇ ಮಾತುಕಥೆಯಾಗಿತ್ತು. ನೀವು ಅಧಿಕಾರಿಗಳ ಹಿಂದೆ ಬಿದ್ದು ಕೆಲಸ ಮಾಡಿಸಿಕೊಳ್ಳಬೇಕು. ಜೊತೆಗೆ ಈ ಸಂಸ್ಥೆಗೆ ಭೂಮಿ ಬೇಕು ಎಂದು ಹೇಳಿದ್ದೀರಿ.

ಆದ ಕಾರಣಕ್ಕೆ 10 ಎಕರೆ ಕಂದಾಯ ಭೂಮಿಯನ್ನು ಲಭ್ಯತೆ ನೋಡಿಕೊಂಡು ನೀಡಲಾಗುವುದು. ನಗರದಲ್ಲೆಡೆ 20 ಕಿಮೀ ವ್ಯಾಪ್ತಿಯಲ್ಲಿ ಭೂಮಿ ಇದ್ದರೆ ನೀವೆ ಹುಡುಕಿ. ನಾವು ನೀಡುವ ಹಣವನ್ನು ನಿಮಗೆ ಉಪಯೋಗವಾಗುವ ಉತ್ತಮ ಕೆಲಸಗಳಿಗೆ ವಿನಿಯೋಗಿಸಿ ಎಂದರು.

ರಾಜ್ಯಪಾಲರು ಸಹ ಶಿವಕುಮಾರ್ ದೂರದೃಷ್ಟಿ ಹೊಂದಿದ್ದಾನೆ ಎಂದು ಸಹಕಾರ ನೀಡಿದ್ದಾರೆ. ಬಿಜೆಪಿ ವಿರೋಧ ಪಕ್ಷದ ನಾಯಕ ಅಶೋಕ್ ಅವರು ಸಹ ಉತ್ತಮ ಜನನಾಯಕ. ಅವರು ಸಹ ಇದಕ್ಕೆ ಸಹಕಾರ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ರೂ.1 ಲಕ್ಷ ಕೋಟಿ ಯೋಜನೆಗಳನ್ನು ಬೆಂಗಳೂರಿನ ಅಭಿವೃದ್ದಿಗೆ ಖರ್ಚು ಮಾಡುವ ಆಲೋಚನೆ ಇದೆ ಎಂದು ತಿಳಿಸಿದರು.

# ಶಾಲಾ ಮಕ್ಕಳಿಗೆ ಬಸ್ ಭಾಗ್ಯ

ರಾಜ್ಯ ಸರ್ಕಾರದಿಂದ ಮಹತ್ವದ ಘೋಷಣೆ

## ಕರ್ನಾಟಕ ಸರ್ಕಾರಿ ಶಾಲಾ ಮಕ್ಕಳ ಹಾಜರಾತಿ ಹೆಚ್ಚಳಕ್ಕೆ ಸರ್ಕಾರದ ಮಹತ್ವದ ನಿರ್ಧಾರ...!





**ಕೆಪಿಎಸ್ ಶಾಲೆಗಳ ಗಂಡು ಮಕ್ಕಳಿಗೆ ಉಚಿತ ಬಸ್ ಪಾಸ್ ಇಲ್ಲ**

1 ಸರ್ಕಾರಿ ಶಾಲೆಗಳಲ್ಲಿ ಎಲ್‌ಕೆಜಿಯಿಂದ ಪಿಯುಸಿ ತನಕ ಓದುವ ವಿದ್ಯಾರ್ಥಿಗಳಿಗೆ ಉಚಿತ ಬಸ್ ವ್ಯವಸ್ಥೆ ಆರಂಭ

2 ಬಡವರ ಮಕ್ಕಳಿಗೆ ಶೈಕ್ಷಣಿಕವಾಗಿ ಆರ್ಥಿಕ ಬೆಂಬಲ ನೀಡುವ ಉದ್ದೇಶ

3 170 ಕ್ಕೂ ಹೆಚ್ಚು ಶಾಲೆಗಳಲ್ಲಿ ಶೌಚಾಲಯಗಳ ಕೊರತೆ ಬಗ್ಗೆ ಶಿಕ್ಷಣ ಇಲಾಖೆ ಮಾಹಿತಿ

**ಉಚಿತ ಸಾರಿಗೆ ಭಾಗ್ಯ ಯಾಕೆ...**

- ಕೆಪಿಎಸ್ ಶಾಲೆಗಳಲ್ಲಿ ಓದುವ ಮಕ್ಕಳಿಗೆ ಅನುಕೂಲ ಕಲ್ಪಿಸಲು
- ಎಲ್‌ಕೆಜಿಯಿಂದ ಪಿಯುಸಿ ತನಕ ವಿದ್ಯಾಭ್ಯಾಸ ಮಾಡುವ ಮಕ್ಕಳಿಗೆ ಸದುಪಯೋಗ
- ಬಡವರ ಮಕ್ಕಳಿಗೆ ಶೈಕ್ಷಣಿಕವಾಗಿ, ಆರ್ಥಿಕವಾಗಿ ಬಲ
- ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸರ್ಕಾರದ ದಿಟ್ಟ ಹೆಜ್ಜೆ
- ಮಕ್ಕಳ ಹಾಜರಾತಿ, ಗುಣಮಟ್ಟ ಹೆಚ್ಚಿಸಲು ಮಹತ್ವದ ನಿರ್ಧಾರ

**ಉದ್ದೇಶವೇನು..**

ಸರ್ಕಾರಿ ಶಾಲೆಯ ಮಕ್ಕಳ ಹಾಜರಾತಿ, ಗುಣಮಟ್ಟ ಹೆಚ್ಚಿಸಲು ಸರ್ಕಾರದಿಂದ ಈ ಮಹತ್ವದ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ. ಜತೆಗೆ ಕೆಪಿಎಸ್ ಶಾಲೆಗಳಲ್ಲಿ ಓದುವ ಮಕ್ಕಳಿಗೆ ಅನುಕೂಲ ಕಲ್ಪಿಸಲು ಉಚಿತ ಬಸ್ ವ್ಯವಸ್ಥೆ ಮಾಡಲಾಗಿದೆ. ಎಲ್‌ಕೆಜಿಯಿಂದ ಪಿಯುಸಿ ತನಕ ವಿದ್ಯಾಭ್ಯಾಸ ಮಾಡುವ ಮಕ್ಕಳು ಉಚಿತ ಬಸ್ ವ್ಯವಸ್ಥೆಯನ್ನು ಸದುಪಯೋಗ ಪಡಿಸಬಹುದು ಎಂದು ತಿಳಿಸಿದ್ದಾರೆ. ಅಲ್ಲದೆ ಬಡವರ ಮಕ್ಕಳಿಗೆ ಶೈಕ್ಷಣಿಕ, ಆರ್ಥಿಕವಾಗಿ ಬಲ ನೀಡಲು ಸರ್ಕಾರದಿಂದ ಮಹತ್ವದ ಚಿಂತನೆ ನಡೆದಿದೆ. ಇದು ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸರ್ಕಾರದ ದಿಟ್ಟ ನಿರ್ಧಾರ ಎಂದು ಡಿಕೆಶಿ ತಿಳಿಸಿದ್ದಾರೆ.

• ಉದಯವಾಹಿನಿ, ಬೆಂಗಳೂರು

ಉಚಿತ ಪ್ರಯಾಣದ ಭಾಗ್ಯ ಸರ್ಕಾರಿ ಮಕ್ಕಳಿಗೂ ಸಿಕ್ಕಿದೆ. ಕೆಪಿಎಸ್ ಸರ್ಕಾರಿ ಶಾಲೆಯಲ್ಲಿ ಎಲ್‌ಕೆಜಿ ಯಿಂದ ಪಿಯುಸಿ ತನಕ ಓದುವ ವಿದ್ಯಾರ್ಥಿಗಳಿಗೆ ಸರ್ಕಾರ ಉಚಿತ ಸಾರಿಗೆ ಸೌಲಭ್ಯವನ್ನು ಘೋಷಿಸಿದೆ. ರಾಜ್ಯ ಸರ್ಕಾರದಿಂದ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ.

ಈ ಬಗ್ಗೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಸೋಶಿಯಲ್ ಮೀಡಿಯಾದ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ. ರಾಜ್ಯಾದ್ಯಂತ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಎಲ್'ಕೆಜಿಯಿಂದ ಪಿಯುಸಿ ತನಕ ಓದುವ ವಿದ್ಯಾರ್ಥಿಗಳಿಗೆ ಉಚಿತ ಬಸ್ ವ್ಯವಸ್ಥೆ ಆರಂಭಿಸಲು ರಾಜ್ಯ ಸರ್ಕಾರ ತೀರ್ಮಾನಿಸುವ ಮೂಲಕ ಸರ್ಕಾರಿ ಶಾಲೆಗಳ ಬಲವರ್ಧನೆಗೆ ಪ್ರಮುಖ ಒತ್ತು ನೀಡಲಾಗುತ್ತಿದೆ. ಈ ಕುರಿತು ಡಿಸಿಎಂ ಡಿ.ಕೆ ಶಿವಕುಮಾರ್ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

**ಮಹಿಳೆಯರಿಗೆ ಉಚಿತ ಪ್ರಯಾಣ:** 2023ರ ಕರ್ನಾಟಕ ವಿಧಾನಸಭಾ ಚುನಾವಣೆಗೂ ಮುನ್ನ ನೀಡಿದ್ದ ಭರವಸೆಯಂತೆ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಯಶಸ್ವಿಯಾಗಿ ಜಾರಿಗೊಳಿಸಿದೆ. ಯೋಜನೆಯಡಿ, ಮಹಿಳೆಯರಿಗೆ ಸರ್ಕಾರಿ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಅವಕಾಶವನ್ನು ಕಲ್ಪಿಸಲಾಗಿದೆ. ಆಧಾರ್ ಕಾರ್ಡ್, ವೋಟರ್ ಐಡಿ ಕಾರ್ಡ್ ಹೊಂದಿರುವ ಕರ್ನಾಟಕದ ಮಹಿಳೆಯರು ಇದೀಗ ಉಚಿತ ಪ್ರಯಾಣದ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರದ ಈ ಮಹತ್ವದ ಯೋಜನೆಗೆ ಸುಮಾರು 10 ಕೋಟಿಗೂ ಅಧಿಕ ಖರ್ಚಾಗುತ್ತೆ. ಈ ನಿಟ್ಟನಲ್ಲಿ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಚರ್ಚೆ ಮಾಡಿ ಹಣಕಾಸು ಇಲಾಖೆಯ ಅನುಮತಿಯನ್ನು ಪಡೆದುಕೊಂಡು ಯೋಜನೆ ಜಾರಿಗೆ ತರಲು ಸರ್ಕಾರ ನಿರ್ಧಾರ ಮಾಡಿದೆ.

**ಸರ್ಕಾರಿ ಶಾಲೆಗಳಲ್ಲಿ ದುಸ್ಥಿತಿ:** ಸರ್ಕಾರಿ ಶಾಲೆಗಳಲ್ಲಿ ಸಾಕಷ್ಟು ಸಂಖ್ಯೆಯಲ್ಲಿ ಬಡವರ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಆದರೆ ಸರ್ಕಾರಿ ಶಾಲೆಗಳ ಸ್ಥಿತಿ ಹೀನಾಯವಾಗಿದೆ. ಹಲವು ಸರ್ಕಾರಿ ಶಾಲೆಗಳಲ್ಲಿ ಕುಡಿಯುವ ನೀರು, ಶೌಚಾಲಯದಂತಹ ಮೂಲಭೂತ ಸೌಕರ್ಯವೂ ಇಲ್ಲವಾಗಿದೆ. ಶಿಕ್ಷಣ ಇಲಾಖೆ ನೀಡುವ ಮಾಹಿತಿಯ ಪ್ರಕಾರ, ರಾಜ್ಯದಲ್ಲಿ ಇರುವ ಸರ್ಕಾರಿ ಶಾಲೆಗಳ ಪೈಕಿ 61 ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ.170 ಕ್ಕೂ ಅಧಿಕ ಶಾಲೆಗಳಲ್ಲಿ ಕನಿಷ್ಠ ಶೌಚಾಲಯವೂ ಇಲ್ಲವಾಗಿದೆ.

**ಬಿಎಂಟಿಸಿಗೆ 148 ಹೊಸ ಎಲೆಕ್ಟಿಕ್ ಬಸ್‌ಗಳು ಸೇರ್ಪಡೆ:** ಬಿಎಂಟಿಸಿಗೆ ಹೊಸದಾಗಿ 148 ಟಾಟಾ ಎಲೆಕ್ಟಿಕ್ ಬಸ್‌ಗಳು ಸೇರ್ಪಡೆಗೊಂಡಿವೆ. ಶಾಂತಿನಗರದಲ್ಲಿ ಶುಕ್ರವಾರ ಸಾರಿಗೆ ಸಚಿವ ರಾಮಲಿಂಗರೆಡ್ಡಿ ಹೊಸ ಬಸ್‌ಗಳಿಗೆ ಹಸಿರು ನಿಶಾನೆ ತೋರಿದ್ದಾರೆ.ಒಂದು ಕಿ.ಮೀ. ಗೆ 41.1 ಪೈಸೆ ರೂ. ಗುತ್ತಿಗೆ ಆಧಾರದಲ್ಲಿ ಈ 148 ಬಸ್ ಗಳು ಸಂಚಾರ ಮಾಡಲಿವೆ. ಸದ್ಯ ಬಿಎಂಟಿಸಿಯಲ್ಲಿ ಎಸಿ ವೋಲ್ಬೋ, ಸೇರಿದಂತೆ 6900 ಬಸ್‌ಗಳಿದ್ದು, ಈ 148 ಬಸ್‌ಗಳು ಸೇರ್ಪಡೆಯೊಂದಿಗೆ ಒಟ್ಟು 7,048 ಬಸ್‌ಗಳನ್ನು ಬಿಎಂಟಿಸಿ ಹೊಂದಿದೆ. ಈ ಎಲೆಕ್ನಿಕ್ ಬಸ್‌ಗಳು 12 ವರ್ಷಗಳ ಕಾಲ ನಗರದಲ್ಲಿ ಸಂಚಾರ ಮಾಡಲಿವೆ. ಈ ಬಸ್‌ಗಳಿಗೆ ಕಂಡಕ್ಟರ್ ಬಿಎಂಟಿಸಿ ನಿಗಮದಿಂದ ನೇಮಕ ಮಾಡಿದರೆ, ಡ್ರೈವರ್‌ಗಳು ಎಲೆಕ್ಟಿಕ್ ಬಸ್ ಕಂಪನಿಯಿಂದ ಕೆಲಸ ಮಾಡಲಿದ್ದಾರೆ. ಈ 148 ಬಸ್‌ಗಳು ಬೆಂಗಳೂರಿನ 30 ಮಾರ್ಗಗಳಲ್ಲಿ ಸಂಚಾರ ನಡೆಸಲಿವೆ.

**ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ ಸಾಧ್ಯತೆ**

ಶಾಲಾ ಕಾಲೇಜುಗಳಿಗೆ ಸಾಲು ಸಾಲು ರಜೆಗಳು ಸಿಗುವಂತೆ ಆಗುತ್ತಿದ್ದು, ಒಂದು ಕಡೆ ಇದು ವಿದ್ಯಾರ್ಥಿ ಮುಖದಲ್ಲಿ ಖುಷಿ ಕೊಡುತ್ತಿದ್ದರೆ ಇನ್ನೊಂದು ಕಡೆ ಶಿಕ್ಷಕರು ಪೋಷಕರು ಮಾತ್ರ ಸಾಲು ಸಾಲು ರಜೆಯ ಹಿನ್ನೆಲೆ ಚಿಂತೆ ಮಾಡುವಂತೆ ಆಗಿದೆ. ಹಲವು ಕಾರಣಗಳಿಗೆ ಕರ್ನಾಟಕದ ಹಲವು ಜಿಲ್ಲೆಗಳ ಶಾಲೆಗಳಿಗೆ ಕಾಲೇಜುಗಳಿಗೆ ಈ ವರ್ಷದ ಜೂನ್ ಜುಲೈ ತಿಂಗಳಲ್ಲೇ ರಜೆ ನೀಡಲಾಗಿತ್ತು. ಅಂದಹಾಗೆ ಶಾಲೆ ಕಾಲೇಜುಗಳಿಗೆ ರಜೆ ಘೋಷಣೆ ಮಾಡುವ ವಿಚಾರದಲ್ಲಿ ಸರ್ಕಾರ ಸಾಕಷ್ಟು ಆಲೋಚನೆ ಮಾಡುತ್ತೆ. ಆದರೆ ಅನಿವಾರ್ಯ ಸ್ಥಿತಿ ಇದ್ದಾಗ ಶಾಲೆ ಕಾಲೇಜುಗಳಿಗೆ ರಜೆ ಘೋಷಣೆ ಮಾಡಬೇಕು, ಈಗ ಶಾಲೆ ಕಾಲೇಜುಗಳಿಗೆ ರಜೆ ಘೋಷಣೆ ಮಾಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ.

> ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಎಲ್‌ಕೆಜಿಯಿಂದ ಪಿಯುಸಿ ತನಕ ಓದುವ ವಿದ್ಯಾರ್ಥಿಗಳಿಗೆ ಉಚಿತ ಬಸ್ ವ್ಯವಸ್ಥೆ ಆರಂಭಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ಕೆಪಿಎಸ್ ಶಾಲೆಯ ಗಂಡು ಮಕ್ಕಳಿಗೆ ಉಚಿತ ಬಸ್ ಪಾಸ್ ಇಲ್ಲ. ಶಾಲೆಯಲ್ಲಿ ಓದುವ ಹೆಣ್ಣು ಮಕ್ಕಳಿಗೆ ಈಗಾಗಲೇ ಉಚಿತ ಇದೆ, ಈ ಯೋಜನೆಗೆ 10 ಕೋಟಿ ರೂ.ಹೆಚ್ಚು ಖರ್ಚು ಆಗುತ್ತದೆ.
>
> -ರಾಮಲಿಂಗಾರೆಡ್ಡಿ ಸಾರಿಗೆ ಸಚಿವ



> ಶಿಕ್ಷಣದಿಂದ ಮಕ್ಕಳ ಭವಿಷ್ಯ ಉಜ್ವಲಗೊಳ್ಳಲಿದ್ದು, ಸರ್ಕಾರಿ ಶಾಲಾ ಮಕ್ಕಳ ಭವಿಷ್ಯ ಉಜ್ವಲಕ್ಕೆ ಸರ್ಕಾರ ಬದ್ಧ. ರಾಜ್ಯಾದ್ಯಂತ ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಎಲ್'ಕೆಜಿಯಿಂದ ಪಿಯುಸಿ ತನಕ ಓದುವ ವಿದ್ಯಾರ್ಥಿಗಳಿಗೆ ಉಚಿತ ಬಸ್ ವ್ಯವಸ್ಥೆ ಆರಂಭಿಸಲು ಸರ್ಕಾರ ತೀರ್ಮಾನಿಸುವ ಮೂಲಕ ಸರ್ಕಾರಿ ಶಾಲೆಗಳ ಬಲವರ್ಧನೆಗೆ ಪ್ರಮುಖ ಒತ್ತು ನೀಡಲಾಗುತ್ತಿದೆ.
>
> - ಡಿಕೆ ಶಿವಕುಮಾರ್ ಡಿಸಿಎಂ

# ಬಿಜೆಪಿ, ಆರ್‌ಎಸ್‌ಎಸ್ ವಿರುದ್ಧ ಮಾತನಾಡಿದರೆ ಇ.ಡಿ ದಾಳಿ!: ಪ್ರಿಯಾಂಕ್

● ಕಾಂಗ್ರೇಸ್ ಶಾಸಕ ಸುಬ್ಬಾರೆಡ್ಡಿ ವಿರುದ್ಧದ ಇನ್ಫೋರ್ಸ್‌ಮೆಂಟ್ ಡೈರಕ್ಟರೇಟ್ ದಾಳಿ ರಾಜಕೀಯ ಪ್ರೇರಿತ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಹಾಗೂ ಆರ್‌ಎಸ್‌ಎಸ್ ವಿರುದ್ಧ ಯಾರಾದರು ಮಾತನಾಡಿದರೆ ಅವರ ವಿರುದ್ಧ ಕೂಡಲೇ ಇ.ಡಿ, ಐಟಿ ದಾಳಿಗಳನ್ನು ನಡೆಸಲಾಗುತ್ತಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದರು. ಬೆಂಗಳೂರಿನಲ್ಲಿ ಶುಕ್ರವಾರ ಮಾತನಾಡಿದ ಅವರು, ಕಾಂಗ್ರೇಸ್ ಶಾಸಕ ಸುಬ್ಬಾರೆಡ್ಡಿ ವಿರುದ್ಧದ ಇಡಿ ದಾಳಿ ರಾಜಕೀಯ ಪ್ರೇರಿತ ಎಂದು ಆರೋಪ ಮಾಡಿದರು.

ಐಟಿ, ಇಡಿ, ಸಿಬಿಐ ಕೇಂದ್ರ ಸರ್ಕಾರದ ಕೈಗೊಂಬೆಗಳಾಗಿವೆ. ಕಳೆದ 10 ವರ್ಷಗಳಿಂದ ಎಷ್ಟು ದಾಳಿ ಯಾರ ಮೇಲಾಗಿದೆ ಐಟಿ, ಇಡಿಯನ್ನ ಪೊಲಿಟಿಕಲ್ ಟೂಲ್ ಆಗಿ ಬಳಸಿಕೊಳ್ಳುತ್ತಿದ್ದಾರೆ. ಬಿಜೆಪಿ, ಆರ್‌ಎಸ್ ಎಸ್ ಮೇಲೆ ಮಾತಾಡುವವರ ಮೇಲೆ ದಾಳಿ ಆಗ್ತಿದೆ. ಮಾಧ್ಯಮಗಳದ್ದೇ ಡಾಟಾ ಇದೆ. ಕೇಂದ್ರ ಸರ್ಕಾರ ವಿರೋಧ ಪಕ್ಷದವರ ಮೇಲೆ ಅಟ್ಟಹಾಸ ನಡೆಸುತ್ತಿದೆ ಎಂದರು.



**5 ಕಡೆಗಳಲ್ಲಿ ಇಡಿ ಅಧಿಕಾರಿಗಳು ದಾಳಿ**

ಗುರುವಾರ ಬಾಗೇಪಲ್ಲಿ ಶಾಸಕ ಸುಬ್ಬಾ ರೆಡ್ಡಿ ನಿವಾಸ ಹಾಗೂ ಕಚೇರಿಯ ಮೇಲೆ ಇಡಿ ದಾಳಿಯಾಗಿತ್ತು. ವಿದೇಶದಲ್ಲಿ ವ್ಯವಹಾರ ಸಂಬಂಧಿಸಿದಂತೆ ಇ.ಡಿ ದಾಳಿ ನಡೆಸಿತ್ತು. ಸುಬ್ಬಾರೆಡ್ಡಿ ಅವರಿಗೆ ಸೇರಿದೆನ್ನಲಾದ 5 ಕಡೆಗಳಲ್ಲಿ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದರು.

ಸಚಿವರ ಜೊತೆ ಸುರ್ಜೇವಾಲಾ ಭೇಟಿ ವಿಚಾರವಾಗಿ ಇದೇ ವೇಳೆ ಮಾತನಾಡಿ, ಹೈ ಕಮಾಂಡ್‌ಗೆ ನಾವು ರಿಪೋರ್ಟ್ ಮಾಡಬೇಕು. ಅದನ್ನ ಬಿಟ್ಟು ನಾವು ಆರ್‌ಎಸ್‌ಎಸ್‌ಗೆ ,ಸಂತೋಷ್ ಅವರಿಗೆ ರಿಪೋರ್ಟ್ ಕೊಡೋಕಾಗತ್ತಾ ತಮ್ಮ ಕೆಲಸದ ಬಗೆಗಿನ ವಿಪಕ್ಷದ ಚರ್ಚೆಗೆ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದರು.

ಸಿಎಂ ಬದಲಾವಣೆ ವಿಚಾರವಾಗಿ ಇದೇ ವೇಳೆ ಮಾತನಾಡಿ, ನಾಯಕತ್ವ ಬದಲಾವಣೆ ಅಭಿಪ್ರಾಯವನ್ನೇ ಪಡೆದುಕೊಂಡಿಲ್ಲ ಅಂದ ಮೇಲೆ ಬದಲಾವಣೆ ಎಲ್ಲಿದೆ ಅವರು ಸ್ಪಷ್ಟವಾಗಿ ಹೇಳಿದ್ದಾರೆ.

ನಾನಾಗಲೀ ಡಿ ಕೆ ಶಿವಕುಮಾರ್ ಆಗಲಿ ಹೈ ಕಮಾಂಡ್ ಮಾತಿಗೆ ಬದ್ದ ಎಂದಿದ್ದಾರೆ. ಶಿವಕುಮಾರ್ ಸಿಎಂ ಸೀಟು ಖಾಲಿ ಇಲ್ಲ ಅಂತ ಹೇಳಿದ್ದಾರೆ. ಹೀಗಂದ ಮೇಲೆ ಬದಲಾವಣೆ ಎಲ್ಲಿದೆ ಎಂದು ಪ್ರಶ್ನಿಸಿದರು.

ಸಿಎಂ ಸ್ಥಾನದ ವಿಚಾರವಾಗಿ ಕಾಂಗ್ರೇಸ್‌ನಲ್ಲಿ ಜಟಾಪಟಿ ನಡೆಯುತ್ತಿದೆ. 5 ವರ್ಷ ನಾನೇ ಸಿಎಂ ಎಂದು ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ಈ ನಡುವೆ ಡಿಕೆ ಶಿವಕುಮಾರ್ ಅವರು ಮಾರ್ಮಿಕವಾಗಿ ಹೇಳಿಕೆ ನೀಡುತ್ತಿದ್ದಾರೆ. ಸಿಎಂ ಸ್ಥಾನ ಬದಲಾವಣೆ ವಿಚಾರವಾಗಿ ಕಾಂಗ್ರೇಸ್‌ನಲ್ಲಿ ಸಚಿವರಿಂದ ಭಿನ್ನ ರೀತಿಯ ಅಭಿಪ್ರಾಯಗಳು ವ್ಯಕ್ತವಾಗುತ್ತಿವೆ.

**5 ವರ್ಷ ನಾನೇ ಸಿಎಂ ಎಂದ ಸಿದ್ದರಾಮಯ್ಯ**

ನಾವು ಪಕ್ಷದ ವಿಚಾರಗಳನ್ನ ಮಾಧ್ಯಮಗಳ ಮುಂದೆ ಮಾತನಾಡೋದು ಸರಿ ಅಲ್ಲ. ನಾಯಕತ್ವದ ಬದಲಾವಣೆಯ ಅಭಿಪ್ರಾಯ ಪಡೆದೇ ಇಲ್ಲ ಅಂದಮೇಲೆ ಬದಲಾವಣೆ ಮಾತೆಲ್ಲಿ ಹೈಕಮಾಂಡ್ ಬಹಳ ಸ್ಪಷ್ಟವಾಗಿ ಹೇಳಿದೆ. ರಣದೀಪ್ ಸುರ್ಜೇವಾಲಾ, ಡಿಕೆ ಶಿವಕುಮಾರ್ ಸೇರಿ ಎಲ್ಲರೂ ಹೇಳಿದ್ದಾರೆ.

**ಇಡಿ ದಾಳಿ ರಾಜಕೀಯ ಪ್ರೇರಿತ**

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,900/Gram24ct ₹9,075/Gram22ct | ಬೆಳ್ಳಿ: ₹111.00/Gram

# ಮೂರುದಿನ ಸಸ್ಯ ಸಂತೆ

• ಉದಯವಾಹಿನಿ, ಬೆಂಗಳೂರು

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ವಿದ್ಯಾರಣ್ಯಪುರದಲ್ಲಿರುವ ಪ್ರಾದೇಶಿಕ ತೋಟಗಾರಿಕೆ ಸಂಶೋಧನಾ, ವಿಸ್ತರಣಾ ಕೇಂದ್ರದಲ್ಲಿ ಜುಲೈ 11ರಿಂದ 13ರವರೆಗೆ ಸಸ್ಯ ಸಂತೆಯನ್ನು ಆಯೋಜಿಸಿದೆ. ಈ ಸಸ್ಯ ಸಂತೆಯಲ್ಲಿ ಹಣ್ಣಿನ ಕಸಿ ಸಸಿಗಳು, ತರಕಾರಿ ಬೀಜ, ಔಷಧೀಯ ಮತ್ತು ಸುಗಂಧ ಸಸಿಗಳು ಮತ್ತು ಆಲಂಕಾರಿಕ ಸಸಿಗಳು, ಎರೆಹುಳು ಗೊಬ್ಬರ, ಜೈವಿಕ ಗೊಬ್ಬರ, ಇತರೆ ಸಾವಯವ ಪರಿಕರಗಳು, ಕೀಟನಾಶಕ, ಕೃಷಿ ಉಪಕರಣಗಳು, ಉದ್ಯಾನ ಪರಿಕರಗಳು ಮತ್ತು ಹೂವಿನ ಕುಂಡಗಳು ಸಾವಯವ ಆಹಾರ ಪದಾರ್ಥಗಳ ಮಾರಾಟಕ್ಕೆ ಮಳಿಗೆಗಳನ್ನು ತೆರೆಯಲು ಬಯಸುವವರು 77950 72699, 78920 57925 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಶ್ರೀಕೃಷ್ಣನ ಸನ್ನಿಧಿಯಲ್ಲಿ ಕು|| ದೀಕ್ಷ ಜೋಶಿ ನರ್ತನ ಸೇವೆ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕತ್ರಿಗುಪ್ಪೆ ಮುಖ್ಯ ರಸ್ತೆಯಲ್ಲಿರುವ ಶ್ರೀ ಪೂರ್ಣಪ್ರಜ್ಞ ವಿದ್ಯಾಪೀಠದಲ್ಲಿ ಪರಮ ಪೂಜ್ಯ ಶ್ರೀ ಶ್ರೀ ವಿಶ್ವಪ್ರಸನ್ನತೀರ್ಥರ ಆದೇಶಾನುಸಾರ ಗುರುಪೂರ್ಣಿಮಿ ಪ್ರಯುಕ್ತ ಕೃಷ್ಣ ದೇವಸ್ಥಾನದಲ್ಲಿ ಅಷ್ಟಾವಧಾನ ಸೇವೆಯಲ್ಲಿ ಶ್ರೀ ಗುರುರಾಯರ ಉತ್ಸವದ ಮುಂಭಾಗದಲ್ಲಿ ಪ್ರಭಾತ್ ಆರ್ಟ್ಸ್ ಇಂಟರ್ನ್ಯಾಷನಲ್ ಗುರು ವಿದುಷಿ ಶ್ರೀಮತಿ ಶಕುಂತಲಾ ಇವರ ಶಿಷ್ಯೆ ಕು|| ದೀಕ್ಷಾ ಜೋಶಿ ಭರತನಾಟ್ಯ ಸೇವೆ ಸಲ್ಲಿಸಿದಳು.

# ಒಎನ್‌ಡಿಸಿ ಆಧಾರಿತ ಕ್ಯೂಆರ್ ಟಿಕೆಟ್‌ಗೆ ಚಾಲನೆ

• ಉದಯವಾಹಿನಿ, ಬೆಂಗಳೂರು

ಮೆಟ್ರೊ ರೈಲು ನಿಗಮ ನಿಯಮಿತದ (ಬಿಎಂಆರ್‌ಸಿಎಲ್) ಕ್ಯೂಆರ್ ಟಿಕೆಟ್ ಸೇವೆಗಳನ್ನು ಡಿಜಿಟಲ್ ವಾಣಿಜ್ಯದ ಓಪನ್ ನೆಟ್‌ವರ್ಕ್ (ಒಎನ್‌ಡಿಸಿ) ಪ್ಲಾಟ್ ಫಾರ್ಮ್‌ನಲ್ಲಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಉದ್ಘಾಟಿಸಿದರು. ಲ್ಯಾಪಿಡೊ, ನಮ್ಮ ಯಾತ್ರಿ, ಟಮ್ಮಾಕ್, ರೆಡ್‌ಬಸ್ ಸೇರಿ ಪ್ರಮುಖ ಸಂಚಾರ ಆ್ಯಪ್‌ಗಳಲ್ಲಿ ನೇರವಾಗಿ ಮೆಟ್ರೊ ಕ್ಯೂಆರ್ ಟಿಕೆಟ್ ಪಡೆಯ ಬಹುದು. ಬಿಎಂಆರ್‌ಸಿಎಲ್ ಕಾರ್ಯನಿರ್ವಾಹಕ ನಿರ್ದೇಶಕ ಶಂಕರ್ ಎ.ಎಸ್. ಉಪಸ್ಥಿತರಿದ್ದರು.

# ನೀರು ಕುಡಿಯಲು ಬೈಕ್ ನಿಂದ ಇಳಿದ ಮಹಿಳೆಗೆ ಲಾರಿ ಡಿಕ್ಕಿ; ಸ್ಥಳದಲ್ಲೇ ಸಾವು

• ಉದಯವಾಹಿನಿ, ಬೆಂಗಳೂರು

ಗುರುವಾರ ಮಧ್ಯಾಹ್ನ ಪೀಣ್ಯ ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿಯ ಹೆಸರಘಟ್ಟ ಕ್ರಾಸ್ ನಂತರ 8 ನೇ ಮೈಲಿ ಬಳಿ ಲಾರಿಯೊಂದು 21 ವರ್ಷದ ಮಹಿಳೆಗೆ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತಳನ್ನು ಪೊಲೀಸರು ಲಕ್ಷ್ಮಿ ಎಂದು ಗುರುತಿಸಲಾಗಿದೆ, ಆಕೆಯ ಪತಿ ಮತ್ತು ಆಕೆಯ ಎಂಟು ತಿಂಗಳ ಮಗು ಬದುಕುಳಿದಿದ್ದಾರೆ. ಮಗುವನ್ನು ಎತ್ತಿಕೊಂಡಿದ್ದ ಆಕೆಯ ಪತಿ ಅಂಬರೀಶ್, ಪತ್ನಿ ಸಾಯುವುದನ್ನು ನೋಡಿ ಪ್ರಜ್ಞೆ ತಪ್ಪಿದರು. ಅವರನ್ನು ಕೆಸಿ ಜನರಲ್ ಆಸ್ಪತ್ರೆಗೆ ದಾಖಲಿಸಲಾಯಿತು. ಲಕ್ಷ್ಮಿ ನೀರು ಕುಡಿಯಲು ಬಯಸಿದ್ದರಿಂದ ನೆಲಮಂಗಲಕ್ಕೆ ಹೋಗುವ ದಾರಿಯಲ್ಲಿ ಕುಟುಂಬ ದ್ವಿಚಕ್ರ ವಾಹನ ನಿಲ್ಲಿಸಿತ್ತು.

ಮದ್ಯದ ಅಮಲಿನಲ್ಲಿದ್ದ ಲಾರಿ ಚಾಲಕ, ಮಹಿಳೆ ನೀರು ಕುಡಿಯುತ್ತಿದ್ದಾಗ ಆಕೆಯ ಮೇಲೆ ಲಾರಿ ಹರಿಸಿದ್ದಾನೆ. ಆಕೆಯ ಪತಿ ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಲಾರಿ ಚಾಲಕ ತಪ್ಪಿಸಿಕೊಳ್ಳಲು ಪ್ರಯತ್ನಿಸಿದನು, ಆದರೆ ದಾರಿಹೋಕರು ಬೆನ್ನಟ್ಟಿ ಆತನನ್ನು ಹಿಡಿದಿದ್ದಾರೆ. ನಂತರ ಅವರು ಟ್ರಕ್ ಮೇಲೆ ಕಲ್ಲು ಎಸೆದರು. ಹರಿಯಾಣದ ಚಾಲಕ ಮೊಹಮ್ಮದ್ ಎಂಬಾಕನನ್ನು ಪೊಲೀಸರು ಬಂಧಿಸಿದರು. ಆರಂಭದಲ್ಲಿ, ನೆಲಮಂಗಲ ಕಡೆಗೆ ಹೋಗುತ್ತಿದ್ದಾಗ ಟ್ರಕ್ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದೆ ಎಂದು ಪೊಲೀಸರು ಭಾವಿಸಿದ್ದರು. ಆದರೆ ಚೇತರಿಸಿಕೊಂಡ ನಂತರ, ಅಂಬರೀಶ್ ಪೊಲೀಸರಿಗೆ ತಿಳಿಸಿದ್ದು, ಪತ್ನಿ ನೀರು ಕುಡಿಯಲು ಬಯಸಿದ್ದರಿಂದ ದ್ವಿಚಕ್ರ ವಾಹನ ನಿಲ್ಲಿಸಿದ್ದೆವು ಎಂದು ತಿಳಿಸಿದ್ದಾರೆಯ. ಆ ಕುಟುಂಬ ತುಮಕೂರಿನವರು. ಅಂಬರೀಶ್ ನೆಲಮಂಗಲ ಬಳಿಯ ಕಾಲೇಜಿನಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

# 5 ವರ್ಷದ ನಂತ್ರ ಟ್ರಸ್ಟ್‌ಗೆ ವಾಪಸ್: ಇಲಾಖೆ ಸಚಿವ ರಾಮಲಿಂಗಾರೆಡ್ಡಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಗರದ ಪ್ರತಿಷ್ಠಿತ ಗಾಳಿ ಆಂಜನೇಯ ದೇಗುಲವನ್ನು ಮುಜುರಾಯಿ ಇಲಾಖೆ ಸುಪರ್ದಿಗೆ ತೆಗೆದುಕೊಂಡ ನಂತರ ದೇವಸ್ಥಾನದ ಆಡಳಿತ ಮಂಡಳಿ ಸಿಡಿದೆದ್ದಿದೆ. ಈ ಬೆನ್ನಲ್ಲೇ ಇದು ತಾತ್ಕಾಲಿಕ, 5 ವರ್ಷದ ನಂತರ ದೇಗುಲವನ್ನು ಟ್ರಸ್ಟ್‌ಗೆ ವಾಪಸ್ ಕೊಡುತ್ತೇವೆ ಎಂದು ಮುಜರಾಯಿ ಇಲಾಖೆ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಗಾಳಿ ಆಂಜನೇಯ ಸ್ವಾಮಿ ದೇಗುಲದಲ್ಲಿ ಹಣ ದುರುಪಯೋಗ ಆಗಿದೆ. ಹೀಗಾಗಿ ಈ ಕ್ರಮ ಆಗಿದೆ. ಇದು ತಾತ್ಕಲಿಕ ಅಷ್ಟೇ. 5 ವರ್ಷದ ಬಳಿಕ ದೇಗುಲವನ್ನು ಮಂಡಳಿಗೆ ವಾಪಸ್ ಕೊಡುತ್ತೇವೆ. ಮುಜರಾಯಿ ಇಲಾಖೆ ಸಲ್ಲಿಸಿದ ವರದಿಯಲ್ಲಿ ಹಣಕಾಸಿನ ಲೆಕ್ಕವಿಲ್ಲ. ಯಾವುದೇ ದೇವಸ್ಥಾನದಲ್ಲಿ ಹಣಕಾಸಿನ ದುರುಪಯೋಗ ಆದರೆ ಅದನ್ನು ವಶಕ್ಕೆ ಪಡೆದುಕೊಳ್ಳುವ ಅಧಿಕಾರ ಸರ್ಕಾರಕ್ಕಿದೆ. ಈ ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿಯೂ ಸುಮಾರು 10 ದೇವಾಲಯಗಳನ್ನು ವಶಕ್ಕೆ ಪಡೆದುಕೊಂಡಿತ್ತು ಎಂದು ಹೇಳಿದರು. ಗುರುವಾರ ಮುಜರಾಯಿ ಇಲಾಖೆಯು ಐತಿಹಾಸಿಕ ಗಾಳಿ ಆಂಜನೇಯ ಸ್ವಾಮಿ ದೇಗುಲವನ್ನು ತನ್ನ ವಶಕ್ಕೆ ಪಡೆದುಕೊಂಡು ಆದೇಶ ಹೊರಡಿಸಿತ್ತು. ಕಳೆದ ವರ್ಷ ದೇವಸ್ಥಾನದ ಹುಂಡಿ ಹಣ ಎಣಿಸುವಾಗಲೇ ಆಡಳಿತ ಮಂಡಳಿಯ ಸದಸ್ಯರು ಹಣ ಎಗರಿಸಿದ್ದರು. ಹಣ ಎಗರಿಸುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿತ್ತು. ಈ ಘಟನೆಯ ಬಗ್ಗೆ ವರದಿ ನೀಡುವಂತೆ ರಾಜ್ಯ ಸರ್ಕಾರ ಮುಜರಾಯಿ ಇಲಾಖೆಗೆ ಸೂಚನೆ ನೀಡಿತ್ತು.

ಇದೀಗ ಮುಜರಾಯಿ ಇಲಾಖೆ ರಾಜ್ಯ ಸರ್ಕಾರಕ್ಕೆ ವರದಿ ನೀಡಿದೆ. ವರದಿಯಲ್ಲಿ ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನವನ್ನು ಮುಜರಾಯಿ ಇಲಾಖೆಗೆ ವರ್ಗಾವಣೆಗೆ ಶಿಫಾರಸು ಮಾಡಿತ್ತು. ಇದನ್ನು ಒಪ್ಪಿದ ಸರ್ಕಾರ 1997ರ 42 ಮತ್ತು 43ರನ್ವಯ ಘೋಷಿತ ಸಂಸ್ಥೆ ಅಂತ ಘೋಷಣೆ ಮಾಡಿತ್ತು. ಈ ಆದೇಶದ ಬೆನ್ನಲ್ಲೇ ದೇವಸ್ಥಾನದ ಟ್ರಸ್ಟಿಗಳು ಸರ್ಕಾರದ ವಿರುದ್ಧ ಸಿಡಿದೆದ್ದಿದ್ದರು.

ದೇವಸ್ಥಾನವನ್ನು ಸರ್ಕಾರ ಸುಪರ್ದಿಗೆ ತೆಗೆದುಕೊಂಡಿದ್ದು ಸರಿಯಲ್ಲ ಎಂದು ಹೇಳಿ ದೇವಸ್ಥಾನದ ಆಡಳಿತ ಮಂಡಳಿ 12 ಗಂಟೆಗೆ ತುರ್ತು ಸಭೆ ಕರೆದಿತ್ತು. ಸಭೆ ಬಳಿಕ ನಾವು ಕಾನೂನು ಹೋರಾಟ ಮಾಡುವ ಸಾಧ್ಯತೆಯಿದೆ ಎಂದು ಎಚ್ಚರಿಸಿತ್ತು.

# ಭಾರವಾದ ಮನಸ್ಸಿನಿಂದ ದೆಹಲಿಯಿಂದ ಡಿಕೆಶಿ ವಾಪಸ್

## ಮಾಧ್ಯಮದವರು ಎಷ್ಟೇ ತಿರುಗಿಸಿ ಕೇಳಿದರೂ ನಾಯಕತ್ವ ಬದಲಾವಣೆ ವಿಚಾರದಲ್ಲಿ ಪ್ರತಿಕ್ರಿಯೆ ನೀಡಲ್ಲ

- ಪಕ್ಷ ನನಗೆ ಸಂಘಟನೆ ಜವಾಬ್ದಾರಿ ಹಾಗೂ ಡಿಸಿಎಂ ಸ್ಥಾನ ನೀಡಿದೆ – ಡಿಕೆ ಶಿವಕುಮಾರ್
- ಪ್ರಶ್ನೆಗಳಿಗೆ ಉತ್ತರವಿಲ್ಲ, ನನ್ನ ಗಮನ ಅವುಗಳತ್ತ ಮಾತ್ರ ಇದೆ ಎಂದ ಡಿಸಿಎಂ ಡಿ.ಕೆ. ಶಿವಕುಮಾರ್

• ಉದಯವಾಹಿನಿ, ಬೆಂಗಳೂರು



ಪಕ್ಷ, ನನಗೆ ಸಂಘಟನೆ ಹಾಗೂ ಡಿಸಿಎಂ ಹುದ್ದೆ ನೀಡಿದ್ದು, ನನ್ನ ಗಮನ ಪಕ್ಷ ಹಾಗೂ ಸರ್ಕಾರದ ಹಿತಾಸಕ್ತಿ ಕಾಪಾಡುವುದರತ್ತ ಮಾತ್ರ ಇದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ತಿಳಿಸಿದರು. ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಕೆಪಿಸಿಸಿ ಕಚೇರಿ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿದರು.

ನಾಯಕತ್ವ ಬದಲಾವಣೆ ವಿಚಾರವಾಗಿ ಹೈಕಮಾಂಡ್ ಹೇಳುವ ಮುನ್ನ ಸಿದ್ದರಾಮಯ್ಯ ಅವರು ಹೇಳಿಕೆ ಕೊಟ್ಟಿರುವುದು ಎಷ್ಟು ಸರಿ ಎಂದು ಕೇಳಿದಾಗ, ನೀವು ನನಗೆ ಹೇಗೆ ತಿರುಗಿಸಿ ಕೇಳಿದರೂ ನಾನಂತೂ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ನಿಮಗೆ ಬಲಿಯಾಗುವುದಿಲ್ಲ. ನಿಮ್ಮ ಪ್ರಶ್ನೆಗಳಲ್ಲೇ ಉತ್ತರವಿದೆ ಎಂದಷ್ಟೇ ಡಿಕೆ ಶಿವಕುಮಾರ್ ಹೇಳಿದ್ದಾರೆ. ಪಕ್ಷ ಕೊಟ್ಟಿರುವ ಜವಾಬ್ದಾರಿ ಮುಂದುವರಿಸಿಕೊಂಡು ಹೋಗುತ್ತೇನೆ. ಮಲ್ಲಿಕಾರ್ಜುನ ಖರ್ಗೆ ಅವರು ನಮಗೆ ಧೀಕ್ಷೆ ನೀಡಿದ್ದು, ನಾವೆಲ್ಲರೂ ಅದನ್ನು ಸಂತೋಷವಾಗಿ ಸ್ವೀಕರಿಸಿದ್ದೇವೆ.

ಇದರ ಹೊರತಾಗಿ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ನಾವು ಸುರ್ಜೆವಾಲ ಅವರ ಹೊರತಾಗಿ ಬೇರೆ ಯಾವುದೇ ಹೈಕಮಾಂಡ್ ನಾಯಕರನ್ನು ಭೇಟಿಯಾಗಿಲ್ಲ ಎಂದು ಡಿಕೆ ಶಿವಕುಮಾರ್ ಸ್ಪಷ್ಟ ಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ ಆದಿಯಾಗಿ ಹಲವು ಸಚಿವರುಗಳು ದೆಹಲಿಯಲ್ಲಿ ಬೀಡು ಬಿಟ್ಟಿದ್ದರು. ಸಿಎಂ ದೆಹಲಿಗೆ ತಲುಪುವ ಮುನ್ನವೇ ಡಿಕೆ ಶಿವಕುಮಾರ್ ಅವರು ದೆಹಲಿಯಲ್ಲಿ ಪ್ರಿಯಾಂಕ ಗಾಂಧಿ ವಾದ್ರಾ ಅವರನ್ನು ಭೇಟಿಯಾಗಿದ್ದರು. ರಾಹುಲ್ ಗಾಂಧಿ ಭೇಟಿಗಾಗಿ ಸಿಎಂ, ಡಿಸಿಎಂ ಕಾಯುತ್ತಿದ್ದರು. ಆದರೆ, ಅವರ ಭೇಟಿಯಾಗಲು ಸಾಧ್ಯವಾಗಿಲ್ಲ. ನಾನು ಪಕ್ಷದ ರಾಜ್ಯ ಅಧ್ಯಕ್ಷ. ಪಕ್ಷ ಏನು ಹೇಳುತ್ತದೆಯೋ ಅದನ್ನು ಮಾಡುತ್ತೇನೆ. ನಾನು ನಿನ್ನೆ ಬ್ಯುಸಿ ಇದ್ದೆ.

ಅದರ ಮಧ್ಯೆ ಮುಖ್ಯಮಂತ್ರಿಗಳ ಹೇಳಿಕೆ ನೋಡಿದೆ. ನಿಮ್ಮ ಪ್ರಶ್ನೆಗಳಿಗೆ ಅವರೇ ಉತ್ತರ ನೀಡಿದ್ದಾರೆ. ಅವರು ಉತ್ತರ ನೀಡಿದ ಮೇಲೆ ನಾವು ಮತ್ತೆ ಆ ವಿಚಾರ ಚರ್ಚೆ ಮಾಡುವುದು ಸೂಕ್ತವಲ್ಲ. ನೀವುಗಳು ಸಹ ಮತ್ತೆ ಆ ವಿಚಾರವಾಗಿ ಪ್ರಶ್ನೆ ಮಾಡುವುದು ಸೂಕ್ತವಲ್ಲ ಎಂದು ಹೇಳಿದರು. ಡಿಕೆ ಶಿವಕುಮಾರ್ ಅವರಿಗೆ ಶಾಸಕರ ಬೆಂಬಲವಿಲ್ಲ ಎನ್ನುವ ಸಿಎಂ ಹೇಳಿಕೆಗೆ ಡಿಕೆಶಿ ಈ ರೀತಿ ಪ್ರತಿಕ್ರಿಯೆಯನ್ನು ನೀಡಿದ್ದಾರೆ. ನಿಮ್ಮಲ್ಲೂ ಅನೇಕರಿಗೆ ಅನೇಕ ಆಸೆ ಇರುತ್ತವೆ. ನಾನು ಈ ವಿಚಾರವಾಗಿ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ಅದರ ಅವಶ್ಯಕತೆ ಇಲ್ಲ. ಯಾರು ಏನೇನು ಮಾತನಾಡಿದ್ದಾರೆ, ಅವರೇ ಪ್ರಶ್ನೆ ಉತ್ತರ ಎಲ್ಲವನ್ನು ನೀಡಿದ್ದಾರೆ.

> ರಾಜ್ಯ ಉಸ್ತುವಾರಿಗಳ ಜೊತೆ ನಮ್ಮ ಕಾರ್ಯಕರ್ತರಿಗೆ ಕೆಲವು ಸ್ಥಾನಮಾನ ನೀಡುವ ಬಗ್ಗೆ ಚರ್ಚೆ ಮಾಡಲಾಗಿದೆ. ಎಲ್ಲಾ ಶಾಸಕರು ತಮ್ಮ ಅಭಿಪ್ರಾಯ ಸಲ್ಲಿಸಿದ್ದಾರೆ. ಸಚಿವರ ಅಭಿಪ್ರಾಯ ಸಂಗ್ರಹಿಸಬೇಕಿದೆ. ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಪಕ್ಷ ಸಂಘಟನೆ ವಿಚಾರದಲ್ಲಿ ಶ್ರಮಿಸಿರುವವರಿಗೆ ಹಾಗೂ ಕೆಲವರಿಗೆ ನಾವು ಕೊಟ್ಟಿರುವ ಮಾತಿಗೆ ಬದ್ಧವಾಗಿ ಸ್ಥಾನಮಾನ ನೀಡಬೇಕಿದೆ. ಈ ಪ್ರಕ್ರಿಯೆ ಈಗಾಗಲೇ ತಡವಾಗಿದೆ. ಇದು ಅಂತಿಮ ಹಂತಕ್ಕೆ ಬಂದಿದೆ. ಅಧ್ಯಕ್ಷನಾಗಿ ನಾನು ಪಕ್ಷದ ಸಂಘಟನೆಗೆ ಶ್ರಮಿಸಿದವರ ಹೆಸರನ್ನು ಸೇರಿಸಿ ಇದರ ಪ್ರಸ್ತಾವನೆಯನ್ನು ಮತ್ತೊಮ್ಮೆ ದೆಹಲಿಗೆ ಕಳುಹಿಸಿ ಅನುಮತಿ ಪಡೆಯಲಾಗುವುದು ಎಂದು ಡಿಕೆ ಶಿವಕುಮಾರ್ ಹೇಳಿದರ

> 2028ರ ಚುನಾವಣೆಗೂ ನನ್ನದೇ ನಾಯಕತ್ವ ಎಂಬ ಸಿದ್ದರಾಮಯ್ಯ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಅದು ಅವರ ವೈಯಕ್ತಿಕ ಹೇಳಿಕೆ. ಅದನ್ನು ಹೇಳುವ ಸಂಪೂರ್ಣ ಅಧಿಕಾರ ಅವರಿಗಿದೆ. ಪಕ್ಷದ ಅಧ್ಯಕ್ಷನಾಗಿ ಪಕ್ಷ ಸಂಘಟನೆ ಮಾಡುವುದು ನನ್ನ ಜವಾಬ್ದಾರಿ. ಪಕ್ಷ ಹಾಗೂ ಸರ್ಕಾರದ ಹಿತಾಸಕ್ತಿ ಕಾಯುವುದು ನನ್ನ ಗುರಿ ಎಂದು ಡಿಕೆ ಶಿವಕುಮಾರ್ ಸ್ಪಷ್ಟ ಪಡಿಸಿದರು.

# ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗಬೇಕು: ಸಚಿವ ಸತೀಶ್ ಜಾರಕಿಹೊಳಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಿದ್ದರಾಮಯ್ಯ ನೇತೃತ್ವದಲ್ಲೇ ಮುಂದಿನ ಚುನಾವಣೆ ನಡೆಯುತ್ತದೆ ಎಂದು ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು. ಈ ಕುರಿತು ನಗರದಲ್ಲಿಂದು ಮಾತನಾಡಿದ ಅವರು, ಎಲ್ಲವೂ ನಿನ್ನೆಗೆ ಮುಗಿದು ಹೋಯ್ತಲ್ಲ. ಸುಪ್ರೀಂ ಕೋರ್ಟ್‌ನಿಂದಲೇ ಜಡ್ಜ್‌ಮೆಂಟ್ ಬಂದಿದೆ. ಇನ್ನು ಅದರ ಬಗ್ಗೆ ಮಾತನಾಡೋದೇನಿದೆ. ಕ್ಲಿಯರ್ ಆಗಿದೆ. 2028ರವರೆಗೆ ನಾನೇ ಸಿಎಂ ಅಂದಿದ್ದಾರೆ.

2028ರ ನಂತರವೂ ಅವರೇ ಲೀಡ್ ಮಾಡ್ತಾರೆ. ಅವರೇ ಸಿಎಂ ಆಗ್ತಾರೆ ಅಂತ ಹೇಳಲ್ಲ. ಸಿದ್ದರಾಮಯ್ಯ ರಾಜಕೀಯದಲ್ಲಿ ಇರುತ್ತಾರೆ. ಅವರ ನೇತೃತ್ವದಲ್ಲೇ ಚುನಾವಣೆ ನಡೆಯುತ್ತದೆ. 2028ರ ಚುನಾವಣೆಗೆ ಅವರು ನಿಲ್ಲಲ್ಲ ಅಂದಿದ್ದಾರೆ. ಅಲ್ಲಿಯವರೆಗೆ ಸಿಎಂ ಚರ್ಚೆ ಇಲ್ಲ. ಸಿಎಂ ಹೇಳಿದ ಮೇಲೆ ಮುಗೀತು ಎಂದರು.

ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗಬೇಕು. ಈ ಬಗ್ಗೆ ಸಾಕಷ್ಟು ಬಾರಿ ಹೇಳಿದ್ದೇವೆ.

ಪದೇ ಪದೇ ಹೇಳುವ ಅವಶ್ಯಕತೆ ಇಲ್ಲ. ಎಲ್ಲವನ್ನೂ ಹೈಕಮಾಂಡ್ ಗಮನಿಸುತ್ತಿದೆ. ನಾಯಕರು ಸೂಕ್ತ ನಿರ್ಧಾರ ಮಾಡ್ತಾರೆ.

ನಾವು 2028ಕ್ಕೆ ಸಿಎಂ ಆಕಾಂಕ್ಷಿ ಅಂತ ಹೇಳಿದ್ದೇವೆ. ಅದರಲ್ಲಿ ತಪ್ಪೇನಿದೆ. ಈಗ ಸಿಎಂ ಬದಲಾವಣೆ ಇಲ್ಲ ಅಂತ ತೀರ್ಪು ಬಂದಿದೆ. ಸುಪ್ರೀಂನಿಂದಲೇ ಬಂದ ಮೇಲೆ ಇನ್ನೇನಿದೆ. ಡಬಲ್ ಬೆಂಚ್‌ಗೆ ಹೋಗೋಕೆ ಅವಕಾಶವಿದೆ. ಈಗ ಎಲ್ಲವೂ ಸ್ಟಾಪ್ ಆಗಿದೆ. ನೀವು ಹೆಚ್ಚು ಮಾಡಿದ್ರೆ ಹೆಚ್ಚಾಗುತ್ತದೆ. ಇಲ್ಲ ಎಲ್ಲವೂ ಅಲ್ಲಿಗೆ ಮುಗಿದು ಹೋಗುತ್ತದೆ ಎಂದು ಹೇಳಿದರು.

> ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿರುವ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಭೇಟಿ ಮಾಡಿ ನಿನ್ನೆ ಹೇಳಿದ್ದೇನೆ. ಮತ್ತೆ ಹೇಳುವುದೇನಿಲ್ಲ. ನಿನ್ನೆ ಊಟಕ್ಕೆ ಸೇರಿದ್ವಿ, ವಿಶೇಷ ಏನಿಲ್ಲ. ಹಿಂದೆ ಕೂಡ ಖರ್ಗೆ ಭೇಟಿ ಮಾಡಿದ್ದೆವು. ನಾವು ಆಗಾಗ ಭೇಟಿ ಮಾಡುತ್ತಿರುತ್ತೇವೆ. ಪಕ್ಷದ ಅಧ್ಯಕ್ಷರು ಅಂದ ಮೇಲೆ ಭೇಟಿ ಮಾಡಬೇಕಲ್ಲ. ಭೇಟಿ ವೇಳೆ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಚರ್ಚೆ ಆಗಿಲ್ಲ. ಸಮಯ ಬಂದಾಗ ಹೈಕಮಾಂಡ್ ಮಾಡಲಿದೆ. ನಾವು ಈಗಾಗಲೇ ಹೇಳಬೇಕಾದ್ದನ್ನು ಹೇಳಿದ್ದೇವೆ ಎಂದು ತಿಳಿಸಿದರು.

# ಮಹಾನಗರ ಪಾಲಿಕೆ ನೌಕರರ ಬೇಡಿಕೆಗಳ ಸರ್ಕಾರದಿಂದ ಈಡೇರಿಸಲು ವಿಫಲ, ಹತ್ತು ಮಹಾನಗರ ಪಾಲಿಕೆ ಅನಿರ್ದಿಷ್ಟಾವಧಿ ಹೋರಾಟ ಮುಂದುವರಿಕೆ



• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘಗಳ ಪರಿಷತ್ತು ವತಿಯಿಂದ ವಿವಿಧ ನ್ಯಾಯಯುತ ಬೇಡಿಕೆಗಳ ಈಡೇರಿಕೆಗಾಗಿ ಇಂದು ನಗರಾಭಿವೃದ್ಧಿ ಕಾರ್ಯದರ್ಶಿಗಳ ಜೊತೆಯಲ್ಲಿ ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘಗಳ ಪರಿಷತ್ತು ರಾಜ್ಯಾಧ್ಯಕ್ಷರಾದ ಎ.ಅಮೃತ್ ರಾಜ್ ರವರು, ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೆ.ಷಡಕ್ಷರಿರವರು, ಸಚಿವಾಲಯ ನೌಕರರ ಸಂಘದ ಅಧ್ಯಕ್ಷರಾದ ರಮೇಶ್ ಸಂಗಾರವರು ಮತ್ತು ಹತ್ತು ಮಹಾನಗರ ಪಾಲಿಕೆ ಅಧ್ಯಕ್ಷರು, ಪದಾಧಿಕಾರಿಗಳ ಜೊತೆಯಲ್ಲಿ ಚರ್ಚೆ ಜರುಗಿತು.

ಮಹಾನಗರ ಪಾಲಿಕೆ ನೌಕರರ ಸಂಘದ ನ್ಯಾಯಯುತ ಬೇಡಿಕೆಗಳು ಈಡೇರಿಸಲು ಸರ್ಕಾರ ವಿಫಲವಾಗಿದೆ, ಕಾರ್ಯದರ್ಶಿಗಳ ಜೊತೆಯಲ್ಲಿ ನಡೆದ ಚರ್ಚೆ ಯಾವುದೇ ಫಲಪ್ರದವಾಗಿಲ್ಲ ಅದ್ದರಿಂದ ಅನಿರ್ದಿಷ್ಟಾವಧಿ ಮುಷ್ಕರ ಮುಂದುವರೆಯಲಿದೆ

**ಬೇಡಿಕೆಗಳು:** 7ನೇ ವೇತನ ಆಯೋಗದ ವರದಿ ಮಹಾನಗರ ಪಾಲಿಕೆ ನೌಕರರಿಗೆ ವಿಸ್ತರಣೆ, ವೃಂದ ಮತ್ತು ನೇಮಕಾತಿಯಲ್ಲಿ ತಿದ್ದುಪಡಿ ಹಾಗೂ ಕೆಜಿಐಡಿ ಮತ್ತು ಜಿಪಿಎಫ್ ಸೌಲಭ್ಯ ಹಾಗೂ ಆರೋಗ್ಯ ಸಂಜೀವಿನಿ ಯೋಜನೆ ಜಾರಿಯಾಗಬೇಕು. ಮಹಾನಗರ ಪಾಲಿಕೆ ಅಧಿಕಾರಿ ಮತ್ತು ನೌಕರರಿಗೆ ಪ್ರತಿವರ್ಷ ಕ್ರೀಡಾಕೂಟ ಆಯೋಜನೆ ಮಾಡಬೇಕು. ಮಹಾನಗರ ಪಾಲಿಕೆಯಲ್ಲಿ ಹಲವಾರು ವರ್ಷಗಳಿಂದ ಮುಂಬಡ್ತಿ ನೀಡಿಲ್ಲ ಇಷ್ಟು ನ್ಯಾಯಯುತ ಬೇಡಿಕೆಗಳು ಹುಬ್ಬಳ್ಳಿ–ಧಾರವಾಡ, ತುಮಕೂರು, ಮಂಗಳೂರು, ಶಿವಮೊಗ್ಗ, ದಾವಣಗೆರೆ, ಮೈಸೂರು, ವಿಜಯಪುರ ಹಾಗೂ ಕಲಬುರಗಿ, ಬೆಳಗಾಂ, ಬಳ್ಳಾರಿ ಮಹಾನಗರ ಪಾಲಿಕೆಗಳು ಹೋರಾಟ ಮುಂದುವರೆಯಲಿದೆ

# ಕೇಂದ್ರ ವಿಭಾಗದ ಸಿಇಎನ್ ಠಾಣೆಯಲ್ಲಿ ಎಫ್‌ಐಆರ್

• ಉದಯವಾಹಿನಿ, ಬೆಂಗಳೂರು

ಉಪ ಲೋಕಾಯುಕ್ತರಿಗೆ ಸೈಬರ್ ವಂಚಕರು ವಂಚಿಸಲು ಯತ್ನಿಸಿರುವ ಘಟನೆ ನಡೆದಿದೆ. ಜುಲೈ 9 ರಂದು ಉಪ ಲೋಕಾಯುಕ್ತ ಕೆ.ಎನ್. ಫಣೀಂದ್ರ ಅವರಿಗೆ ಕರೆ ಮಾಡಿದ್ದ ಅಪರಿಚಿತರು ಬೆದರಿಸಲು ಯತ್ನಿಸಿದ್ದು, ಬೆಂಗಳೂರು ಕೇಂದ್ರ ವಿಭಾಗದ ಸಿಇಎನ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಉಪ ಲೋಕಾಯುಕ್ತ ಕೆ.ಎನ್. ಫಣೀಂದ್ರ ಅವರಿಗೆ ಕರೆ ಮಾಡಿದ್ದ ಅಪರಿಚಿತರು, ಹಿರಿಯ ಕಾನೂನು ಸಲಹೆಗಾರ ದೀಪಕ್ ಕುಮಾರ್ ಶರ್ಮಾ ಹಾಗೂ ಕಿರಿಯ ಕಾನೂನು ಸಲಹೆಗಾರ ರಾಹುಲ್ ಕುಮಾರ್ ಶರ್ಮಾ ಎಂದು ಪರಿಚಯಿಸಿಕೊಂಡಿದ್ದರು. ಮುಂಬೈನಲ್ಲಿರುವ ಭಾರತೀಯ ದತ್ತಾಂಶ ಸಂರಕ್ಷಣಾ ಮಂಡಳಿಯಿಂದ ಕರೆ ಮಾಡುತ್ತಿದ್ದು, ನಿಮ್ಮ ಆಧಾರ್‌ಗೆ ಲಿಂಕ್ ಆಗಿರುವ ಫೋನ್ ನಂಬರ್‌ನಿಂದ ಕಾನೂನು ಬಾಹಿರ ಚಟುವಟಿಕೆಗಳು ನಡೆಯುತ್ತಿವೆ ಎಂದಿದ್ದಾರೆ. ಅದಕ್ಕೆ 'ನೋಟೀಸ್ ಕಳುಹಿಸಿ ಕೊಡಿ ಎಂದು ತಾವು ಸೂಚಿಸಿದ್ದು, ಕರೆಯ ಕುರಿತು ಅನುಮಾನವಿದೆ ಎಂದು ಉಪ ಲೋಕಾಯುಕ್ತರು ದೂರು ನೀಡಿದ್ದಾರೆ.

# ಹಡಪದ ಅಪ್ಪಣ್ಣರ ವಚನ, ಚಿಂತನೆ ದಾರಿದೀಪ: ಸಚಿವ ಶಿವರಾಜ ತಂಗಡಗಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಶಿವಶರಣ ಹಡಪದ ಅಪ್ಪಣ್ಣ ಅವರ ವಚನಗಳು ಹಾಗೂ ಚಿಂತನೆಗಳು ಮನುಕುಲದ ಉದ್ಧಾರಕ್ಕೆ ದಾರಿದೀಪಗಳಾಗಿವೆ' ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಹೇಳಿದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಗರದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಹಡಪದ ಅಪ್ಪಣ್ಣ ಜಯಂತಿ ಸಮಾರಂಭಉದ್ಘಾಟಿಸಿ, ಮಾತನಾಡಿದರು. ವಚನ ಸಾಹಿತ್ಯ ಚಳವಳಿಯು ಕರ್ನಾಟಕದ ಇತಿಹಾಸದಲ್ಲಿ ಮರೆಯಲಾರದ ಮತ್ತು ಮರೆಯಬಾರದ ಪ್ರಮುಖ ಚಳವಳಿಯಾಗಿದೆ.

ಸಮಾಜದಲ್ಲಿನ ತಾರತಮ್ಯಗಳನ್ನು ನಿವಾರಿಸಲು ತಮ್ಮದೇ ಆದ ಕೊಡುಗೆಯನ್ನು ನೀಡಿದ ಬಸವಾದಿ ಶರಣರು, ಸಮಾಜದಲ್ಲಿ ಹರಡಿದ್ದ ಅಜ್ಞಾನ, ಮೂಢನಂಬಿಕೆಗಳನ್ನು ಕಿತ್ತೊಗೆಯಲು ಶ್ರಮಿಸಿದರು. ಬಸವಣ್ಣನವರ ಅನುಯಾಯಿಯಾಗಿದ್ದ ಹಡಪದ ಅಪ್ಪಣ್ಣ ಅವರು, ತಮ್ಮ ವಚನಗಳ ಮೂಲಕ ಸಮಾಜ ಸುಧಾರಣೆಗೆ ಶ್ರಮಿಸಿದ ಮಹಾನ್ ಶರಣರಾಗಿದ್ದಾರೆ ಎಂದರು. ಬಸವಣ್ಣನವರ ಕ್ರಾಂತಿಕಾರಿ ಆಲೋಚನೆಗಳನ್ನು ಅತ್ಯಂತ ಸ್ಪಷ್ಟವಾಗಿ ಅರ್ಥೈಸಿಕೊಂಡು, ಅಂತೆಯೇ ನಡೆಯುತ್ತಿದ್ದ ಅಪ್ಪಣ್ಣನವರು ಬಸವಣ್ಣ ಅವರ ಆಪ್ತ ಕಾರ್ಯದರ್ಶಿಯಾಗಿದ್ದರು ಎಂದು ಅಭಿಪ್ರಾಯಪಟ್ಟ ಅವರು, ಹಡಪದ ಅಪ್ಪಣ್ಣ ಅವರ ಸುಕ್ಷೇತ್ರ ತಂಗಡಗಿಯ ಅಭಿವೃದ್ಧಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಅನುದಾನ ಒದಗಿಸಲಾಗುವುದು' ಎಂದು ಭರವಸೆ ನೀಡಿದರು.

# ಯುವಜನರ ಸಾವಿನ ಸಂಖ್ಯೆ ಏರಿಕೆ: ದಿನೇಶ್ ಗುಂಡೂರಾವ್ ಕಳವಳ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಅಭಿವೃದ್ಧಿ ಹೊಂದುತ್ತಿರುವ ರಾಜ್ಯಗಳಲ್ಲಿ ಅಸಾಂಕ್ರಾಮಿಕ ರೋಗಗಳ ಸಂಖ್ಯೆ ಹೆಚ್ಚಾಗುತ್ತಿದೆ. ಯುವಜನರ ಸಾವಿನ ಪ್ರಮಾಣವೂ ಏರಿಕೆಯಾಗುತ್ತಿದೆ ಎಂದು ಆರೋಗ್ಯ ದಿನೇಶ್ ಗುಂಡೂರಾವ್ ಕಳವಳ ವ್ಯಕ್ತಪಡಿಸಿದರು. ಜನಪ್ರಕಾಶನ ಗುರುವಾರ ಆಯೋಜಿಸಿದ್ದ ಲೇಖಕಿ ಡಾ.ವಸುಂಧರಾ ಭೂಪತಿ ಅವರ 'ಮಹಾತ್ಮಗಾಂಧಿ ಮತ್ತು ಪ್ರಕೃತಿ ಚಿಕಿತ್ಸೆ' ಹಾಗೂ ಹಣ್ಣುಗಳು ಮತ್ತು ಆರೋಗ್ಯ, ಜಿ.ಶರಣಪ್ಪ ಅವರ 'ಚಂದ್ರನ ಬೆಳಕಲ್ಲಿ' ಸಣ್ಣ ಕಥೆಗಳ ಸಂಕಲನ ಜನಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

'ಆರೋಗ್ಯ ಹದಗೆಟ್ಟ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ ಆರೋಗ್ಯ ಕೆಡದಂತೆ ನೋಡಿಕೊಳ್ಳುವುದು ಬಹಳ ಮುಖ್ಯ. ಸ್ವಾತಂತ್ರ್ಯ ಪೂರ್ವದಲ್ಲಿ ಸಾಂಕ್ರಾಮಿಕ ರೋಗಗಳ ಸಂಖ್ಯೆ ಹೆಚ್ಚಾಗಿತ್ತು. ಆಗ ಜನರ ಜೀವಿತಾವಧಿ 30ರಿಂದ 35 ವರ್ಷ ಇತ್ತು. ಮಲೇರಿಯಾ, ಪ್ಲೇಗ್ ಮುಂತಾದ ಸಾಂಕ್ರಾಮಿಗಳ ರೋಗಗಳಿಂದ ಕಡಿಮೆ ವಯಸ್ಸಿನಲ್ಲೇ ಮರಣ ಉಂಟಾಗುತ್ತಿತ್ತು ಈಗ ಬಹುತೇಕ ಸಾಂಕ್ರಾಮಿಕ ರೋಗಗಳಿಗೆ ಲಸಿಕೆಗಳನ್ನು ಕಂಡು ಹಿಡಿಯಲಾಗಿದೆ. ಸಾಂಕ್ರಾಮಿಕ ರೋಗಗಳು ಒಂದು ಹಂತಕ್ಕೆ ನಿಯಂತ್ರಣಕ್ಕೆ ಬಂದಿವೆ' ಎಂದು ಹೇಳಿದರು.

ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಕೆ.ಎಸ್. ರವೀಂದ್ರನಾಥ್ ಅಧ್ಯಕ್ಷತೆ ವಹಿಸಿದ್ದರು. ವಿಮರ್ಶಕಿ ಎಂ.ಎಸ್. ಆಶಾದೇವಿ, ಬಿ.ಕೃಷ್ಣಪ್ಪ ಟ್ರಸ್ಟ್ ಅಧ್ಯಕ್ಷೆ ಇಂದಿರಾ ಕೃಷ್ಣಪ್ಪ, ಜನ ಪ್ರಕಾಶನದ ಬಿ. ರಾಜಶೇಖರ ಮೂರ್ತಿ, ಲೇಖಕರಾದ ಡಾ.ವಸುಂಧರಾ ಭೂಪತಿ, ಬಿ.ಶರಣಪ್ಪ ಉಪಸ್ಥಿತರಿದ್ದರು.

> ಅನುವಂಶೀಯವಾಗಿ ಅಥವಾ ಬದಲಾದ ಜೀವನ ಶೈಲಿಯಿಂದ ಬರುವ ಕಾಯಿಲೆಗಳಿಂದ ಇತ್ತೀಚೆಗೆ ಸಾಯುವವರ ಪ್ರಮಾಣ ಹೆಚ್ಚಾಗಿದೆ. ಹೃದಯಾಘಾತ, ಕ್ಯಾನ್ಸರ್, ಪಾರ್ಶ್ವವಾಯು ಪ್ರಕರಣಗಳು ಜಾಸ್ತಿಯಾಗುತ್ತಿವೆ ಎಂದು ಮಾಹಿತಿ ನೀಡಿದರು. ಮಧುಮೇಹ, ರಕ್ತದ ಒತ್ತಡ ಯುವಜನರಲ್ಲಿ ಕಾಣಿಸಿಕೊಳ್ಳುತ್ತಿವೆ. ಯಾವ ರಾಜ್ಯಗಳು ಅಭಿವೃದ್ಧಿಯಾಗಿದೆಯೋ ಅಲ್ಲಿ ಆದಾಯ ಹೆಚ್ಚಿರುತ್ತದೆ. ಖರ್ಚು ಮಾಡುವ ಸಾಮರ್ಥ್ಯವೂ ಇರುತ್ತದೆ. ಆಗ ಓಡಾಟ ಕಡಿಮೆಯಾಗಿ ವಾಹನಗಳಲ್ಲಿಯೇ ಸಂಚರಿಸುವುದು ಹೆಚ್ಚಾಗುವುದರಿಂದ ದೇಹಕ್ಕೆ ವ್ಯಾಯಾಮ ಸಿಗುವುದಿಲ್ಲ. ಸಂಸ್ಕರಿಸಿದ ಆಹಾರ ಸೇವನೆ, ಮಾದಕ ವಸ್ತುಗಳ ಸೇವನೆ, ಮಾಲಿನ್ಯ ಪರಿಸರದಲ್ಲಿ ಬದುಕುವುದು ಮುಂತಾದವು ಕೂಡ ಮರಣ ಪ್ರಮಾಣ ಹೆಚ್ಚಳಕ್ಕೆ ಕಾರಣ ಎಂದು ಹೇಳಿದರು.

# ವಿಡಿಯೋ ಚಿತ್ರೀಕರಿಸಿ ಇನ್ ಸ್ಟಾಗ್ರಾಂನಲ್ಲಿ -ಅಪ್‌ಲೋಡ್ ಮಾಡಿದವ ಬಂಧನ

• ಉದಯವಾಹಿನಿ, ಬೆಂಗಳೂರು



ಯುವತಿಯರ ಹಾಗೂ ಮಹಿಳೆಯರ ಖಾಸಗಿ ಫೋಟೋ ಮತ್ತು ವಿಡಿಯೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಅಪ್‌ಲೋಡ್ ಮಾಡುತ್ತಿದ್ದ ಪಂಜಾಬ್ ಮೂಲದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಗುರುದೀಪ್ ಸಿಂಗ್ (26) ಬಂಧಿತ ಆರೋಪಿ. ಕಳೆದ ಮೂರು ವರ್ಷಗಳಿಂದ ಬೆಂಗಳೂರಿನ ಕೆ.ಆರ್.ಪುರಂನಲ್ಲಿ ಸಹೋದರನೊಂದಿಗೆ ವಾಸವಾಗಿದ್ದ ಈತ, ಹೋಟೆಲ್ ಮ್ಯಾನೇಜ್ ಮೆಂಟ್ ಪದವಿ ಪಡೆದಿದ್ದಾನೆ. ಉದ್ಯೋಗ ಅರಸಿ ನಗರಕ್ಕೆ ಆಗಮಿಸಿದ್ದ.

ಆದರೆ, ಎಲ್ಲಿಯೂ ಕೆಲಸ ಸಿಕ್ಕಿರಲಿಲ್ಲ. ಹೀಗಾಗಿ ಅಡ್ಡ ದಾರಿ ಹಿಡಿದು, ಮೆಟ್ರೋ, ಬಸ್ ನಿಲ್ದಾಣಗಳು, ಕಾಲೇಜು ಆವರಣದಲ್ಲಿ ಯುವತಿಯರ ಫೋಟೋ, ವಿಡಿಯೋ ರೆಕಾರ್ಡ್ ಮಾಡಿಕೊಂಡು ಅವುಗಳನ್ನು ಇನ್‌ಸ್ಟಾಗ್ರಾಂನಲ್ಲಿ ಅಪ್‌ಲೋಡ್ ಮಾಡಿ ವಿಕೃತಿ ಮೆರೆಯುತ್ತಿದ್ದ.

ಈ ಕುರಿತು ಬನಶಂಕರಿ ಪೊಲೀಸ್ ಠಾಣೆಯಲ್ಲಿ ಯುವತಿಯೊಬ್ಬಳು ನೀಡಿದ ದೂರಿನ ಮೇರೆಗೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಿದ್ದಾರೆ. ಆರೋಪಿಯ ಮೊಬೈಲ್ ಪರಿಶೀಲಿಸಿದಾಗ ಹಲವು ಯುವತಿಯರ ಫೋಟೋ, ವಿಡಿಯೋಗಳು ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

# ಸಿಎಂ ಬದಲಾವಣೆ ಚರ್ಚೆಯ ನಡುವೆ ಕೆಪಿಸಿಸಿ ಗಾದಿಗೆ ಫೈಟ್

## ಸಚಿವ ಎಂಬಿ ಪಾಟೀಲ್ ನಾನು ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಆಕಾಂಕ್ಷಿ ಅಲ್ಲ ಎಂದು ಸ್ಪಷ್ಟಪಡಿಸಿದ್ದಾರೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಸಿಎಂ ಸ್ಥಾನ ಬದಲಾವಣೆ ಆಗುವುದಿಲ್ಲ ಎಂದು ಸಿಎಂ ಅವರೇ ಸ್ವತಃ ಹೇಳಿಕೆ ಕೊಟ್ಟಿರುವ ಬೆನ್ನಲ್ಲೇ ರಾಜ್ಯ ಕಾಂಗ್ರೆಸ್‌ನಲ್ಲಿ ಬೆಳವಣಿಗೆಗಳು ಶುರುವಾಗಿದೆ. ಈ ನಡುವೆ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗಲಿದ್ಯಾ ಎಂಬ ಚರ್ಚೆ ಮುನ್ನಲೆಗೆ ಬಂದಿದೆ. ಇದೇ ವಿಚಾರವಾಗಿ ಮಾತನಾಡಿದ ಸಚಿವ ಎಂಬಿ ಪಾಟೀಲ್ ನಾನು ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಆಕಾಂಕ್ಷಿ ಅಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಆಗುತ್ತಾ ಎಂಬ ಪ್ರಶ್ನೆಗೆ, ಡಿಕೆಶಿ ಪಕ್ಷದ ಹಿರಿಯ ನಾಯಕರು. ಚುನಾವಣೆ ವೇಳೆ ಸಾಕಷ್ಟು ಕೆಲಸ ಮಾಡಿದ್ದಾರೆ. ಇದಷ್ಟೇ ನಾನು ಹೇಳೋದು. ಬಹಿರಂಗವಾಗಿ ಮಾತನಾಡಬಾರದು. ಏನೇ ಇದ್ರೂ ಪಕ್ಷದ ವೇದಿಕೆಯಲ್ಲಿ ಚರ್ಚಿಸಬೇಕು ಎಂದು ಹೈಕಮಾಂಡ್ ನಾಯಕರು ಸೂಚಿಸಿದ್ದಾರೆ ಎಂದರು. ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ನಾನು ಆಕಾಂಕ್ಷಿಯಲ್ಲ. ನಾನು ನೀರಾವರಿ ಮಂತ್ರಿ ಇದ್ದಾಗ ಈ ಬಗ್ಗೆ ಕೇಳಿದ್ದರು. ಆದರೆ, ಕಾಲಕ್ಕೆ ತಕ್ಕಂತೆ ಎಲ್ಲವೂ ಆಗಲಿದೆ. 17% ವೀರಶೈವ ಸಮುದಾಯ ರಾಜ್ಯದಲ್ಲಿದೆ. ವಿರೇಂದ್ರ ಪಾಟೀಲರು ಸಿಎಂ ಆಗಿದ್ದಾಗ ಹೆಚ್ಚು ಸೀಟು ಕಾಂಗ್ರೆಸ್‌ಗೆ ಬಂದಿದೆ ಎಂದರು.

**2 ಸೀಟು ಖಾಲಿ ಇಲ್ಲ:** ರಾಜ್ಯದಲ್ಲಿ ಈಗ ಸಿಎಂ ಕುರ್ಚಿ ಖಾಲಿ ಇಲ್ಲ. ಕೆಪಿಸಿಸಿ ಅಧ್ಯಕ್ಷರ ಕುರ್ಚಿಯೂ ಖಾಲಿ ಇಲ್ಲ. ಆದರೆ ಮುಂದೇನಾಗಬೇಕು ಎಂಬುವುದನ್ನು ಪಕ್ಷದ ಹೈಕಮಾಂಡ್ ನಿರ್ಧಾರ ಮಾಡುತ್ತದೆ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದರು.

### 2ನೇ ಏರ್‌ಪೋರ್ಟ್ ಚರ್ಚೆಗೆ ಮತ್ತೊಮ್ಮೆ ದೆಹಲಿಗೆ

ಬೆಂಗಳೂರಿನಲ್ಲಿ ಎರಡನೇ ಏರ್ಪೋರ್ಟ್ ವಿಚಾರವಾಗಿ ಮಾತನಾಡಿದ ಅವರು, ದೆಹಲಿಗೆ ಹೋದಾಗ ವಿಮಾನಯಾನ ಸಚವರು ಇರಲಿಲ್ಲ. ಅವರ ಸಮಯವನ್ನ ನಾವು ಕೇಳಿದ್ದೆವು. ಮುಂದಿನವಾರ ಮತ್ತೆ ಹೋಗ್ತೇನೆ. ಆಗ ಇದರ ಬಗ್ಗೆ ಚರ್ಚೆ ಮಾಡ್ತೇನೆ ಎಂದರು. ನವಿಮುಂಬೈ, ನೋಯ್ಡಾದಲ್ಲಿ ಹೇಗಿದೆ. ಅದರಂತೆ ನಾವು ಕೆಲಸ ಮಾಡಬೇಕಾಗುತ್ತದೆ. ನಮಗೂ ಬೇಗ ಏರ್ಪೋರ್ಟ್ ಆಗಬೇಕು ಅಂತಿದೆ. ನಾವೇನು ವಿಜಯಪುರಕ್ಕೆ ಕೇಳ್ತಿಲ್ವಲ್ಲ ಎಂದು ಮಾರ್ಮಿಕವಾಗಿ ವಿವಾದಕ್ಕೆ ತಿರುಗೇಟು ನೀಡಿದರು. ದೇವನಹಳ್ಳಿ ರೈತರ ಹೋರಾಟ ವಿಚಾರವಾಗಿ ಇದೇ ವೇಳೆ ಮಾತನಾಡಿ, ರೈತರು ನಮ್ಮವರು, ಸಿಎಂ ಜೊತೆ ಚರ್ಚೆ ಮಾಡುತ್ತೇನೆ. ಸಭೆಯಲ್ಲಿ ಏನು ಚರ್ಚೆ ಆಗುತ್ತೋ ನೋಡೋಣ. ರೈತರಿಗೆ ಹೋರಾಟದ ಅಧಿಕಾರ ಇದೆ. ಅವರಿಗೆ ಹೆಚ್ಚು ಪರಿಹಾರ ಕೊಡುತ್ತೇವೆ. ಅವರು ವಶಕ್ಕೆ ಪಡೆಯೋದು ಬೇಡ ಅಂತಿದ್ದಾರೆ. ಜುಲೈ 15 ರಂದು ನಡೆಯಲಿರುವ ಸಭೆಯಲ್ಲಿ ಏನಾಗುತ್ತೋ ನೋಡೋಣ ಎಂದರು

# ಅಧ್ಯಕ್ಷ, ಸದಸ್ಯರ ನಗರ ಪ್ರದಕ್ಷಿಣೆ; ಕಾಮಗಾರಿ ಪರಿಶೀಲನೆ

## ಎಂ.ಜಿ. ರಸ್ತೆ ಸೇರಿದಂತೆ ವಿವಿಧೆಡೆ ಸುತ್ತಾಡಿದ ಆಡಳಿತ, ವಿರೋಧ ಪಕ್ಷದ ಸದಸ್ಯರು, ಕಾಮಗಾರಿ ಕುರಿತು ಸ್ಥಳೀಯರಿಂದ ಅಭಿಪ್ರಾಯ

• **ಉದಯವಾಹಿನಿ, ರಾಮನಗರ**

ನಗರದ ಮೂಲಸೌಕರ್ಯ ಅಭಿವೃದ್ಧಿ ನಿಧಿ (ಯುಐಡಿಎಫ್) ಯೋಜನೆಯಡಿ ನಗರದ ವಿವಿಧೆಡೆ ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ನಗರಸಭೆ ಅಧ್ಯಕ್ಷ ಕೆ. ಶೇಷಾದ್ರಿ, ಶಶಿ ಹಾಗೂ ಸದಸ್ಯರು ವೀಕ್ಷಿಸಿ ಪರಿಶೀಲಿಸಿದರು. ಅಧಿಕಾರಿಗಳನ್ನು ಸಹ ಜೊತೆಗೆ ಕರೆದೊಯ್ದು ವಿವಿಧ ವಾರ್ಡ್‌ಗಳಲ್ಲಿ ಕಾಲ್ನಡಿಗೆಯಲ್ಲೇ ಸುತ್ತಾಡಿ ಕಾಮಗಾರಿಯ ಗುಣಮಟ್ಟ ಪರಿಶೀಲಿಸಿದರು. ವಿಜಯನಗರ, ಗಾಂಧಿನಗರ, ಕಾಯಿಸೊಪ್ಪಿನ ಬೀದಿ, ವಿವೇಕಾನಂದನಗರ, ಯಾರಬ್ ನಗರ, ಎಂ.ಜಿ. ರಸ್ತೆ ಸೇರಿದಂತೆ ವಿವಿಧೆಡೆ ಸುತ್ತಾಡಿದ ಆಡಳಿತ ಮತ್ತು ವಿರೋಧ ಪಕ್ಷದ ಸದಸ್ಯರು, ಕಾಮಗಾರಿ ಕುರಿತು ಸ್ಥಳೀಯರಿಂದ ಅಭಿಪ್ರಾಯ ಸಂಗ್ರಹಿಸಿದರು. ಕಾಮಗಾರಿ ಬಗ್ಗೆ ಬಂದ ದೂರುಗಳು ಹಾಗೂ ಲೋಷದೋಷಗಳನ್ನು ಗಂಭೀರವಾಗಿ ಪರಿಗಣಿಸಿ, ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರ ಪ್ರದಕ್ಷಿಣೆ ಬಳಿಕ ಸಂಜೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶೇಷಾದ್ರಿ,. ನಗರಸಭೆಗೆ ರೂ. 82.5 ಕೋಟಿ ಯುಐಡಿಎಫ್ ಅನುದಾನ ಸಿಕ್ಕಿದೆ. ಆ ಪೈಕಿ ರೂ. 60 ಕೋಟಿಯಲ್ಲಿ ರಸ್ತೆ ಅಭಿವೃದ್ಧಿ ಮಾಡಲಾಗುತ್ತಿದೆ. ಸಿಮೆಂಟ್ ರಸ್ತೆ ನಿರ್ಮಾಣ, ಹದಗೆಟ್ಟ ರಸ್ತೆ ದುರಸ್ತಿ ಸೇರಿದಂತೆ ಒಟ್ಟು 57 ಕಿ.ಮೀ. ಉದ್ದದ ರಸ್ತೆಗೆ ಅಭಿವೃದ್ಧಿ ಭಾಗ್ಯ ಸಿಕ್ಕಿದೆ. ಉಳಿದ ಅನುದಾನದ ಮೊತ್ತ ಸೀರಳ್ಳದ ತಡೆಗೋಡೆ ನಿರ್ಮಾಣಕ್ಕೆ ಬಳಕೆಯಾಗುತ್ತಿದೆ ಎಂದರು. ಐಜೂರು ಭಾಗದ 6 ವಾರ್ಡುಗಳಲ್ಲಿ ಅಭಿವೃದ್ಧಿ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಮುಗಿದಿದ್ದು, ಶೀಘ್ರ ಕಾಮಗಾರಿ ಶುರುವಾಗಲಿದೆ. ಶಾಸಕ ಇಕ್ಬಾಲ್ ಹುಸೇನ್ ಅವರೊಂದಿಗೆ ಚರ್ಚಿಸಿ ಈ ಭಾಗದಲ್ಲಿ ಸುಮಾರು 19.50 ಕೋಟಿ ವೆಚ್ಚದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು. ಇನ್ನೂ ಕೆಲ ವಾರ್ಡ್‌ಗಳ ಹಲವು ಪ್ರದೇಶಗಳಲ್ಲಿ ಕಾಮಗಾರಿಗೆ ಹೆಚ್ಚಿನ ಅನುದಾನ ಬೇಕಿದೆ ಎಂದು ತಿಳಿಸಿದರು.

ನಗರದ 5ನೇ ವಾರ್ಡಿನ ಅರ್ಕಾವತಿ ನದಿಗೆ ಅಡ್ಡವಾಗಿ ನಿರ್ಮಿಸುತ್ತಿದ್ದ ಸೇತುವೆ ಕಾಮಗಾರಿಗೆ ಮರುಜೀವ ನೀಡಲಾಗಿದೆ. ಕಾಮಗಾರಿ ಭರದಿಂದ ನಡೆಯುತ್ತಿದೆ. ಸೇತುವೆ ಪೂರ್ಣಗೊಂಡರೆ ಐದಾರು ವಾರ್ಡ್‌ಗಳ ಜನರಿಗೆ ಬೆಂಗಳೂರು-ಮೈಸೂರು ಹೆದ್ದಾರಿಗೆ ಸುಲಭವಾಗಿ ಸಂಪರ್ಕ ಸಿಗಲಿದೆ ಎಂದು ಹೇಳಿದರು.

ನಗರಸಭೆ ಉಪಾಧ್ಯಕ್ಷೆ ಆಯಿಷಾ ಬಾನು, ಸ್ಥಾಯಿ ಸಮಿತಿ ಅಧ್ಯಕ್ಷ ಫೈರೋಜ್ ಪಾಷ, ಪೌರಾಯುಕ್ತ ಡಾ.ಜಯಣ್ಣ, ಸದಸ್ಯರಾದ ಮಂಜುನಾಥ್, ನಿಜಾಮುದ್ದೀನ್, ಅಜ್ಜತ್, ಮುನಜಿಲ್ ಅಗಾ, ಗೇಬ್ರಿಯಲ್, ರಮೇಶ್, ನರಸಿಂಹ, ನಾಗಮ್ಮ, ಗೋವಿಂದರಾಜು, ಸಮದ್, ಅಣ್ಣು, ಮುಖಂಡ ಶಿವಕುಮಾರಸ್ವಾಮಿ ಹಾಗೂ ಅಧಿಕಾರಿಗಳು ಇದ್ದರು.


ಉದಯವಾಹಿನಿ ಚಿತ್ರ

> **ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆಶಯದಂತೆ ಜಿಲ್ಲಾ ಕೇಂದ್ರವಾಗಿರುವ ರಾಮನಗರದಲ್ಲಿ ರಸ್ತೆ ಕುಡಿಯುವ ನೀರು ಸೇರಿದಂತೆ ವಿವಿಧ ಮೂಲಸೌಕರ್ಯಗಳು ಮತ್ತು ಅಭಿವೃದ್ಧಿ ಕಾಮಗಾರಿಗಳು ಸಾಗಿವೆ**
> 
> **ಕೆ. ಶೇಷಾದ್ರಿ, ಶಶಿ ನಗರಸಭೆ ಅಧ್ಯಕ್ಷ**

### ರಸ್ತೆ ಗುಂಡಿಗಳಿಗೆ ಮುಕ್ತಿ

**ನಗರದಲ್ಲಿ ಈಗಾಗಲೇ ಶುರುವಾಗಿರುವ ವಿವಿಧ ಕರಗಗಳ ಮಹೋತ್ಸವಗಳ ಹಿನ್ನೆಲೆಯಲ್ಲಿ ನಗರದ ರಸ್ತೆಗಳ ಗುಂಡಿಗಳನ್ನು ಮುಚ್ಚಲಾಗಿದೆ.ಪೈಪ್‌ಲೈನ್ ಮತ್ತು ನಿರಂತರ ಕುಡಿಯುವ ನೀರಿನ ಯೋಜನೆ ಕಾರಣಕ್ಕೆ ಪ್ರಮುಖ ರಸ್ತೆಗಳು ಮತ್ತು ಗಲ್ಲಿ ರಸ್ತೆಗಳನ್ನು ಅಗೆಯಲಾಗಿತ್ತು. ಜಲಮಂಡಳಿ ಅಧಿಕಾರಿಗಳು ಮತ್ತು ಪೈಪ್‌ಲೈನ್ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ ಗುಂಡಿ ಮುಚ್ಚಿಸಲಾಗಿದೆ. ಚಾಮುಂಡೇಶ್ವರಿ ಸೇರಿದಂತೆ ನಗರದ 8 ಕರಗಗಳ ಮಹೋತ್ಸವಕ್ಕೆ ಎಲ್ಲಾ ತಯಾರಿ ಮಾಡಲಾಗಿದೆ ಎಂದು ಹೇಳಿದರು.**

# ಲಿಂಕ್ ಕೆನಾಲ್: ಗೋಲಿಬಾರ್, ಲಾಠಿ ಚಾರ್ಜ್‌ಗೂ ಬಗ್ಗಲ್ಲ

• **ಉದಯವಾಹಿನಿ, ತುರುವೇಕೆರೆ**

ರೈತರಿಗೆ ಮರಣ ಶಾಸನವಾಗಿರುವ ಲಿಂಕ್ ಕೆನಾಲ್ ಕಾಮಗಾರಿ ಹೋರಾಟದಲ್ಲಿ ನಮ್ಮ ಮೇಲೆ ಗೋಲಿಬಾರ್, ಲಾಠಿ ಚಾರ್ಜ್ ಮಾಡಿದರೂ ಅಂಜುವ ಜಾಯಮಾನ ನಮ್ಮದಲ್ಲ. ನಾವು ಎಲ್ಲದಕ್ಕೂ ಸಿದ್ಧರಾಗಿದ್ದೇವೆ' ಎಂದು ಶಾಸಕ ಎಂ.ಟಿ.ಕೃಷ್ಣಪ್ಪ ಹೇಳಿದರು.ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಜಿಲ್ಲೆಗೆ 24 ಟಿಎಂಸಿ ಹೇಮಾವತಿ ನೀರು ನಿಗದಿಯಾಗಿದೆ. ಅದರಲ್ಲಿ ಕುಣಿಗಲ್‌ಗೆ 3.4 ಟಿಎಂಸಿಯಷ್ಟು ನೀರು ನೀಡಲು ತೀರ್ಮಾನಿಸಲಾಗಿದೆ. ತುಮಕೂರು ನಾಲೆಯಿಂದ ಕುಣಿಗಲ್‌ಗೆ 3.4 ಟಿಎಂಸಿ ನೀರು ಹರಿದರೆ, ನಾಗಮಂಗಲ ನಾಲೆಯಿಂದ ಸುಮಾರು ಮೂರು ಟಿಎಂಸಿ ನೀರು ಕುಣಿಗಲ್ಗೆ ಹರಿದು ಹೋಗುತ್ತಿದೆ. ಇಷ್ಟಾದರೂ ನೀರು ಬೇಕು' ಎಂದು ಶಾಸಕ ರಂಗನಾಥ್ ಆಗ್ರಹಿಸುತ್ತಿರುವುದು ಆಶ್ಚರ್ಯ ತರಿಸಿದೆ ಎಂದರು.

ಈಗಾಗಲೇ ಜಿಲ್ಲೆಯ ರೈತರು ಕಾಂಗ್ರೆಸ್ ಸರ್ಕಾರದ ಈ ಕೆಟ್ಟ ತೀರ್ಮಾನದ ವಿರುದ್ಧ ಸಿಡಿದೆದ್ದಿದ್ದಾರೆ. ಆಗಲೇ 25 ಸಾವಿರ ರೈತರು ಪ್ರತಿಭಟನೆಗೆ ಸಾಕ್ಷಿಯಾಗಿದ್ದರು.

ಈಗ ಮತ್ತೆ ಕೆನಾಲ್ ಕಾಮಗಾರಿ ಮುಂದುರೆಸಲು ಯತ್ನಿಸಿದರೆ ಒಂದು ಲಕ್ಷಕ್ಕೂ ಹೆಚ್ಚು ರೈತರು ಹೋರಾಟಕ್ಕೆ ಇಳಿಯುವರು ಎಂದು ಎಚ್ಚರಿಸಿದರು. ಲಿಂಕ್ ಕೆನಾಲ್ ಅವಶ್ಯಕವಿಲ್ಲ. ಹೆಚ್ಚು ನೀರು ಬೇಕಾದಲ್ಲಿ ಕಾವೇರಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಲಿ. ಅದರ ಆದೇಶದ ಮೇರೆಗೆ ಹೆಚ್ಚು ನೀರು ಪಡೆದುಕೊಳ್ಳಲಿ. ಅಧಿಕಾರಿಗಳು ನೀಡಿರುವ ತಪ್ಪು ಮಾಹಿತಿಯಿಂದಾಗಿ ಜಿಲ್ಲೆ ಅನಾಥವಾಗುತ್ತಿದೆ. ತಾವೇ ಸ್ವತಃ ಎಲ್ಲಾ ಸ್ಥಳಗಳಿಗೆ ಭೇಟಿ ನೀಡಿ ವಾಸ್ತವಾಂಶ ಅರಿತಿದ್ದೇನೆ.


ಉದಯವಾಹಿನಿ ಚಿತ್ರ

> **ಕೆನಾಲ್‌ನ ಮುಖ್ಯ ತಾಂತ್ರಿಕ ಸಲಹೆಗಾರರಾಗಿರುವ ನಿವೃತ್ತ ಎಂಜಿನಿಯರ್ ಜಯಪ್ರಕಾಶ್ ಅವರಿಗೆ ವಾಸ್ತವ ಗೊತ್ತಿಲ್ಲ. ತುಮಕೂರು ನಾಲೆಯಿಂದ ಹರಿಯುತ್ತಿರುವ ನೀರನ್ನು ತಪ್ಪಾಗಿ ಪರಿಗಣಿಸಿದ್ದಾರೆ. ಡಿಸಿಎಂ ಅವರಿಂದ ಶಹಬ್ಬಾಶ್‌ಗಿರಿ ತೆಗೆದುಕೊಳ್ಳಲು ಜಿಲ್ಲೆಯ ರೈತರ ಪಾಲಿಗೆ ವಿಲನ್ ಆಗಿದ್ದಾರೆ. ಸರ್ಕಾರಕ್ಕೆ ತಪ್ಪು ಮಾಹಿತಿ ಕೊಟ್ಟಿದ್ದಾರೆ ಎಂದು ಕಿಡಿ ಕಾರಿದರು.**

ಕೂಡಲೇ ಲಿಂಕ್ ಕೆನಾಲ್ ಬಂದ್ ಮಾಡಬೇಕು.

ದುಂಡಾವರ್ತನೆಗೆ ಹೆದರೋರು ನಾವಲ್ಲ ಎಂದು ಗುಡುಗಿದರು. ಎಪಿಎಂಸಿ ಮಾಜಿ ಅಧ್ಯಕ್ಷ ಹಿಂಡುಮಾರನಹಳ್ಳಿ ನಾಗರಾಜ್, ಮಂಗೀಕುಪ್ಪೆ ಬಸವರಾಜು, ಕುಶಾಲ್ ಕುಮಾರ್, ಮಾಜಿ ನಿರ್ದೇಶಕ ವಿಜಯೇಂದ್ರ, ಪಕ್ಷದ ವಕ್ತಾರ ವೆಂಕಟಾಪುರ ಯೋಗೀಶ್, ಬಡಗರಹಳ್ಳಿ ತ್ಯಾಗರಾಜ್, ಅನೇಕೆರೆ ಗ್ರಾಮ ಪಂಚಾಯಿತಿ ಸದಸ್ಯ ಪುನಿತ್, ಮುನಿಯೂರು ರಂಗಸ್ವಾಮಿ ಉಪಸ್ಥಿತರಿದ್ದರು.

# ಸುರ್ಜೇವಾಲ ವಿರುದ್ಧ ಮತ್ತೆ ಆಕ್ರೋಶ

• **ಉದಯವಾಹಿನಿ, ತುಮಕೂರು**

ಕಾಂಗ್ರೆಸ್‌ನ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ನನಗೇನು ತಾಕೀತು ಮಾಡುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದ ಸಹಕಾರ ಸಚಿವ ಕೆ.ಎನ್.ರಾಜಣ್ಣ ಈಗ ಮತ್ತೊಮ್ಮೆ ಆಕ್ರೋಶ ಹೊರ ಹಾಕಿದ್ದಾರೆ. ಸುರ್ಜೇವಾಲ ರಾಜ್ಯಕ್ಕೆ ಭೇಟಿ ನೀಡಿ ಅಭಿಪ್ರಾಯ ಸಂಗ್ರಹಿಸಿರುವುದು ತರವಲ್ಲ. ಅವರು ಬಂದು ನಡೆಸಿದ ಪ್ರಕ್ರಿಯೆ ಬಗ್ಗೆ ನನಗೆ ಸಮಾಧಾನವಿಲ್ಲ ಎಂದು ಹೇಳಿದರು. ನಗರದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿ ನಟರಾಜನ್ ಅವರು ಆಂಧ್ರಪ್ರದೇಶಕ್ಕೆ ಭೇಟಿ ನೀಡಿದ್ದರು.



ಅವರು ಅಲ್ಲಿ ಒಂದೇ ದಿನಕ್ಕೆ ವಾಪಸ್ ಹೋಗಿದ್ದಾರೆ. ಆದರೆ ರಾಜ್ಯದಲ್ಲಿ ಏನಾಗಿದೆ ನೋಡಿ ಎಂದು ಪ್ರಶ್ನಿಸಿದರು. ಸಿದ್ದರಾಮಯ್ಯ ಅವರನ್ನು ಪಕ್ಷದ ಹೈಕಮಾಂಡ್ ಇಲ್ಲವೆ ಶಾಸಕರು ಬದಲಾವಣೆ ಮಾಡಬೇಕು. ಶಾಸಕರು ಬದಲಾಯಿಸಲು ತಯಾರಿಲ್ಲ. ಹೈಕಮಾಂಡ್ ಸಹ ಬದಲಾವಣೆ ಮಾಡುವುದಿಲ್ಲ ಅಂದುಕೊಂಡಿದ್ದೇನೆ ಎಂದರು.

### ದೆಹಲಿಗೆ ಹೋಗಲ್ಲ

**ಎಐಸಿಸಿ ರಚಿಸಿರುವ ಒಬಿಸಿ ಸಲಹಾ ಮಂಡಳಿ ನಾಯಕತ್ವವನ್ನು ಸಿದ್ದರಾಮಯ್ಯ ಒಪ್ಪಿಕೊಳ್ಳುವುದು ಅನುಮಾನ. ಅವರಿಗೆ ಹಿಂದಿ ಬರುವುದಿಲ್ಲ. ರಾಷ್ಟ್ರ ಮಟ್ಟಕ್ಕೆ ಹೋಗಿ ಏನು ಮಾಡುತ್ತಾರೆ. ದೆಹಲಿಯಲ್ಲಿ ಹಿಂದಿ ಬರದಿದ್ದರೆ ಏನೂ ನಡೆಯುವುದಿಲ್ಲ ಎಂದು ತಿಳಿಸಿದರು.**

# ಮಿನಿ ನ್ಯೂಸ್

## 15 ಅಡಿ ಉದ್ದದ ಹೆಬ್ಬಾವು ರಕ್ಷಣೆ

• **ಉದಯವಾಹಿನಿ, ಹಾರೋಹಳ್ಳಿ**

ತಾಲ್ಲೂಕಿನ ಕಾಡು ಜಕ್ಕಸಂದ್ರ, ಹತ್ತಿರದ ಮುನಿಮಾರನದೊಡ್ಡಿ ಹೊರವಲಯದಲ್ಲಿ ಬೆಳಿಗ್ಗೆ ರೈತ ಹನುಮಂತಯ್ಯ ಅವರ ಜಮೀನಿನಲ್ಲಿ 15 ಅಡಿ ಉದ್ದದ ಹೆಬ್ಬಾವು ಕಾಣಿಸಿಕೊಂಡಿದೆ.ರೈತ ಹನುಮಂತಯ್ಯ ಹಸುಗಳಿಗೆ ಸೀಮೆ ಹುಲ್ಲು ಕೊಯ್ಯಲು ಜಮೀನಿಗೆ ಹೋಗಿದ್ದ ಸಮಯದಲ್ಲಿ ಹುಲ್ಲಿನ ನಡುವೆ ಹೆಬ್ಬಾವು ಕಾಣಿಸಿಕೊಂಡಿದೆ. ಈ ಬಗ್ಗೆ ಹಾರೋಹಳ್ಳಿ ಅರಣ್ಯ ವ್ಯಾಪ್ತಿ ಗಸ್ತು ಪಾಲಕ ಶಶಿಕುಮಾರ್ ಅವರಿಗೆ ಮಾಹಿತಿ ನೀಡಿದ್ದು, ತಕ್ಷಣ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಜೊತೆಗೆ ಸ್ನೇಕ್ ವಿಶ್ವನಾಥ್ ಸ್ಥಳಕ್ಕೆ ಆಗಮಿಸಿ ಹೆಬ್ಬಾವನ್ನು ಹಿಡಿದು ಆನೇಕಲ್ ಅರಣ್ಯ ಪ್ರದೇಶಕ್ಕೆ ಬಿಟ್ಟಿದ್ದಾರೆ.

## ಇ-ಖಾತೆ ಅದಾಲತ್


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಗೌರಿಬಿದನೂರು**

ನಗರಸಭೆ ಆವರಣದಲ್ಲಿ ಖಾತೆ ಅದಾಲತ್ ಹಮ್ಮಿಕೊಳ್ಳಲಾಗಿತ್ತು. ಶಾಸಕ ಕೆ.ಎಚ್ ಪುಟ್ಟಸ್ವಾಮಿಗೌಡ ಫಲಾನುಭವಿಗಳಿಗೆ ಇ-ಖಾತೆ ವಿತರಣೆ ಮಾಡಿ ಮಾತನಾಡಿದರು. ಖಾತಾ ಅದಾಲತ್‌ನಲ್ಲಿ ಈವರೆಗೆ 16 ಸಾವಿರ ಖಾತೆ ನೇರವಾಗಿ ಫಲಾನುಭವಿಗಳಿಗೆ ವಿತರಣೆ ಮಾಡಲಾಗಿದೆ. ಯಾರು ಸಹ ಮಧ್ಯವರ್ತಿಗಳ ಮೊರೆ ಹೋಗದೆ ನೇರವಾಗಿ ಕಚೇರಿಯಲ್ಲಿ ಅರ್ಜಿ ಸಲ್ಲಿಸಿ ಖಾತೆ ಸಕಾಲದಲ್ಲಿ ಪಡೆಯಬಹುದು ಎಂದು ತಿಳಿಸಿದರು. ನಗರಸಭೆ ಅಧ್ಯಕ್ಷ ಲಕ್ಷ್ಮಿನಾರಾಯಣಪ್ಪ, ಉಪಾಧ್ಯಕ್ಷ ಫರೀದ್, ಪೌರಾಯುಕ್ತ ಡಿ.ಎಂ ಗೀತಾ, ಸದಸ್ಯರಾದ ಖಲೀಂಉಲ್ಲಾ, ರಾಜಕುಮಾರ್, ಡಿ.ಎ ಮಂಜುಳಾ, ಡಿ.ಜೆ.ಚಂದ್ರಮೋಹನ್, ಗೋಪಾಲ್, ಜಯರಾಮಯ್ಯ ಉಪಸ್ಥಿತರಿದ್ದರು.

## ನೆಲಗಡಲೆ ಮೂಟೆ ಕಳವು ಆರೋಪ

• **ಉದಯವಾಹಿನಿ, (ಬಾಗೇಪಲ್ಲಿ)**

ತಾಲ್ಲೂಕಿನ ಪಾತಪಾಳ್ಯ ಹೋಬಳಿ ರೈತ ಸಂಪರ್ಕ ಕೇಂದ್ರದಲ್ಲಿ ಸಂಗ್ರಹಿಸಿದ್ದ ನೆಲಗಡಲೆ ಮೂಟೆಗಳನ್ನು ಕೆಲವರು ಏಕಾಏಕಿ ದಾಳಿ ಮಾಡಿ ಅಧಿಕಾರಿಗಳ ಸಮ್ಮುಖದಲ್ಲಿ ಮೂಟೆಗಳನ್ನು ಹೊತ್ತುಕೊಂಡು ಹೋಗಿದ್ದಾರೆ. ಇದರಿಂದ ಅರ್ಹ ಫಲಾನುಭವಿ ರೈತರಿಗೆ ನೆಲಗಡಲೆ ಮೂಟೆಗಳು ಸಿಕ್ಕಿಲ್ಲ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ತನಿಖೆ ನಡೆಸಬೇಕೆಂದು ರಾಜ್ಯ ರೈತ ಸಂಘ (ಎಚ್.ಆರ್.ಬಸವರಾಜಪ್ಪ ಬಣದ ತಾಲ್ಲೂಕು ಅಧ್ಯಕ್ಷ ಎಂ.ಎಸ್.ನರಸಿಂಹಾರೆಡ್ಡಿ ಒತ್ತಾಯಿಸಿದರು. ಅರ್ಹ ರೈತರಿಂದ ಅಗತ್ಯ ದಾಖಲೆ ಪಡೆದು ನೆಲಗಡಲೆ ಮೂಟೆಗಳನ್ನು ವಿತರಣೆ ಮಾಡುವ ಸಂದರ್ಭದಲ್ಲಿ ಜನಪ್ರತಿನಿಧಿಗಳ ಬೆಂಬಲಿಗರೆಂದು ಹೇಳಿಕೊಂಡು ಕೆಲವರು ಮೂಟೆ ಕದ್ದಿದ್ದಾರೆ ಎಂದು ಆರೋಪಿಸಿದರು. ಕೂಡಲೇ ಅನಧಿಕೃತವಾಗಿ ನೆಲಗಡಲೆ ಮೂಟೆಗಳನ್ನು ಹೊತ್ತು ಸಾಗಿಸಿದವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಅರ್ಹ ರೈತ ಫಲಾನುಭವಿಗಳಿಗೆ ಅಗತ್ಯ ಇರುವಷ್ಟು ನೆಲಗಡಲೆ ಮೂಟೆಗಳನ್ನು ವಿತರಿಸಬೇಕು ಎಂದು ಒತ್ತಾಯಿಸಿದರು.

# ವಿಖ್ಯಾತಾನಂದ ಸ್ವಾಮೀಜಿ ಬೇಸರ

• **ಉದಯವಾಹಿನಿ, ಮಾಗಡಿ**

ತಾಲ್ಲೂಕಿನ ಸೋಲೂರಿನ ಆರ್ಯ ಈಡಿಗರ ಮಹಾಸಂಸ್ಥಾನದ ಆವರಣದಲ್ಲಿ ಗುರುಪೂರ್ಣಿಮಾ ಅಂಗವಾಗಿ ನಡೆದ ಗುರುವಂದನಾ ಕಾರ್ಯಕ್ರಮದಲ್ಲಿ ಮಠದ ಪೀಠಾಧ್ಯಕ್ಷ ವಿಖ್ಯಾತಾನಂದ ಸ್ವಾಮೀಜಿ ಅವರು ಆರ್ಶೀವಚನ ನೀಡಿದರು. ಈ ವೇಳೆ ಮಾತನಾಡಿದ ಅವರು ಇಂದಿನ ಪೀಳಿಗೆಯ ಯುವಜನತೆ ತಂತ್ರಜ್ಞಾನದ ಯುಗದಲ್ಲಿ ಪೂರ್ವಜರ ಆಚಾರ, ವಿಚಾರ, ಸಂಸ್ಕೃತಿಯನ್ನು ಮರೆಯುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಗುರುಪೂರ್ಣಿಮಾ ಹಿಂದೂ ಸಂಸ್ಕೃತಿಯಲ್ಲಿ ಮಹತ್ತರ ಸ್ಥಾನ ಪಡೆದಿದ್ದು, ಅನೇಕ ಸಾಕ್ಷಿಗಳಿವೆ. ಮಹಾಭಾರತದ ಅರ್ಜುನ-ದ್ರೋಣಚಾರ್ಯರಿಂದ ಹಿಡಿದು, ಸ್ವಾಮಿ ವಿವೇಕಾನಂದ- ರಾಮಕೃಷ್ಣ ಪರಮಹಂಸರವರೆಗೂ ಈ ನಾಡಿನಲ್ಲಿ ಗುರುಗಳಿಗೆ ಸಂಪೂರ್ಣವಾಗಿ ತಮ್ಮನ್ನು ಅರ್ಪಿಸಿಕೊಂಡು, ಗುರುಗಳ ಜ್ಞಾನ ಭಂಡಾರವನ್ನು ಸ್ವೀಕರಿಸಿದ್ದಾರೆ. ಅವರ ಮಾರ್ಗವನ್ನು ಅನುಸರಿಸಿ ಮುಕ್ತಿ ಹೊಂದಿರುವ ಅನೇಕ ಘಟನೆಗಳು ನಮ್ಮ ಇತಿಹಾಸದಲ್ಲಿ ಸಾಕಷ್ಟಿವೆ ಎಂದರು.

ಮನುಷ್ಯನ ಮುಕ್ತಿ ಹೊಂದಬೇಕಾದರೆ ಗುರುವಿನ ಆರ್ಶೀವಾದ ಸಿಗಬೇಕು. ಗುರುಗಳು ತಮ್ಮ ಶಿಷ್ಯ ಉತ್ತಮ ವ್ಯಕ್ತಿಯಾಗಬೇಕೆಂಬ ಆಶಯ ಹೊಂದಿರುತ್ತಾರೆ. ಜೊತೆಗೆ ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ತಮ್ಮ ಜ್ಞಾನ ಭಂಡಾರವನ್ನು ಶಿಷ್ಯರಿಗೆ ಧಾರೆಯೆರೆಯುತ್ತಾರೆ ಎಂದರು.

ಅದೇ ರೀತಿ ಆರ್ಯ ಈಡಿಗ ಮಹಾಸಂಸ್ಥಾನವು ಸಮಾಜದ ಪ್ರತಿಯೊಬ್ಬ ಮಗುವಿಗೂ ಸಮಾನ ಶಿಕ್ಷಣ ದೊರೆಯಬೇಕೆಂದು ಮಠದಲ್ಲಿ ವಸತಿ ಜೊತೆಗೆ ಶಿಕ್ಷಣ ನೀಡಲು ಮುಂದಾಗಿದೆ ಎಂದರು.

ಗುರುಪೂರ್ಣಿಮಾ ಅಂಗವಾಗಿ ಮಠದಲ್ಲಿ ರೇಣುಕಾ ಯಲ್ಲಮ್ಮ ದೇವಿಗೆ ವಿಶೇಷ ಪೂಜೆ, ಭಕ್ತರಿಗೆ ಅನ್ನಸಂತರ್ಪಣೆ ನೆರವೇರಿತು. ವಿಖ್ಯಾತಾನಂದ ಸ್ವಾಮೀಜಿಗೆ ಭಕ್ತರು ಗುರುವಂದನೆ ಸಲ್ಲಿಸಿದರು.

ಈ ವೇಳೆ ಹರ್ಷಣೆಕಲ್ ಧರ್ಮ ವಿಜಯ, ಕೆ.ವಿ ಹರೀಶ್, ತುಮಕೂರು ಶಿವಣ್ಣ, ಆಂಜನೇಯಲು, ಮಾಗಡಿ ಗೋಪಾಲ್, ಮಠದ ಆಡಳಿತಾಧಿಕಾರಿ ಸಂತೋಷ್ ಸೇರಿದಂತೆ ಭಕ್ತರು ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

> **ಗುರುಪೂರ್ಣಿಮಾ ದಿನದಂದು ಸ್ವಾಮೀಜಿಗಳ ಆಶೀರ್ವಾದ ಪಡೆದು ಅವರ ಮಾರ್ಗದರ್ಶನದಲ್ಲಿ ನಡೆದಾಗ ಜೀವನ ಉತ್ತಮ ಮಾರ್ಗದಲ್ಲಿ ಸಾಗಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.ಯುವ ಮುಖಂಡ ಶಶಾಂಕ್ ಮಾತನಾಡಿ, ಗುರುಗಳು ಕೇವಲ ಶಿಕ್ಷಕರು ಮಾತ್ರವಲ್ಲ. ಅವರು ನಮ್ಮ ಬದುಕಿನ ದಾರಿ ತೋರುವ ಮಾರ್ಗದರ್ಶಕರು. ನಮ್ಮ ತಪ್ಪುಗಳನ್ನು ತಿದ್ದುತ್ತಾ ಅಜ್ಞಾನದಿಂದ ಸುಜ್ಞಾನದ ಬೆಳಕಿನತ್ತ ತರುವವರು ಎಂದರು.**

# ಕೈವಾರ ಧರೆಗಿಳಿದ ನಾದಲೋಕ

• **ಉದಯವಾಹಿನಿ, ಚಿಂತಾಮಣಿ**

ಸಂಗೀತೋತ್ಸವದ ಮೂರನೇ ದಿನ ಧರೆಗಿಳಿದಿದ್ದ ನಾದಲೋಕಕ್ಕೆ ಸಂಗೀತಾಸಕ್ತರು ಮನಸೋತರು. ಬೆಳಗಿನ ಜಾವ 4-30ರಿಂದ 8ಗಂಟೆವರೆಗೂ ವಿವಿಧ ಕಲಾವಿದರಿಂದ ನಾದಸ್ವರ ಸ್ಯಾಕ್ಸೋಫೋನ್, ತವಿಲ್ ನುಡಿಸುವ ಮೂಲಕ ತಮ್ಮ ಕಲಾಸೇವೆಯನ್ನು ಸಮರ್ಪಿಸಿದರು. ನಂತರ ವಿವಿಧ ಭಜನಾ ಮಂಡಳಿಗಳಿಂದ ನಾಮ ಸಂಕೀರ್ತನೆ ನಡೆಯಿತು.

ಬೆಳಗ್ಗೆ 10ರಿಂದ ನೂರಾರು ಕಲಾವಿದರಿಂದ ಯೋಗಿ ನಾರೇಯಣ ತಾತಯ್ಯ ವಿರಚಿತ ಬೋಧನಾ ಕೃತಿಗಳ ಗೋಷ್ಠಿ ಗಾಯನ ಮನಸೂರೆಗೊಂಡಿತು. ಗೋಷ್ಠಿ ಗಾಯನ ನಂತರ 11ರಿಂದ ಮಧ್ಯಾಹ್ನ 1-30ರವರೆಗೂ ಗುರುಪೂಜೆ ಶ್ರದ್ಧಾ-ಭಕ್ತಿ ಹಾಗೂ ಅದ್ದೂರಿಯಾಗಿ ನೆರವೇರಿತು. ಮಧ್ಯಾಹ್ನದಿಂದ ಸಂಜೆ 5ರವರೆಗೂ ವಿವಿಧ ಸಂಗೀತಗಾರರು ಗಾಯನದ ಮೂಲಕ ಸಂಗೀತ ಸೇವೆ ಸಮರ್ಪಣೆ ಮಾಡಿದರು. ಬೆಂಗಳೂರಿನ ಸುಧಾಮಣಿ ವೆಂಕಟರಾಘವನ್ ತಂಡದ ಗಾಯನ, ಜಯಲಕ್ಷ್ಮಿ ಎಸ್.ಭಟ್ ಗಾಯನ, ತಿರುಮಲ ತಿರುಪತಿ ದೇವಸ್ಥಾನದ ಭಾಸ್ಕರ್ ತಂಡದ ಗಾಯನ, ಮಂಜುಳಾ ಜಗದೀಶ್, ಮದ್ಮಾವತಿ ಮತ್ತು ಶಿಷ್ಯವೃಂದ, ಕೆ.ಕೆ. ವೀಣಾ ಮತ್ತು ಶಿಷ್ಯವೃಂದ, ಭೈರತಿ ಆಂಜನಪ್ಪ ಮತ್ತು ಶಿಷ್ಯವೃಂದ, ವಾನರಾಶಿ ಬಾಲಕೃಷ್ಣ ಭಾಗವತರ್ ತಂಡದ ಕಚೇರಿಗಳು ಹಾಗೂ ಪಕ್ಕವಾದ್ಯಗಳು ಮನ ಸೆಳೆದವು.

ಸಂಜೆ ವಿಶೇಷ ಕಾರ್ಯಕ್ರಮಗಳಲ್ಲಿ ಬೆಂಗಳೂರು ಅನಂತಕೃಷ್ಣ ಶರ್ಮ, ತಂಡದ ಲಯ ಲಹರಿ ತಾಳವಾದ್ಯ ಸಂಗೀತ ಪ್ರಿಯರ ಮನಸೂರೆಗೊಂಡಿತು. ಚೆನ್ನೈನ ಅಭಿಷೇಕ್ ರಘುರಾಮ್ ವೀಣಾವಾದನ ಯು.ರಾಜೇಶ್ ಮ್ಯಾಂಡೋಲಿನ್ ಸೋಲೋ ಸಂಗೀತ ಪ್ರಿಯರನ್ನು ಗಾನ ಗಂಧರ್ವ ಲೋಕಕ್ಕೆ ಕರೆದೊಯ್ದಿತು. ಚೆನ್ನೈನ ಶಂಕರ ಸುಬ್ರಮಣ್ಯಂ ಮೃದಂಗ. ಪ್ರವೀಣ್ ನಾರಾಯಣ ತಬಲ, ಸ್ವಾಮಿನಾಥನ್ ಸೆಲ್ವಗಣೇಶ್ ಖಂಜಿರ ನುಡಿಸುವ ಮೂಲಕ ಸಾಥ್ ನೀಡಿದರು. ಸುಮಾರು ಒಂದೂವರೆ ಗಂಟೆ ಪ್ರೇಕ್ಷಕರು ತನ್ಮಯರಾಗಿ ಆಲಿಸಿದರು. ಪುತ್ತೂರ್ ಗಣೇಶ್ ಅವರ ಸ್ಯಾಕ್ಸೋಫೋನ್ ಬಹುಕಾಲ ಸಂಗೀತಪ್ರಿಯರ ಮನದಲ್ಲಿ ಉಳಿಯುವಂತೆ ಮಾಡಿತು. ತಿರುಪತಿ ಗಿರಿನಾಥರೆಡ್ಡಿ ಪಿಟೀಲು, ಕೆ.ಎಸ್.ಪ್ರಶಾಂತ್ ಮೃದಂಗ, ರಾಜೇಂದ್ರ ನಾಕೋಡ್ ತಬಲ, ಬಿ.ರಾಜಶೇಖರ್ ಮೋರ್ಸಿಂಗ್ ನುಡಿಸಿ ಮತ್ತಷ್ಟು ಮೆರಗು ನೀಡಿದರು.

ಬೆಂಗಳೂರಿನ ನಯನಾ ರಮೇಶ್ ಅವರ ಭರತನಾಟ್ಯ ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿ ಮಾಡಿತು. ಸಭಾಂಗಣ ಹಾಗೂ ಹೊರಗೆ ಪ್ರೇಕ್ಷಕರು ತುಂಬಿ ತುಳುಕುತ್ತಿದ್ದರು. ರಾತ್ರಿ 11ರಿಂದ ತಿರುಪಂಬೂರು ಟಿ.ಎಸ್.ಎನ್ ಕುಂಜಿತಾಬಾಲನ್ ತಂಡ, ತಿರುಪತಿಯ ವಿ.ಸತ್ಯನಾರಾಯಣ್ ತಂಡ, ಬೇತಮಂಗಲ ರಮೇಶ್ ತಂಡ. ರಾಮದಾಸ್ ವಾಗಟ, ಅತ್ತಿಬೆಲೆ ಎ.ಸಿ.ರಾಜಶೇಖರ್ ತಂಡಗಳು ನಾದಸ್ವರ ಕಾರ್ಯಕ್ರಮ ಇಡೀ ರಾತ್ರಿ ನಡೆದವು. ಸಂಗೀತದ ಜತೆಗೆ ಸಾವಿರಾರು ಭಜನಾ ತಂಡಗಳು ಭಜನೆ, ಕೋಲಾಟಗಳಲ್ಲಿ ಭಾವಪರವಶರಾಗಿ ಮಗ್ನವಾಗಿದ್ದವು.


ಉದಯವಾಹಿನಿ ಚಿತ್ರ

# ಮಹಾನಗರ ಪಾಲಿಕೆ ನೌಕರರ ಪ್ರತಿಭಟನೆಗೆ ಮಾಜಿ ಸಿಎಂ ಯಡಿಯೂರಪ್ಪ ಬೆಂಬಲ

• **ಉದಯವಾಹಿನಿ, ಮೈಸೂರು**

ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿ ಮೈಸೂರು ಮಹಾನಗರ ಪಾಲಿಕೆ ನೌಕರರ ಸಂಘ ರಾಜ್ಯ ಮಹಾನಗರ ಪಾಲಿಕೆಗಳ ನೌಕರರ ಪರಿಷತ್ ಸದಸ್ಯರು ಪಾಲಿಕೆ ಮುಂಭಾಗ ನಡೆಸುತ್ತಿರುವ ಪ್ರತಿಭಟನೆಯಲ್ಲಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಭಾಗವಹಿಸಿದರು.

ಪ್ರತಿಭಟನಾ ನಿರತರನ್ನು ಉದ್ದೇಶಿಸಿ ಮಾತನಾಡಿ, ಮುಖ್ಯಮಂತ್ರಿಗಳ ಕ್ಷೇತ್ರ ಮೈಸೂರಿನಲ್ಲಿ ಪ್ರತಿಭಟನೆ ನಡೆಯುತ್ತಿದ್ದರೂ ಸರ್ಕಾರದ ಪ್ರತಿನಿಧಿಗಳು, ಅಧಿಕಾರಿಗಳು ಬಂದು ಅಹವಾಲು ಸ್ವೀಕರಿಸದಿರುವುದು ಖಂಡನೀಯ, ಮುಖ್ಯಮಂತ್ರಿ ಸಿದ್ದರಾಮಯ್ಯ ತಕ್ಷಣವೇ ನೌಕರರ ಬೇಡಿಕೆ ಈಡೇರಿಸಬೇಕು' ಎಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

ಶಾಸಕ ಟಿ.ಎಸ್.ಶ್ರೀವತ್ಸ, ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಮಾಜಿ ಮೇಯರ್ ಶಿವಕುಮಾರ್ ಭಾಗವಹಿಸಿದ್ದರು.

> **ಸರ್ಕಾರದ ಚೌಕಟ್ಟಿನ ಹೋರಾಟದ ಧ್ವನಿಯನ್ನು ವಿಧಾನಸಭೆಗೆ ಮುಟ್ಟಿಸುವ ಕೆಲಸವನ್ನು ವಿರೋಧ ಪಕ್ಷ ಮಾಡುತ್ತದೆ. ರಾಜ್ಯಕ್ಕೆ ಮುಖ್ಯಮಂತ್ರಿಗಳನ್ನು ಮೈಸೂರು ನೀಡಿದೆ. ಇಲ್ಲಿನ ನ್ಯಾಯಯುತ ಬೇಡಿಕೆಯನ್ನು ಸರ್ಕಾರ ಈಡೇರಿಸಬೇಕು. ತಮ್ಮ ಆರೋಗ್ಯ ಹಾಳು ಮಾಡಿಕೊಂಡು ಇತರರಿಗಾಗಿ ಪಾಲಿಕೆ ನೌಕರರು ಕೆಲಸ ಮಾಡುತ್ತಾರೆ. ಅವರ ಆರೋಗ್ಯ ರಕ್ಷಣೆಗೆ ರಾಜ್ಯ ಸರ್ಕಾರ ಮುಂದಾಗಬೇಕು' ಎಂದು ಆಗ್ರಹಿಸಿದರು.**

# ರಾಜ್ಯ ಇತಿಹಾಸದಲ್ಲೇ ಅತ್ಯಂತ ಕೆಟ್ಟ ಸರ್ಕಾರ

## ಜೆಡಿಎಸ್ ಅಧಿಕಾರಕ್ಕೆ ಬರುವವರೆಗೆ ಸುಮ್ಮನೆ ಕೂರಲ್ಲ. ತಮ್ಮನ್ನೂ ಕೂರಲು ಬಿಡಲ್ಲ: ನಿಖಿಲ್

• **ಉದಯವಾಹಿನಿ, ಕೋಲಾರ**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅತ್ಯಂತ ಕೆಟ್ಟದಾಗಿ ಆಡಳಿತ ನಡೆಸುತ್ತಿದೆ. ಇಂಥದ್ದೊಂದು ಕೆಟ್ಟ ಸರ್ಕಾರವಿತ್ತು ಎಂಬುದು ರಾಜ್ಯದ ಇತಿಹಾಸ ಪುಟಗಳಲ್ಲಿ ಶಾಶ್ವತವಾಗಿ ಉಳಿದುಹೋಗಲಿದೆ. ಮುಂದೆ ಇಂಥ ಸರ್ಕಾರ ಬರಲ್ಲ. ಈ ಮಾತನ್ನು ಜೆಡಿಎಸ್, ಬಿಜೆಪಿ ಶಾಸಕರು ಹೇಳುತ್ತಿಲ್ಲ. ಕಾಂಗ್ರೆಸ್‌ನ ಹಿರಿಯ ಶಾಸಕರೇ ಹೇಳುತ್ತಿದ್ದಾರೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ನಗರದ ಬೈರೇಗೌಡ ನಗರದಲ್ಲಿ ಜೆಡಿಎಸ್ ಪಕ್ಷ ಆಯೋಜಿಸಿದ್ದ ಕೋಲಾರ ವಿಧಾನಸಭಾ ಕ್ಷೇತ್ರದ ಕಾರ್ಯಕರ್ತರ ಸಮಾವೇಶ, ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

'ಹಿಂದಿನ ಸೋಲುಗಳಿಂದ ಧೃತಿಗೆಡುವುದು ಬೇಡ. ಮುಂದೆ ನಮಗೆ ಅವಕಾಶ ಸಿಗಲಿದೆ. ಅಧಿಕಾರಕ್ಕಾಗಿ ರಾಜಕಾರಣ ಬೇಡ, ಸಮಾಜ ಕಟ್ಟಲು ರಾಜಕಾರಣ ಮಾಡೋಣ. ಚುನಾವಣೆ ಬಂದಾಗ ನೋಡೋಣ ಎಂಬ ಮನಸ್ಥಿತಿ ಬೇಡ' ಎಂದರು. ಸುಳ್ಳುಗಳ ಭರವಸೆ ಮೇಲೆ ಸರ್ಕಾರ ರಚಿಸಿರುವ ಕಾಂಗ್ರೆಸ್‌ನವರು ಬೊಗಳೆ ಭಾಷಣ ಮಾಡುತ್ತಾರೆ. ಚುನಾವಣೆ ಬಂದಾಗ ಮಾತ್ರ ಗೃಹಲಕ್ಷ್ಮಿ ಹಣ ಜನರ ಖಾತೆ ಸೇರುತ್ತದೆ. ಇದನ್ನು ಪ್ರಶ್ನೆ ಮಾಡಿದರೆ ನಾವೇನು ಪ್ರತಿ ತಿಂಗಳು ಕೊಡುತ್ತೇವೆಂದು ಹೇಳಿದ್ದೇವಾ ಎಂಬುದಾಗಿ ಉಪಮುಖ್ಯಮಂತ್ರಿ ಕೇಳುತ್ತಾರೆ' ಎಂದು ಟೀಕಾ ಪ್ರಹಾರ ನಡೆಸಿದರು.

ಗ್ಯಾರಂಟಿಗಳಿಂದ ಅಸಹಾಯಕರಾಗಿರುವುದಾಗಿ ಪಕ್ಕದ ತೆಲಂಗಾಣ ಮುಖ್ಯಮಂತ್ರಿ ಒಪ್ಪಿಕೊಂಡಿದ್ದಾರೆ. ತಾವೂ ಒಪ್ಪಿಕೊಳ್ಳಿ. ನಾವು ಗ್ಯಾರಂಟಿಗಳ ವಿರೋಧಿಯಲ್ಲ. ಆದರೆ, ಗ್ಯಾರಂಟಿ ಅನುಷ್ಠಾನ ನೆಪದಲ್ಲಿ ಲೂಟಿ ಹೊಡೆಯಬೇಡಿ' ಎಂದರು.

ಕೋಲಾರಕ್ಕೆ ನಾನು ಶೋ ಮಾಡಲು ಬಂದಿಲ್ಲ. ಪಕ್ಷದ ಶಕ್ತಿ ತೋರಿಸಲು ಬಂದಿಲ್ಲ. ಮುಂಬರುವ ಎಲ್ಲಾ ಚುನಾವಣೆ ಹಾಗೂ 2028ರ ವಿಧಾನಸಭೆ ಚುನಾವಣೆಗೆ ಹೆಚ್ಚಿನ ಶಾಸಕರನ್ನು ಗೆಲ್ಲಿಸಬೇಕು. 58 ದಿನಗಳ ಈ ಅಭಿಯಾನ ಕಾರ್ಯಕ್ರಮ ಮುಗಿದ ಬಳಿಕ ಮನೆಯಲ್ಲಿ ನಾನು ಸುಮ್ಮನೆ ಕೂರಲ್ಲ, ತಮ್ಮನ್ನು ಕೂರಲೂ ಬಿಡಲ್ಲ. ನಿರಂತರವಾಗಿ ಪಕ್ಷ ಸಂಘಟನೆ ಮಾಡಲೇಬೇಕಿದೆ ಎಂದು ಹೇಳಿದರು. ಮುಂಬರುವ ಜಿಲ್ಲಾ ಪಂಚಾಯಿತಿ ಚುನಾವಣೆಗೆ ಸಂಬಂಧಿಸಿದಂತೆ ಸಮೀಕ್ಷೆ ನಡೆಸಿ ವರದಿ ಆಧಾರದ ಮೇರೆಗೆ ಅಭ್ಯರ್ಥಿಗಳಿಗೆ ಟಿಕೆಟ್ ನೀಡಲಾಗುತ್ತದೆ ಎಂದರು. ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಜೆಡಿಎಸ್ ಪಕ್ಷಕ್ಕೆ ಜನರು ಹಲವಾರು ಚುನಾವಣೆಯಲ್ಲಿ ಬೆನ್ನು ತಟ್ಟಿದ್ದಾರೆ. ಮುಂದೆ ಈ ಭಾಗದ 11 ವಿಧಾನಸಭಾ ಕ್ಷೇತ್ರಗಳ ಪೈಕಿ ಕನಿಷ್ಠ 8 ಸ್ಥಾನ ಗೆಲ್ಲಬೇಕು. ಅದಕ್ಕಾಗಿ ಅಭ್ಯರ್ಥಿಗಳು ತಯಾರಾಗಬೇಕು. ಕಾರ್ಯಕರ್ತರು ಕೈಗೂಡಿಸಬೇಕು ಎಂದು ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯ ಇಂಚರ ಗೋವಿಂದರಾಜು, ಕುಮಾರಸ್ವಾಮಿ ಕೇಂದ್ರದಲ್ಲಿ ಮಂತ್ರಿಯಾಗಿದ್ದು, ಜವಾಬ್ದಾರಿ ಹೆಚ್ಚಿದೆ. ಹೀಗಾಗಿ, ಸಂಘಟನೆಯಲ್ಲಿ ತೊಡಗಿಸಿಕೊಳ್ಳುವಿದು ಕಷ್ಟ. ಹೀಗಾಗಿ, ನಿಖಿಲ್ ಜವಾಬ್ದಾರಿ ತೆಗೆದುಕೊಂಡು ಮುನ್ನುಗ್ಗುತ್ತಿದ್ದಾರೆ. ಎಲ್ಲಾ ಕಡೆ ಜನರು ದೊಡ್ಡಮಟ್ಟದಲ್ಲಿ ಸೇರುತ್ತಿದ್ದಾರೆ ಎಂದರು.

ಸದಸ್ಯತ್ವ ನೋಂದಣಿಯೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶ. ಮಿಸ್ ಕಾಲ್ ಮೂಲಕ ಸದಸ್ಯತ್ವ ನೋಂದಣಿ ಮಾಡಿಕೊಳ್ಳಿ. ನಿಖಿಲ್ ನಾಯಕತ್ವ ಬೆಂಬಲಿಸಿ ಎಂದು ಕೋರಿದರು.

ಶಾಸಕ, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಜಿ.ಕೆ.ವೆಂಕಟಶಿವಾರೆಡ್ಡಿ ಮಾತನಾಡಿ, ನಾನು 45 ವರ್ಷಗಳಿಂದ ಶಾಸಕನಾಗಿದ್ದು, ಇಂಥ ಕೆಟ್ಟ ಸರ್ಕಾರ ನೋಡಿಲ್ಲ. ಕಾಂಗ್ರೆಸ್ ಸರ್ಕಾರದಲ್ಲಿ ಕಮಿಷನ್ ದಂಧೆ ಹೆಚ್ಚಾಗಿದೆ.

ಒಂದೂ ರಸ್ತೆ ಅಭಿವೃದ್ಧಿ ಮಾಡಿಲ್ಲ, ಬಡವರಿಗೆ ಮನೆ ಕೊಟ್ಟಿಲ್ಲ. ವಿಧಾನಸೌಧದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ' ಎಂದರು. ಶಾಸಕ ಸಮೃದ್ಧಿ ಮಂಜುನಾಥ್, ನಿಖಿಲ್ ಕುಮಾರಸ್ವಾಮಿ ಅವರನ್ನು ವಿಧಾನಸೌಧಕ್ಕೆ ಕರೆದುಕೊಂಡು ಹೋಗುವವರೆಗೆ ವಿರಮಿಸುವುದಿಲ್ಲ. ಆರ್‌ಸಿಬಿ ತಂಡ ಸೋತರೂ ಗೆದ್ದರೂ ನಂಬರ್ 1. ಹಾಗೆಯೇ ಜೆಡಿಎಸ್ ಕೂಡ ಎಂದು ಹೇಳಿದರು.ಇದಕ್ಕೂ ಮೊದಲು ಮೆಕ್ಕೆ ವೃತ್ತದಿಂದ ಬೈಕ್ ರಾಲಿ ನಡೆಯಿತು. ಕಾರ್ಯಕರ್ತರು ಹೂವಿನ ಮಳೆಗರೆದು ಸ್ವಾಗತಿಸಿದರು. ಗಾಂಧಿ ಪ್ರತಿಮೆ, ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು. ಸಾಯಿಬಾಬಾನ ದರ್ಶನ ಪಡೆದರು.


ಉದಯವಾಹಿನಿ ಚಿತ್ರ

> **'ಜಿಲ್ಲೆಯಲ್ಲಿ ನಾಲ್ಕು ರೈಲ್ವೆ ಮೇಲೇತುವೆ (ಆರ್ ಒಬಿ) ಟೆಂಡರ್ ಹಂತದಲ್ಲಿವೆ. ಸದ್ಯದಲ್ಲೇ ಟೆಂಡರ್ ಆಗಲಿದೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ನಿತ್ಯ ಅಪಘಾತವಾಗಿ 10ರಿಂದ 15 ಜನ ಸಾಯುತ್ತಿದ್ದಾರೆ. ಈ ಬಗ್ಗೆ ಹೆದ್ದಾರಿ ಸಚಿವ ಗಡ್ಕರಿ ಗಮನಕ್ಕೆ ತಂದಿದ್ದು, ನಾಲ್ಕುಪಥದಿಂದ ಆರುಪಥಕ್ಕೆ ವಿಸ್ತರಣೆ ಮಾಡಲಾಗುವುದು' ಎಂದು ಹೇಳಿದರು.**

> **'ಜನರಿಂದ ಜನತಾದಳ ಪರಿಕಲ್ಪನೆ ಮೂಲಕ ಪಕ್ಷ ಸಂಘಟನೆ ಮಾಡಲು ನಿಖಿಲ್ ಸುತ್ತಾಡುತ್ತಿದ್ದಾರೆ. ಮತ್ತೊಮ್ಮೆ ಜೆಡಿಎಸ್ ಪಕ್ಷವನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತರಲು ಪಣತೊಟ್ಟಿದ್ದಾರೆ. ಸಮೃದ್ಧ ಕರ್ನಾಟಕದ ಕನಸು ಜೆಡಿಎಸ್‌ನದ್ದು. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕುಮಾರಸ್ವಾಮಿ ಅಧಿಕಾರ ಹಿಡಿದು ಪಂಚರತ್ನ ಜಾರಿ ಆಗಿದ್ದರೆ ಆ ಕನಸು ನನಸಾಗುತಿತ್ತು' ಎಂದರು.'ಕಾಂಗ್ರೆಸ್ ಸರ್ಕಾರ ಸೋಲಿನ ಭಯದಿಂದ ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾವಣೆ ನಡೆಸಲು ಹಿಂದೇಟು ಹಾಕುತ್ತಿದೆ. ರಾಜ್ಯದಲ್ಲಿ ಮುಂದೆ ಜೆಡಿಎಸ್ ಬಿಜೆಪಿ ಮೈತ್ರಿಕೂಟ ಸರ್ಕಾರ ಬರಲಿದೆ. ಸಣ್ಣಪುಟ್ಟ ವ್ಯತ್ಯಾಸ ಇದ್ದರೂ ಎಲ್ಲರೂ ಜೊತೆಯಲ್ಲಿ ಸಾಗೋಣ' ಎಂದು ಮನವಿ ಮಾಡಿದರು.**

• ದ್ವಿಮುಖ ವಾಹನ ಸಂಚಾರವಿದ್ದ ಈ ರಸ್ತೆಯನ್ನು ಏಕಮುಖ ಮಾಡಿರುವುದರಿಂದ ಸಂಚಾರ ವ್ಯವಸ್ಥೆಗೆ ಸಮಸ್ಯೆ

# ಕ್ಲಾಕ್ ಟವರ್ - ಸ್ಟೇಟ್‌ಬ್ಯಾಂಕ್ ದ್ವಿಮುಖ ಸಂಚಾರ: ವರದಿ ಸಲ್ಲಿಸಲು ಡಿಸಿ ಸೂಚನೆ

• ಉದಯವಾಹಿನಿ ಮಂಗಳೂರು

ನಗರದ ಕೇಂದ್ರಭಾಗ ಕ್ಲಾಕ್‌ಟವರ್‌ನಿಂದ ಸ್ಟೇಟ್ ಬ್ಯಾಂಕ್ ವರೆಗೆ ಏಕಮುಖ ವಾಹನ ಸಂಚಾರವನ್ನು ದ್ವಿಮುಖ ಸಂಚಾರವಾಗಿ ಮಾರ್ಪಡಿಸುವ ಬಗ್ಗೆ ಕೂಡಲೇ ವರದಿ ಸಲ್ಲಿಸಲು ಜಿಲ್ಲಾಧಿಕಾರಿ ಹೆಚ್.ವಿ ದರ್ಶನ್

> **ಶಾಲಾ ಬಸ್ ಮತ್ತು ವಾಹನಗಳಲ್ಲಿ ಅಧಿಕ ಮಕ್ಕಳನ್ನು ಸಾಗಿಸುವುದರ ಬಗ್ಗೆ ದೂರುಗಳು ಬಂದಿದ್ದು, ಆ ವಾಹನಗಳಲ್ಲಿ ಎಷ್ಟು ಮಕ್ಕಳು ಸಂಚರಿಸುತ್ತಿದ್ದಾರೆ ಎಂಬುದರ ಬಗ್ಗೆ ಆಯಾಯ ಶಾಲೆಗಳಿಂದ ವರದಿ ಪಡೆಯಬೇಕು. ಜಲಜೀವನ್ ಮಿಷನ್ ಪೈಪ್‌ಲೈನ್ ಕಾಮಗಾರಿಯಲ್ಲಿ ಲೋಕೋಪಯೋಗಿ ರಸ್ತೆಗಳಿಗೆ ಅಡಚಣೆಯಾಗಿರುವ ಬಗ್ಗೆ ಸಂಬಂಧಿಸಿದವರಿಗೆ ದಂಡ ವಿಧಿಸುವಂತೆ ಜಿಲ್ಲಾಧಿಕಾರಿ ಹೆಚ್.ವಿ ದರ್ಶನ್ ಸೂಚಿಸಿದರು.**

ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅವರು ಜಿಲ್ಲಾಧಿಕಾರಿ ಕಚೇರಿ ಪ್ರಜಾಸೌಧ ಸಭಾಂಗಣದಲ್ಲಿ ನಡೆದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಹಿಂದೆ ದ್ವಿಮುಖ ವಾಹನ


ಉದಯವಾಹಿನಿ ಚಿತ್ರ

**ಸಂಚಾರ ವ್ಯವಸ್ಥೆಗೆ ಸಮಸ್ಯೆ**

ಸಂಚಾರವಿದ್ದ ಈ ರಸ್ತೆಯನ್ನು ಏಕಮುಖ ಮಾಡಿರುವುದರಿಂದ ಸಾರ್ವಜನಿಕರಿಗೆ ಹಾಗೂ ಸಂಚಾರ ವ್ಯವಸ್ಥೆಗೆ ಸಮಸ್ಯೆ ಉಂಟಾಗಿರುವ ಬಗ್ಗೆ ದೂರುಗಳು ಬಂದಿದ್ದು, ಈ ನಿಟ್ಟಿನಲ್ಲಿ ಪೊಲೀಸ್ ಆಯುಕ್ತರೊಂದಿಗೆ ಚರ್ಚಿಸಿ ದ್ವಿಮುಖ ಸಂಚಾರಕ್ಕೆ ಕೈಗೊಳ್ಳಬೇಕಾದ ಕಾಮಗಾರಿ ಮತ್ತು ಅಗತ್ಯವಿರುವ ಅನುದಾನದ ಕುರಿತು ಮುಂದಿನ ವಾರ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಸ್ಮಾರ್ಟ್ ಸಿಟಿ ಮತ್ತು ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಸಭೆಯಲ್ಲಿ ಉಪಸ್ಥಿತರಿದ್ದ ಉಪ ಪೊಲೀಸ್ ಆಯುಕ್ತ ಸಿದ್ದಾರ್ಥ್ ಗೋಯಲ್ ಮಾತನಾಡಿ, ಕ್ಲಾಕ್‌ಟವರ್ ರಸ್ತೆಯ ಸಮೀಪದಲ್ಲಿ ಪೊಲೀಸ್ ಠಾಣೆ, ಅಗ್ನಿಶಾಮಕ ಠಾಣೆ ಸೇರಿದಂತೆ ಹಲವು ಪ್ರಮುಖ ಕಚೇರಿಗಳಿದ್ದು, ಏಕಮುಖ ಸಂಚಾರದಿಂದ ತುರ್ತು ಸಂದರ್ಭಗಳಲ್ಲಿ ಸುತ್ತಿ ಬಳಸಿ ತೆರಳಬೇಕಾದ ಅನಿವಾರ್ಯತೆ ಇದೆ. ಅಲ್ಲದೆ ಪ್ರಸ್ತುತ ಈ ರಸ್ತೆಯ ಒಂದು ಬದಿಯಲ್ಲಿ ಬಸ್ ಹಾಗೂ ಇತರೆ ವಾಹನಗಳ ಪಾರ್ಕಿಂಗ್ ತಾಣವಾಗಿ ಮಾರ್ಪಟ್ಟಿದೆ ಎಂದು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಸಭೆಯಲ್ಲಿದ್ದ ಸ್ಮಾರ್ಟ್ ಸಿಟಿ ಅಧಿಕಾರಿಗಳು ಮಾತನಾಡಿ, ಈ ರಸ್ತೆಯನ್ನು ಏಕಮುಖ ಸಂಚಾರ ರಸ್ತೆಯಾಗಿ ಅಭಿವೃದ್ಧಿ ಪಡಿಸಿ ಕಾಮಗಾರಿಯನ್ನು ಈಗಾಗಲೇ ಮಹಾನಗರಪಾಲಿಕೆಗೆ ಹಸ್ತಾಂತರಿಸಲಾಗಿದೆ ಎಂದು ತಿಳಿಸಿದರು. ಸ್ಟೇಟ್‌ಬ್ಯಾಂಕ್ ಹ್ಯಾಮಿಲ್ಟನ್ ವೃತ್ತವನ್ನು ವೈಜ್ಞಾನಿಕವಾಗಿ ನಿರ್ಮಿಸಲು ಎನ್.ಐ.ಟಿ.ಕೆ ಸಂಸ್ಥೆಯಿಂದ ತಾಂತ್ರಿಕ ವರದಿ ಪಡೆಯಲಾಗಿದ್ದು, ಈ ಕುರಿತು ಕೂಡಲೇ ಕಾರ್ಯ ಪ್ರವೃತ್ತರಾಗುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು. ನಗರದಲ್ಲಿ ಫುಟ್‌ಪಾತ್ ಅತಿಕ್ರಮಿಸಿದ ಅಂಗಡಿಗಳು ಮತ್ತು ಬೀದಿ ಬದಿ

> **ನಗರದಲ್ಲಿ ಟಿಂಟೆಡ್ ಗ್ಲಾಸ್ ಹೊಂದಿರುವ ವಾಹನಗಳ ನಿಯಂತ್ರಿಸಲು ಕಾರ್ಯಾಚರಣೆ ನಡೆಯುತ್ತಿದೆ. ಈ ಬಗ್ಗೆ ಕಾರ್ ಟಿಂಟ್‌ಗಳನ್ನು ತೆಗೆದು ದಂಡ ವಿಧಿಸಲಾಗುತ್ತದೆ. ವಾಹನಗಳಿಗೆ ಟಿಂಟ್ ಹಾಕದಂತೆ ವಾಹನ ಶೋರೂಂಗಳಿಗೆ ಮತ್ತು ವಾಹನ ಅಲಂಕಾರ ಸಂಸ್ಥೆಗಳಿಗೆ ಸೂಚಿಸಲಾಗಿದೆ. ಟಿಂಟೆಡ್ ಗ್ಲಾಸ್ ಹೊಂದಿರುವ ಕಾರ್‌ನಲ್ಲಿ ಅಪರಾಧ ನಡೆದರೆ ಟಿಂಟ್ ಹಾಕಿದ ಸಂಸ್ಥೆಯನ್ನು ಕೂಡಾ ಅದೇ ಪ್ರಕರಣದಲ್ಲಿ ಆರೋಪಿಯನ್ನಾಗಿ ಮಾಡಲಾಗುವುದು. -ಡಿಸಿಪಿ**

ವ್ಯಾಪಾರಿಗಳ ಒತ್ತುವರಿಯನ್ನು ತೆರವುಗೊಳಿಸಬೇಕು. ಪದೇ ಪದೇ ಒತ್ತುವರಿ ತೆರವು ಕಾರ್ಯಾಚರಣೆ ಬದಲು ಶಾಶ್ವತವಾಗಿ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

**ಬೈಕಂಪಾಡಿ ಅಂಡರ್‌ಪಾಸ್:** ರಾಷ್ಟ್ರೀಯ ಹೆದ್ದಾರಿ ಬೈಕಂಪಾಡಿಯಲ್ಲಿ ಜೋಕಟ್ಟೆ ಕ್ರಾಸ್ ಬಳಿ ವಾಹನಗಳು ಕೈಗಾರಿಕಾ ಪ್ರದೇಶಕ್ಕೆ ತಿರುವು ಪಡೆಯಲು ಅಂಡರ್‌ಪಾಸ್ ಮಂಜೂರಾಗಿದ್ದು, ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ

> **ಹಂಪನಕಟ್ಟೆ ಸಿಗ್ನಲ್ ವೃತ್ತದಲ್ಲಿ ರಸ್ತೆ ಮಧ್ಯೆ ಶಾಶ್ವತ ಬ್ಯಾರಿಕೇಡ್‌ಗಳನ್ನು ಅಳವಡಿಸಿರುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ. ನಗರದ ಕರಾವಳಿ ಜಂಕ್ಷನ್, ಬಂಟ್ಸ್ ಹಾಸ್ಟೆಲ್ ಜಂಕ್ಷನ್, ಬಲ್ಮಠ ಜಂಕ್ಷನ್‌ಗಳಲ್ಲಿ ರಸ್ತೆ ವಿಭಜಕಗಳಿಗೆ ಕಬ್ಬಿಣದ ರೀಲಿಂಗ್ಸ್ ಹಾಕಲು ಒಂದು ತಿಂಗಳಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ನಗರ ಪಾಲಿಕೆ ಆಯುಕ್ತರು ತಿಳಿಸಿದರು. ಅಲ್ಲದೆ ಈ ಜಂಕ್ಷನ್‌ಗಳಲ್ಲಿರುವ ಬಸ್ ನಿಲ್ದಾಣಗಳನ್ನು ಸಮೀಪದ ಜಾಗಕ್ಕೆ ಸ್ಥಳಾಂತರಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.**

ನಿರ್ದೇಶಕ ಜಾವಿದ್ ಅಬ್ದುಲ್ಲಾ ಸಭೆಗೆ ತಿಳಿಸಿದರು.

ಕೂಳೂರು ಬೈಕಂಪಾಡಿ ರಸ್ತೆ, ಪಣಂಬೂರ್ ಬೀಚ್ ಮತ್ತು ತಣ್ಣೀರು ಬಾವಿ ರಸ್ತೆಯಲ್ಲಿ ಮತ್ತು ಟ್ರಕ್, ಲಾರಿಗಳ ಪಾರ್ಕಿಂಗ್‌ನಿಂದ ಸಂಚಾರ ವ್ಯವಸ್ಥೆಗೆ ಅಡಚಣೆ ಉಂಟಾಗುತ್ತಿರುವುದರಿಂದ ಎನ್.ಎಂ.ಪಿ.ಎ ವತಿಯಿಂದ ಪ್ರಾಧಿಕಾರದ ಜಮೀನಿನಲ್ಲಿ ಟ್ರಕ್ ನಿಲುಗಡೆಗೆ ಸ್ಥಳಾವಕಾಶ ಒದಗಿಸುವ ಬಗ್ಗೆ ಎನ್.ಎಂ.ಪಿ.ಎ ಅಧಿಕಾರಿಗಳೊಂದಿಗೆ ಚರ್ಚಿಸುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

## ಬುಡ ಮೇಲಾಗುತ್ತಿವೆ ರಸ್ತೆಬದಿ ಮರಗಳು: ಕೊಂಬೆಗಳ ತೆರವಿಗೆ ಆಗ್ರಹ

• ಉದಯವಾಹಿನಿ ಸೊರಬ

ತಾಲ್ಲೂಕಿನಾದ್ಯಂತ ಸುರಿಯುತ್ತಿರುವ ಮಳೆ ಹಾಗೂ ಬೀಸುತ್ತಿರುವ ಗಾಳಿಗೆ ರಸ್ತೆ ಬದಿಯ ಮರಗಳು, ಕೊಂಬೆಗಳು ಧರೆಗುರುಳುತ್ತಿದ್ದು, ಸಾರ್ವಜನಿಕರನ್ನು ಆತಂಕಕ್ಕೀಡು ಮಾಡಿದೆ.

ತಾಲ್ಲೂಕಿನಲ್ಲಿ ಪ್ರತಿ ಬಾರಿ ರಭಸವಾದ ಮಳೆ, ಗಾಳಿಗೆ ಮರಗಳು, ವಿದ್ಯುತ್ ಕಂಬಗಳು ನೆಲಕ್ಕುರುಳಿ ಸಾಕಷ್ಟು ಅನಾಹುತ ಸೃಷ್ಟಿಸುತ್ತಿವೆ. ವಾಹನಗಳ ಮೇಲೆ ಬಿದ್ದು ಅಪಾರ ನಷ್ಟ ಉಂಟು ಮಾಡುತ್ತಿವೆ. ಸಂಚರಿಸುವ ವಾಹನಗಳ ಮೇಲೆ ಬಿದ್ದ ನಿದರ್ಶನಗಳಿವೆ. ಅಪಾಯ ಉಂಟು ಮಾಡಬಹುದಾದ ಮರಗಳ ತೆರವಿಗೆ ಅರಣ್ಯ ಇಲಾಖೆ ಮುಂದಾಗಬೇಕಿದೆ ಎಂಬುದು ಸಾರ್ವಜನಿಕರ ಒತ್ತಾಯ.

ತಾಲ್ಲೂಕಿನ ಉಳವಿ ಸಮೀಪದ ಕರ್ಜಿಕೊಪ್ಪ ಬಳಿ ಈಚೆಗೆ ಕ್ಯಾಂಟರ್ ಮೇಲೆ ಮರ ಬಿದ್ದು ಇಬ್ಬರು ಗಂಭೀರವಾಗಿ ಗಾಯಗೊಂಡಿದ್ದರು. ಸಾಗರ- ಸೊರಬ ಮಾರ್ಗದ ಅವಲಗೋಡು ಭಾಗದಲ್ಲಿ ಬೃಹತ್ ಮರ ಬಿದ್ದು ಸಂಚಾರ ಅಸ್ತವ್ಯಸ್ತವಾಗಿತ್ತು. ಅಲ್ಲದೆ ಬೊಮ್ಮನಳ್ಳಿ ರಸ್ತೆ ಬದಿ ಹಾಗೂ ಸೊರಬ-ಸಿದ್ದಾಪುರ ರಸ್ತೆಯ ಪಕ್ಕದಲ್ಲಿದ್ದ ಮರಗಳು ನೆಲಕ್ಕುರುಳಿದ್ದವು. ಹೊಳೆಕೊಪ್ಪ


ಉದಯವಾಹಿನಿ ಚಿತ್ರ

ಭಾಗದಲ್ಲಿ ರಸ್ತೆ ಅಂಚಿನ ಅಕೇಶಿಯಾ ಮರಗಳು ಬುಡಮೇಲಾಗುತ್ತಿವೆ. ಹಲವೆಡೆ ವಿದ್ಯುತ್ ತಂತಿಗಳು ಹರಿದು, ಕಂಬಗಳು ಧರೆಗುರುಳಿ ಅನಾಹುತ ಸೃಷ್ಟಿಸುತ್ತಿವೆ.

ಮುಂಗಾರು ಪ್ರಾರಂಭದಲ್ಲಿ ಸುರಿದ ಮಳೆಗೆ ಒಂದೇ ದಿನ ತಾಲ್ಲೂಕಿನ ಕುಮ್ಮೂರು, ಚಿಕ್ಕಾವಲಿ, ಎಡಗೊಪ್ಪ, ಹಿರಿಯಾವಲಿ, ಉದ್ರಿ, ಬಿಳಾಗಿ ಭಾಗದಲ್ಲಿ 50ಕ್ಕೂ ಹೆಚ್ಚು ಮರಗಳ ಕೊಂಬೆಗಳು ಮುರಿದು ಬಿದ್ದಿದ್ದವು. ಮಳೆ ಸಂದರ್ಭದಲ್ಲಿ ಸಾರ್ವಜನಿಕರು, ವಾಹನ ಸವಾರರು ಜೀವಭಯದಲ್ಲೇ ಸಾಗುವಂತಾಗಿದೆ ಎಂದು ನಿತ್ಯ ದ್ವಿಚಕ್ರವಾಹನದಲ್ಲಿ ಸಂಚರಿಸುವ ರಾಮಪ್ಪ ಜಡ್ಡಳ್ಳಿ ಹೇಳುತ್ತಾರೆ. ಮುಂಗಾರು ಹಂಗಾಮಿನ ಮಳೆ ಇನ್ನೂ ಸುರಿಯಲಿದೆ. ಕೂಡಲೇ ಎಚ್ಚೆತ್ತು, ರಸ್ತೆಬದಿ ಒಣಗಿರುವ, ರಸ್ತೆಗೆ ಚಾಚಿಕೊಂಡಿರುವ, ವಿದ್ಯುತ್ ತಂತಿಗೆ ಚಾಚಿಕೊಂಡಿರುವ ಮರ ಹಾಗೂ

**ಮೇಲಧಿಕಾರಿಗಳ ಅನುಮತಿ ಬೇಕು**

> **'ಮರ ರೆಂಬೆ-ಕೊಂಬೆ ತೆರವಿಗೆ ನಮ್ಮಲ್ಲಿ ನಿರ್ವಹಣಾ ತಂಡ ಇದೆ. ಸಾರ್ವಜನಿಕರಿಂದ ದೂರು ಬಂದಾಗ ನಮ್ಮ ತಂಡ ಶೀಘ್ರವೇ ಆ ಸ್ಥಳಕ್ಕೆ ತೆರಳಿ ತೆರವು ಮಾಡುತ್ತದೆ. ಆದರೆ ಮರಗಳ ತೆರವಿಗೆ ಮೇಲಧಿಕಾರಿಗಳ ಅನುಮತಿ ಬೇಕು. ಈಗಾಗಲೇ ಅಪಾಯಕಾರಿ ಮರಗಳ ತೆರವಿಗೆ ಅರ್ಜಿಗಳು ಬಂದಿದ್ದು ಅಂತಹ ಮರಗಳ ತೆರವು ಕಾರ್ಯ ನಡೆಯುತ್ತಿದೆ' ಎಂದು ವಲಯ ಅರಣ್ಯಾಧಿಕಾರಿ ಜಾವಿದ್ ಭಾಷಾ ತಿಳಿಸಿದ್ದಾರೆ.**

ಕೊಂಬೆಗಳ ತೆರವಿಗೆ ಅರಣ್ಯ ಇಲಾಖೆ ಮುಂದಾಗಬೇಕು. ಸೊರಬ-ಆನವಟ್ಟಿ ಮಾರ್ಗದ ರಸ್ತೆಯಲ್ಲಿ ಮರದ ಕೊಂಬೆಗಳು ರಸ್ತೆಗೆ ಚಾಚಿಕೊಂಡಿವೆ. ವಿದ್ಯುತ್ ತಂತಿಗೂ ಅವು ತಗುಲಿವೆ. ಅನಾಹುತ ಸಂಭವಿಸುವ ಮುನ್ನ ಕತ್ತರಿಸಬೇಕಿದೆ ಎಂದು ಕುಪ್ಪಗಡ್ಡೆ ಗ್ರಾಮದ ನಿವಾಸಿ ನಿರಂಜನ್ ಕೋರುತ್ತಾರೆ.

## ಸರ್ಕಾರಿ ಪ್ರಾಥಮಿಕ ಶಾಲೆಯ ಬಯಲೇ ಶೌಚಾಲಯ

• ಉದಯವಾಹಿನಿ ಕುಷ್ಟಗಿ

ಕಿತ್ತುಹೋದ ಬಾಗಿಲುಗಳು, ಮಕ್ಕಳ ಕೈಗೆಟಕುವ ವಿದ್ಯುತ್ ತಂತಿ, ಬಯಲು ಶೌಚಾಲಯವೇ ಗತಿ. ಶಾಲೆ ಬಳಿ ಆವರಿಸಿದ ಮಲೀನ ನೀರು. ತಾಲ್ಲೂಕಿನ ಸಂಗನಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿರೇತೆಮ್ಮಿನಾಳ ಸರ್ಕಾರಿ ಪ್ರಾಥಮಿಕ ಶಾಲೆಯ ಚಿತ್ರಣ. ಒಂದೆಡೆ ಮೂಲಸೌಲಭ್ಯಗಳ ಕೊರತೆ. ಮತ್ತೊಂದೆಡೆ ಜೀವಕ್ಕೆ ಅಪಾಯ ಒಡ್ಡುವಂತೆ ಜೋತುಬಿದ್ದ ವಿದ್ಯುತ್ ತಂತಿ. ಜೊತೆಗೆ ನೈರ್ಮಲ್ಯದ ಕೊರತೆ. ಇಂಥ ಪರಿಸರ ವಿದ್ಯಾರ್ಥಿಗಳ ಸುಗಮ ಓದಿಗೆ ಅಡ್ಡಿಯಾಗಿದೆ. ಈ ಬಗ್ಗೆ ಗಮನ ಹರಿಸುವಂತೆ ಮನವಿ ಮಾಡಿದರೂ ಗ್ರಾಮ ಪಂಚಾಯಿತಿ ಹಾಗೂ ಸಂಬಂಧಿಸಿದ ಅಧಿಕಾರಿಗಳ ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಅನೇಕ ತಿಂಗಳಾದರೂ ಶೌಚಾಲಯ ಕಟ್ಟಡ ಮುಗಿದಿಲ್ಲ. ಮಕ್ಕಳು ಶೌಚಕ್ಕೆ ಬಯಲಿಗೆ ತೆರಳುತ್ತಾರೆ.

ಸುತ್ತಲಿನ ಪರಿಸರ ಮಲಿನಗೊಂಡಿದೆ, ಅಡುಗೆ ಕೊಠಡಿ ಕಾಮಗಾರಿಯೂ ಅಪೂರ್ಣವಾಗಿದ್ದು, ಹಳೆಯ ಕಾಗದಪತ್ರಗಳ ಸಂಗ್ರಹ ತಾಣವಾಗಿದೆ. ಮಕ್ಕಳು ನೀರು ಕುಡಿಯಲು ನಲ್ಲಿ ಬಳಿ ಹೋದರೆ ವಿದ್ಯುತ್ ವೈರ್‌ಗಳು ಕೈಗೆ ಸಿಗುವಂತಿವೆ. ಅದೃಷ್ಟವಶಾತ್ ಈವರೆಗೂ


ಉದಯವಾಹಿನಿ ಚಿತ್ರ

**ಗ್ರಾಮಸ್ಥರ ಕಳವಳ**

> **ಈ ಸಮಸ್ಯೆ ಕುರಿತು ಈಚೆಗೆ ಮಕ್ಕಳ ಸಹಾಯವಾಣಿ 1098ಗೆ ಕರೆಯೂ ಬಂದಿತ್ತು. ಅದರನ್ವಯ ಈಚೆಗೆ ಅಲ್ಲಿಗೆ ಭೇಟಿ ನೀಡಿದ ಮಕ್ಕಳ ಸಹಾಯವಾಣಿ ಸಿಬ್ಬಂದಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಅವರನ್ನು ಸಂಪರ್ಕಿಸಲು ಹಲವು ಸಲ ಫೋನ್ ಕರೆ ಮಾಡಿದರೂ ಸ್ಪಂದಿಸಲಿಲ್ಲ. ಅಷ್ಟೇ ಅಲ್ಲ, ವಿಷಯ ಗಮನಕ್ಕೆ ಬಂದು ನಾಲ್ಕೈದು ದಿನಗಳಾದರೂ ಏನೂ ಸ್ಪಂದನೆ ಸಿಕ್ಕಿಲ್ಲ ಎಂಬುದು ಗ್ರಾಮಸ್ಥರ ಕಳವಳ.**

ತೊಂದರೆಯಾಗಿಲ್ಲ. ಕಳಪೆ ಕಾಮಗಾರಿಯಿಂದಾಗಿ ಕೆಲ ಕೊಠಡಿಗಳ ಬಾಗಿಲುಗಳು ಕಿತ್ತುಹೋಗಿದ್ದು, ಶಾಲೆ ದುಸ್ಥಿತಿಗೀಡಾಗಿದೆ. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗೆ ತಿಳಿಸಿದರೂ ಈ ಸಂಬಂಧ ಸೂಕ್ತ ಕ್ರಮವಾಗಿಲ್ಲ.

## ಮೃತರ ಸಾವಿಗೆ ಕಲುಷಿತ ನೀರು ಕಾರಣವಲ್ಲ

• ಉದಯವಾಹಿನಿ ಯಾದಗಿರಿ

ಮೃತರ ಸಾವಿಗೆ ಕಲುಷಿತ ನೀರು ಕಾರಣ ಅಲ್ಲ ಎಂಬುವುದು ಆರೋಗ್ಯ ಇಲಾಖೆಯ ವರದಿಯಿಂದ ತಿಳಿದುಬಂದಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಸ್ಪಷ್ಟನೆ ನೀಡಿದ್ದಾರೆ.

ಜಿಲ್ಲೆಯ ಸುರಪುರ ತಾಲ್ಲೂಕಿನ ಮಾಲಗತ್ತಿ ಗ್ರಾಮ ಪಂಚಾಯತಿ ವ್ಯಾಪ್ತಿಯ ತಿಪ್ಪನಟಗಿ ಗ್ರಾಮದಲ್ಲಿ ಕಲುಷಿತ ಕುಡಿಯುವ ನೀರಿನ ಸೇವನೆಯಿಂದ 3 ಜನ ಮೃತಪಟ್ಟಿರುವುದಾಗಿ ವಿವಿಧ ದಿನ ಪತ್ರಿಕೆಗಳಲ್ಲಿ ವರದಿ ಪ್ರಕಟವಾಗಿದ್ದು, ಸದರಿ ಪ್ರಕರಣಗಳ ಬಗ್ಗೆ ಕೈಗೊಂಡ ಪರಿಶೀಲನೆಯಲ್ಲಿ ಮೃತಪಟ್ಟ 3 ಜನ ಈ ಮೊದಲೇ ತೀವ್ರ ತರಹದ ಅನಾರೋಗ್ಯದಿಂದ ಬಳಲುತ್ತಿದ್ದು, ಅವರ ಸಾವಿಗೆ ಕಲುಷಿತ ನೀರು ಕಾರಣ ಅಲ್ಲ ಎಂಬುವುದು ಆರೋಗ್ಯ ಇಲಾಖೆಯ ವರದಿಯಿಂದ ತಿಳಿದುಬಂದಿದೆ. ಅಲ್ಲದೆ ಈ ಕುಟುಂಬದ ಇತರ ಸದಸ್ಯರಿಗೆ ಕುಡಿಯುವ



ಉದಯವಾಹಿನಿ ಚಿತ್ರ

ನೀರಿನಿಂದ ಉಂಟಾಗುವ ಯಾವುದೇ ರೀತಿಯ ಅನಾರೋಗ್ಯ ಸಮಸ್ಯೆಗಳು ಕಂಡು ಬಂದಿರುವುದಿಲ್ಲ. ಪ್ರಸ್ತುತ ತಿಪ್ಪನಟಗಿ ಗ್ರಾಮಕ್ಕೆ ಪೂರೈಕೆ ಮಾಡುತ್ತಿರುವ ಎಲ್ಲಾ ಜಲಮೂಲಗಳ ಕುಡಿಯುವ ನೀರಿನ ಮಾದರಿಗಳನ್ನು ಭೌತಿಕ, ಜೈವಿಕ, ಹಾಗೂ ರಾಸಾಯನಿಕ ಪರೀಕ್ಷೆಗೆ ಒಳಪಡಿಸಿದ್ದು, ನೀರು ಕುಡಿಯಲು ಯೋಗ್ಯವಿರುವುದಾಗಿ ವರದಿ ಬಂದಿರುತ್ತದೆ. ಪ್ರಸ್ತುತ ತಿಪ್ಪನಟಗಿ ಗ್ರಾಮದಲ್ಲಿ ಆರೋಗ್ಯ ಕ್ಯಾಂಪ್ ವ್ಯವಸ್ಥೆಯೊಂದಿಗೆ ಮುನ್ನೆಚ್ಚರಿಕೆಯ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಮೀನಿಗೆ ತೆರಳುವ ದಾರಿಗಾಗಿ ಜಗಳ, ತಂದೆ ಮಗ ಸಾವು, ಮುಗಿಲು ಮುಟ್ಟಿದ ಆಕ್ರಂದನ

• ಉದಯವಾಹಿನಿ ವಡಗೇರಾ

ಪಟ್ಟಣದಲ್ಲಿ ಕೆಲ ದಿನಗಳ ಹಿಂದೆ ಜಮೀನಿಗೆ ತೆರಳುವ ದಾರಿಯ ಸಂಬಂಧವಾಗಿ ದಲಿತ ಸಮುದಾಯದ ನಿಂಗಪ್ಪನ ಕುಟುಂಬದವರು ಮತ್ತು ಸೈಯದ್ ಅಲಿ ಮುಲ್ಲಾ ಅವರ ನಡುವೆ ಜಗಳ ನಡೆದಿತ್ತು ಈ ವಿಷಯವಾಗಿ ದಲಿತ ಸಮುದಾಯದವರು ಜಾತಿನಿಂದನೆ ಕೇಸ್ ಹಾಕುವುದಾಗಿ ಹೇಳಿದ್ದರು ಆದರೆ ಹಿರಿಯರ ನ್ಯಾಯ ಪಂಚಾಯಿತಿ ಮಾಡಿ ಇಬ್ಬರನ್ನು ಕೂಡಿಸಿ ಸಮಾಧಾನ ಪಡಿಸಿ ಬುದ್ಧಿ ಮಾತು ಹೇಳಿದ್ದರು. ಮಂಗಳವಾರದಂದು ಮೈಬೂಬ್ ತಮ್ಮ ಹೊಲಕ್ಕೆ ಟ್ರ್ಯಾಕ್ಟರ್ ತೆಗೆದುಕೊಂಡು ಕೆಲಸಕ್ಕೆ ತೆರಳುವ ಸಮಯದಲ್ಲಿ ದಲಿತ ಸಮುದಾಯದ ನಿಂಗಪ್ಪನ ಸಂಬಂಧಿ ಈಶಪ್ಪ ನಾಯ್ಕಲ್ ಎಂಬುವವರು ಈ ಯುವಕನ ಜೊತೆ ಜಗಳ ತೆಗೆದು ಟ್ರ್ಯಾಕ್ಟರ್ ಮತ್ತು ಯುವಕನನ್ನು ಪೊಲೀಸ್ ಠಾಣೆಗೆ ಕರೆತಂದು ರಾದ್ಧಂತ ಮಾಡಿ ಜೀವ ಬೆದರಿಕೆ ಹಾಕಿ ಜಾತಿ ನಿಂದನೆ ಕೇಸ್ ಹಾಕುವುದಾಗಿ ಹೇಳಿದ್ದರು. ಇದರಿಂದ ಮನನೊಂದ ಯುವಕ ಮೈಬೂಬ್ ತಂದೆ ಸೈಯದ್ ಅಲಿ ಮುಲ್ಲಾ





(19) ವಡಗೇರಾ ಹೊರಭಾಗದ ಜಮೀನಿನಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ ಆದರೆ ಕುಟುಂಬಸ್ಥರು ಇಲ್ಲ ಅವರೇ ನನ್ನ ಮಗನನ್ನು ಕೊಲೆ ಮಾಡಿದ್ದರೇ ಎಂದು ಆರೋಪಿಸಿ ವಡಗೇರಾ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಮಗನ ಸಾವು ಕಣ್ಣಾರೆ ಕಂಡ ಸೈಯದ್ ಅಲಿ ಮುಲ್ಲಾ(45) ಆಘಾತಗೊಂಡು ಕುಸಿದು ಬಿದ್ದಿದ್ದಾನೆ ತಕ್ಷಣ ಆತನನ್ನು ಕಲಬುರ್ಗಿ ಜಯದೇವ ಆಸ್ಪತ್ರೆಗೆ ದಾಖಲಿಸಿದ್ದಾರೆ ಆದರೆ ಚಿಕಿತ್ಸೆ ಫಲಿಸದೆ ಅವರು ಗುರುವಾರ ಬೆಳಿಗ್ಗೆ ಹೃದಯಾಘಾತದಿಂದ ಮೃತಪಟ್ಟಿದ್ದು ತಂದೆ ಮಗನನ್ನು ಕಳೆದುಕೊಂಡ ಇಡಿ ಕುಟುಂಬ ಕಂಗಾಲು ಕುಟುಂಬಸ್ಥರಲ್ಲಿ ಮುಗಿಲು ಮುಟ್ಟಿದ ಆಕ್ರಂದನ ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಕಠಿಣ ಶಿಕ್ಷೆಗೆ ಒಳಪಡಿಸುವಂತೆ ಮೃತರ ಕುಟುಂಬಸ್ಥರು ಆಗ್ರಹಿಸಿದ್ದಾರೆ. ಈ ಘಟನೆ ಕುರಿತು ರಾಜ್ಯ ರೈತ ಸಂಘ ಹಸಿರು ಸೇನೆ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ ಮಾತನಾಡಿ ತಾಲ್ಲೂಕಿನಲ್ಲಿ ರೈತರಿಗೆ ಜಮೀನಿನ ದಾರಿಯ ವಿಷಯವಾಗಿ ಮತ್ತು ಮಳೆ ನೀರು ಹರಿಯುವುದರ ಕುರಿತು ಹಲವಾರು ರೈತರು ಇನ್ನಿತರ ರೈತರಿಗೆ ವಿನಾಕಾರಣ ಕಿರುಕುಳ ದಬ್ಬಾಳಿಕೆ ಮಾಡುತ್ತಿದ್ದಾರೆ ಹೈಕೋರ್ಟ್ ಆದೇಶವೇ ಇದೆ ರೈತರ ಹೊಲಗಳಿಗೆ ತೆರಳಲು ಮಳೆ ನೀರು ಹರಿಯಲು ಯಾವುದೇ ತಕರಾರು ಮಾಡಬಾರದು ಎಂದು ಆದೇಶವಿದೆ ಆದರೆ ಕೆಲವರು ವಿನಾಕಾರಣ ತೊಂದರೆ ನೀಡುತ್ತಿರುವುದು ಸರಿಯಲ್ಲ ಜಿಲ್ಲೆಯಾದ್ಯಂತ ಇಂತಹ ಸಮಸ್ಯೆಗಳು ಹೆಚ್ಚಾಗಿವೆ ಹಲವು ಬರೀ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು ಇಲ್ಲಿಯವರೆಗೆ ಯಾವುದೇ ರೀತಿಯಾದ ಪ್ರಯೋಜನವಾಗಿಲ್ಲ ಈಗಲಾದರೂ ಕೂಡಲೆ ಈ ಕುರಿತು ಜಿಲ್ಲಾ ಆಡಳಿತ ಹಾಗೂ ತಾಲ್ಲೂಕು ಆಡಳಿತ ದಬ್ಬಾಳಿಕೆ ಕಿರುಕುಳ ನೀಡುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಹೊಲದ ದಾರಿಯ ವಿಷಯವಾಗಿ ಎರಡು ಜೀವಗಳು ಬಲಿಯಾಗಿರುವುದು ಅತ್ಯಂತ ನೋವಿನ ಸಂಗತಿ ಮೃತರು ಬಡ ರೈತ ಕುಟುಂಬದವರಾಗಿದ್ದು ಜಿಲ್ಲಾಡಳಿತ ಸರಕಾರದ ಗಮನಕ್ಕೆ ತಂದು ಇವರಿಗೆ ಸೂಕ್ತ ಪರಿಹಾರ ಒದಗಿಸುವಂತೆ ರೈತ ಸಂಘದ ಜಿಲ್ಲಾಧ್ಯಕ್ಷ ಮಲ್ಲನಗೌಡ ಹಗರಟಗಿ ಮನವಿ ಮಾಡಿಕೊಂಡಿದ್ದಾರೆ.

## ಚಿನ್ನದ ಸಾಲ ಮರುಪಾವತಿಗೆ ಗ್ರಾಹಕರಿಗೆ ನೋಟಿಸ್

• ಉದಯವಾಹಿನಿ ದಾವಣಗೆರೆ

ಚಿನ್ನಾಭರಣ ಅಡವಿಟ್ಟು ಪಡೆದಿದ್ದ ಸಾಲವನ್ನು ಮರುಪಾವತಿಸುವಂತೆ ನ್ಯಾಮತಿ ಪಟ್ಟಣದ ಭಾರತೀಯ ಸ್ಟೇಟ್ ಬ್ಯಾಂಕ್ ಗ್ರಾಹಕರಿಗೆ ನೋಟಿಸ್ ಜಾರಿ ಮಾಡಿದೆ. ಬ್ಯಾಂಕಿನಿಂದ ಕಳುವಾಗಿದ್ದ ಚಿನ್ನಾಭರಣ ಹಸ್ತಾಂತರ ಪ್ರಕ್ರಿಯೆ ಶುರುವಾಗುವ ಮುನ್ನವೇ ಸಾಲ ಮರುಪಾವತಿಸಬೇಕೇ ಎಂಬ ಪ್ರಶ್ನೆ ಗ್ರಾಹಕರನ್ನು ಕಾಡತೊಡಗಿದೆ.

ನ್ಯಾಮತಿಯಲ್ಲಿನ ಎಸ್‌ಬಿಐ ಶಾಖೆಯಲ್ಲಿ 2024ರ ಅಕ್ಟೋಬರ್ 26ರಂದು ದರೋಡೆ ನಡೆದಿತ್ತು. 509 ಗ್ರಾಹಕರಿಗೆ ಸೇರಿದ್ದ 17 ಕೆ.ಜಿ 705 ಗ್ರಾಂ ಚಿನ್ನಾಭರಣವನ್ನು ದುಷ್ಕರ್ಮಿಗಳು ಹೊತ್ತೊಯ್ದಿದ್ದರು. ಪ್ರಕರಣ ಭೇದಿಸಿದ್ದ ಪೊಲೀಸರು, ಮಾರ್ಚ್ 27ರಂದು 6 ಜನರನ್ನು ಬಂಧಿಸಿ 17 ಕೆ.ಜಿ 100 ಗ್ರಾಂ ಚಿನ್ನಾಭರಣ ವಶಕ್ಕೆ ಪಡೆದಿದ್ದರು. ಈ ಚಿನ್ನಾಭರಣವನ್ನು ಗ್ರಾಹಕರಿಗೆ ಹಸ್ತಾಂತರಿಸುವ


ಉದಯವಾಹಿನಿ ಚಿತ್ರ

ಪ್ರಕ್ರಿಯೆ ಆರಂಭವಾಗುವುದಕ್ಕೂ ಮುನ್ನವೇ ಸಾಲ ಮರುಪಾವತಿಸುವಂತೆ ನೋಟಿಸ್ ನೀಡಿರುವುದು ಗ್ರಾಹಕರನ್ನು ಇಕ್ಕಟ್ಟಿಗೆ ಸಿಲುಕಿಸಿದೆ. 90 ಗ್ರಾಂ ಚಿನ್ನಾಭರಣ ಅಡವಿಟ್ಟು ಪತ್ನಿಯ ಹೆಸರಿನಲ್ಲಿ 3 ಲಕ್ಷ ಸಾಲ ಪಡೆದಿದ್ದೆ. ಕಳುವಾಗಿರುವ ಚಿನ್ನಾಭರಣ ಮರಳಿ ಸಿಗುವುದಾದರೆ ಸಾಲ ಮರುಪಾವತಿಸಲು ಸಿದ್ಧ ಎಂದು ಈ ಮೊದಲೇ ಬ್ಯಾಂಕಿಗೆ ತಿಳಿಸಿದ್ದೆ. ಗ್ರಾಹಕರಿಗೆ ತೊಂದರೆ ಆಗದ ರೀತಿಯಲ್ಲಿ ನೋಡಿಕೊಳ್ಳುವ

> **ಚಿನ್ನ ಮತ್ತು ಕಾಗದ ಭದ್ರತೆಯ ಸಾಲ ಹೊರತುಪಡಿಸಿ ಎಂಬ ಉಲ್ಲೇಖ ಹೊಂದಿರುವ ಈ ನೋಟಿಸ್, ಚಿನ್ನಾಭರಣ ಅಡವಿಟ್ಟು ಸಾಲ ಪಡೆದಿರುವವರಲ್ಲಿ ಅಂದಾಜು 200 ಗ್ರಾಹಕರ ಮನೆ ತಲುಪಿದೆ. ಚಿನ್ನದ ಸಾಲಕ್ಕೆ ಸಂಬಂಧಿಸಿದ ನೋಟಿಸ್ ಅಲ್ಲವೆಂದು ಆರಂಭದಲ್ಲಿ ಉಪೇಕ್ಷೆ ಮಾಡಿದ್ದ ಗ್ರಾಹಕರು ಈಗ ಆತಂಕಗೊಂಡಿದ್ದಾರೆ.**

ಆಶ್ವಾಸನೆ ನೀಡಿದ್ದ ಬ್ಯಾಂಕ್, ಏಕಾಏಕಿ ನೋಟಿಸ್ ನೀಡಿದೆ. ಚಿನ್ನದ ಸಾಲಕ್ಕೆ ಸಂಬಂಧಿಸಿದ ಖಾತೆ ಸಂಖ್ಯೆ, ಸಾಲದ ಮೊತ್ತವನ್ನು ಉಲ್ಲೇಖಿಸಿ ಬೆದರಿಸಿದೆ.

## ಕೆಎಂಎಫ್ ಚುನಾವಣೆ: 12 ನಿರ್ದೇಶಕರ ಆಯ್ಕೆ

• ಉದಯವಾಹಿನಿ ಬಳ್ಳಾರಿ,

ನಗರದ ರಾಬಕೊವಿ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಕಚೇರಿಯಲ್ಲಿ, ನಿನ್ನೆ ರಾಯಚೂರು, ಬಳ್ಳಾರಿ, ಕೊಪ್ಪಳ, ವಿಜಯನಗರ ಹಾಲು ಉತ್ಪಾದಕರ ಒಕ್ಕೂಟದ ನಿರ್ದೇಶಕ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಮಾಜಿ ಶಾಸಕ ಭಿಮಾನಾಯ್ಕ ಸೇರಿ 12 ಜನರು ನೂತನವಾಗಿ ಆಯ್ಕೆಯಾಗಿದ್ದಾರೆ.

ಕೊಪ್ಪಳ ಜಿಲ್ಲೆಯ ನಾಲ್ಕು ಸ್ಥಾನಗಳಿಗೆ ಕೃಷ್ಣಾ ರೆಡ್ಡಿ 106 ಮತಗಳು, ಮಹಿಳಾ ಕ್ಷೇತ್ರದಿಂದ ಕುಕನೂರಿನ ಕಮಲವ್ವ 92 ಮತಗಳು, ಮಂಜುನಾಥ್ 94, ಎನ್. ಸತ್ಯನಾರಾಯಣ 93 ಮತಗಳನ್ನು ಪಡೆದು ಆಯ್ಕೆಯಾದರೆ ರಾಯಚೂರು ಜಿಲ್ಲೆಯಿಂದ ಬಿ.ಪ್ರವೀಣ್ ಕುಮಾರ್ 31 ಮತಗಳು, ಅಮರಗುಂಡಪ್ಪ 31 ಮತಗಳು, ಭೀಮನ ಗೌಡ 24 ಮತಗಳು, ಮಹಿಳಾ ಕ್ಷೇತ್ರದಿಂದ ಎನ್.ಸೀತಾರಾಮ ಲಕ್ಷ್ಮಿ ಅವರು 28 ಮತಗಳನ್ನು ಪಡೆದು ಆಯ್ಕೆಯಾಗಿದ್ದಾರೆ. ಇನ್ನು ಅಖಂಡ ಬಳ್ಳಾರಿ ಜಿಲ್ಲೆಯಿಂದ ಮಾಜಿ ಶಾಸಕ ಎಲ್. ಬಿ. ಪಿ. ಭೀಮಾ ನಾಯ್ಕ 183 ಮತಗಳು, ಎಚ್. ಮರಳು ಸಿದ್ದಪ್ಪ 165, ಐಗೋಳು ಚಿದಾನಂದ 159 ಮತಗಳು, ಮಹಿಳಾ ಕ್ಷೇತ್ರದಿಂದ ರತ್ನಮ್ಮ ಎಚ್ 147 ಮತಗಳನ್ನು ಪಡೆದು ಆಯ್ಕೆಯಾದರು ಎಂದು ಚುನಾವಣೆ ಅಧಿಕಾರಿ ಪ್ರಮೋದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಫಲಿತಾಂಶ ಹೊರ ಬೀಳುತ್ತಿದ್ದಂತೆ ಅಪಾರ ಬೆಂಬಲಿಗರು, ಅಭಿಮಾನಿಗಳು ರಾಬಕೋವಿ ಹಾಲು ಒಕ್ಕೂಟದ (ಕೆಎಂಎಫ್) ಕಚೇರಿ ಬಳಿಯ ಶ್ರೀ ಕನಕದಾಸ ವೃತ್ತದ ಬಳಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ನಂತರ ನೂತನ ಸದಸ್ಯರಿಗೆ ಚುನಾವಣೆ ಅಧಿಕಾರಿ ಪ್ರಮೋದ್ ಅವರು ಪ್ರಮಾಣ ಪತ್ರ ವಿತರಿಸಿದರು.

# ಬಾದರ್ಲಿ ಎಂಬುದು ಬ್ರ್ಯಾಂಡ್ ನೇಮ್ ನಮ್ಮದೇ: ಶಾಸಕ ಬಾದರ್ಲಿ

• ದಿ. 13 ರಂದು ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ನಿರ್ದೇಶಕರು ಪದಗ್ರಹಣ, ಗಣ್ಯರು ಆಗಮನ

• ಉದಯವಾಹಿನಿ ಸಿಂಧನೂರು

ಕಲ್ಯಾಣ ಕರ್ನಾಟಕ ಭಾಗದ ರಾಜಕೀಯ ಪಡಸಾಲೆಯಲ್ಲಿ ಬಾದರ್ಲಿ ಎಂಬುದು ಬ್ರ್ಯಾಂಡ್ ನೇಮ್ ಎಂದರೆ ಯಾವುದೇ ಅನುಮಾನವಿಲ್ಲ. ಏಕೆಂದರೆ ಹಲವು ದಶಕಗಳಿಂದಲೂ ರಾಜಕೀಯ ರಣರಂಗದಲ್ಲಿ ಶಾಸಕ ಹಂಪನಗೌಡ ಬಾದರ್ಲಿ ಅವರು ಹಲವು ಚುನಾವಣೆಯಲ್ಲಿ ಗೆದ್ದು ಕೆಲವೇ ಕೆಲವು ಚುನಾವಣೆಯಲ್ಲಿ ಹಿನ್ನಡೆಯಾಗಿದ್ದು ಬಿಟ್ಟರೆ ಜಯ ಎಂಬುದು ಶಾಸಕ ಹಂಪನಗೌಡ ಬಾದರ್ಲಿ ಬೆನ್ನಿಗೆ ಅಂಟಿಕೊಂಡಿದೆ ಎಂದರೆ ತಪ್ಪಾಗಲಾರದು.

**ಹಲವು ದಶಕಗಳಿಂದಲೂ ರಾಜಕೀಯ ರಣರಂಗದಲ್ಲಿ**

ಆದರೆ ಇತ್ತೀಚೆಗೆ ದಿನಮಾನಗಳಲ್ಲಿ ಅದೇ ಶಾಸಕ ಹಂಪನಗೌಡ ಬಾದರ್ಲಿ ಎಂಬ ಬ್ರ್ಯಾಂಡ್ ನೇಮ್ ಎಲ್ಲವೂ ಒಂದು ಕಡೆ ಅಳಿಸಿ ಹೋಗಿ ಎಂಎಲ್ಸಿ ಬಸನಗೌಡ ಬಾದರ್ಲಿ ನೇಮ್ ಇಡೀ ರಾಜ್ಯದಾದ್ಯಂತ ಹೆಸರಾಗಿರುವ. ಹಿನ್ನೆಯಲ್ಲಿ ಈ ಸಿಂಧನೂರು ವಿಧಾನ ಸಭಾ ಕ್ಷೇತ್ರವನ್ನು ತನ್ನ ದಕ್ಕಿಗೆ ತೆಗೆದುಕೊಳ್ಳಬೇಕೆಂದು ನಿಟ್ಟಿನಲ್ಲಿ ಬಸನಗೌಡ ಬಾದರ್ಲಿ ಸ್ವತಃ ತಾತನ ವಿರುದ್ಧವೇ ವಿಧಾನ ಸಭಾ ಚುನಾವಣೆ ಟಿಕೆಟಿಗಾಗಿ ಕೇಂದ್ರ ಹಾಗೂ ರಾಜ್ಯ ಹೈಕಮಾಂಡಗಳಲ್ಲಿ ತಮ್ಮ ಕಸರತ್ತು ಮೂಲಕ ಬಾರಿ ಪೈಪೋಟಿ ನಡೆಸಿದರು.

ಕೊನೆಗೂ ಟಿಕೆಟ್ ತಾತನ ಪಾಲು ಆಯಿತು. ಆಗ ಹಂಪನಗೌಡ ಬಾದರ್ಲಿ ಗೆದ್ದು ಶಾಸಕರಾದರೂ ಮತ್ತೆ ನಾನೇನು ಕಮ್ಮಿ ಇಲ್ಲ ಎಂಬಂತೆ ಬಸನಗೌಡ ಬಾದರ್ಲಿ ಪಕ್ಷದ ಹೈಕಮಾಂಡ್‌ನಲ್ಲಿ ಲಾಬಿ ನಡೆಸಿ ವಿಧಾನ ಪರಿಷತ್ ಸದಸ್ಯರಾಗಿ ಕ್ಷೇತ್ರದಲ್ಲಿ ಆಡಳಿತ ನಡೆಸುವುದಕ್ಕೆ ಶುರುವಾಯಿತು. ಆಗ ಕಡ ಬಂದಿದ್ದು. ಎರಡ್ಮೂರು ತಿಂಗಳ ಹಿಂದೆ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಹಾಗೂ ನಾಮ ನಿರ್ದೇಶಿತ ಸ್ಥಾನವನ್ನು ತಮ್ಮ ತಮ್ಮ ಬೆಂಬಲಿಗರಿಗೆ ಕೊಡುಸುವುದರಲ್ಲಿ ಶಾಸಕ ಹಂಪನಗೌಡ ಬಾದರ್ಲಿ ಮೇಲುಗೈ ಸಾಧಿಸಿದರು. ಎಂಎಲ್ಸಿ ಬಸನಗೌಡ ಬಾದರ್ಲಿಗೆ ಹಿನ್ನಡೆಯಾಗಿತ್ತು.







ಮೊನ್ನೆ ತಾನೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸ್ಥಾನವನ್ನು ಈ ಬಾರಿ. ತಮ್ಮ ಕಾರ್ಯಕರ್ತರ ಬೆಂಬಲಿಗರಿಗೆ ಕೊಡಿಸಬೇಕೆಂದು. ರಾಜಕೀಯ ಜಿದ್ದು ಮೂಲಕ ತಾತ ಮೊಮ್ಮಗನ ನಡುವೆ ಬಾರಿ ಪೈಪೋಟಿ ನಡೆದಿತ್ತು . ಮತ್ತೆ ರಾಜ್ಯ ಹೈಕಮಾಂಡ್ ಅಂಗಳಕ್ಕೆ ಹೋಯ್ತು. ಮತ್ತೊಮ್ಮೆ ರಾಜಕೀಯ ಕಸರತ್ತು ಲಾಬಿ ನಡೆಯುತ್ತಿತ್ತು. ಮತ್ತೊಮ್ಮೆ ಗೆದ್ದು ಶಾಸಕ ಬಾದರ್ಲಿ ಬ್ರ್ಯಾಂಡ್ ನೇಮ್ ನಮ್ಮದೇ ಎಂದು ಇಡೀ ರಾಜ್ಯದಾದ್ಯಂತ ಶಾಸಕ ಹಂಪನಗೌಡ ಬಾದರ್ಲಿ ಸಾಬೀತು ಪಡಿಸುವ ಮೂಲಕ ತೋರಿಸಿ ಕೊಟ್ಟರು.

ಈ ಕಾರ್ಯಕ್ರಮಕ್ಕೆ ಗಣ್ಯಾತಿಗಣ್ಯರು ಆಗಮನ. ಬೈರತಿ ಸುರೇಶ್ ವರು ನಗರಾಭಿವೃದ್ಧಿ ಪ್ರಾಧಿಕಾರದ ಸಚಿವರು ಮತ್ತು ರಹೀಂ ಖಾನ್ ಪೌರಾಡಳಿತ ಸಚಿವರು ಹಾಗೂ ಶರಣು ಪ್ರಕಾಶ್ ಪಾಟೀಲ್ ಸಚಿವರು ವೈದ್ಯಕೀಯ ಶಿಕ್ಷಣ ಕೌಶಲ್ಯಾಭಿವೃದ್ಧಿ ಹಾಗೂ ರಾಯಚೂರು ಜಿಲ್ಲೆಯ ಉಸ್ತುವಾರಿ ಆಗಮಿಸಲಿದ್ದು ಆದ್ದರಿಂದ ಸಾರ್ವಜನಿಕರು ಹಾಗೂ ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪದಗ್ರಹಣ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದ ಶಾಸಕ ಹಂಪನಗೌಡ ಬಾದರ್ಲಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದರು.

> **ಶಾಸಕ ತಮ್ಮ ಸಹೋದರನ ಪುತ್ರ ಬಾಬು ಗೌಡ ಬಾದರ್ಲಿ ಅವರನ್ನು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರನ್ನಾಗಿ ಮಾಡಬೇಕೆಂದು ಛಲ ಬಿಡದ ಕೊನೆಗೂ ತಮ್ಮ ಮಗನನ್ನೇ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷನ್ನಾಗಿ ಮಾಡಿ ಬಾದರ್ಲಿ ಎಂಬ ಗೆಲುವಿನ ಬ್ರ್ಯಾಂಡ್ ನೇಮ್ ನಮ್ಮದೇ ಎಂದು ದಿನಾಂಕ 13 ರಂದು ನೂತನ ಸಿಂಧನೂರು ನಗರಾಭಿವೃದ್ಧಿ ಪ್ರಾಧಿಕಾರದ ಉದ್ಘಾಟನೆ ಕಾರ್ಯಕ್ರಮ ಹಾಗೂ ಅಧ್ಯಕ್ಷರು ನಿರ್ದೇಶಕರು ಪದಗ್ರಹಣ ಕಾರ್ಯಕ್ರಮವನ್ನು ಅದ್ದೂರಿಯಾಗಿ ಮಾಡಲಿದ್ದಾರೆ.**

## ಮಿನಿ ನ್ಯೂಸ್

### ವಸತಿಶಾಲೆಯಲ್ಲಿ ವಿದ್ಯಾರ್ಥಿ ಸಾವು ಪಾಲಕರ ಪ್ರತಿಭಟನೆ

• ಉದಯವಾಹಿನಿ ಕಲಬುರಗಿ

ಸೇಡಂ ತಾಲ್ಲೂಕಿನ ಮುಧೋಳ ವಸತಿಶಾಲೆಯಲ್ಲಿ ಪಾಣೆಗಾಂವ ಗ್ರಾಮದ 7 ನೆಯ ತರಗತಿಯ ನಾರಾಯಣ ಎಂಬ ವಿದ್ಯಾರ್ಥಿಯ ಸಾವು ಆತ್ಮಹತ್ಯೆಯಲ್ಲ ಅದು ಕೊಲೆ ಎಂದು ಆರೋಪಿಸಿ ಮೃತ ವಿದ್ಯಾರ್ಥಿಯ ಪಾಲಕರು ಮತ್ತು ಗ್ರಾಮಸ್ಥರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಮುಖಂಡ ಪವನಕುಮಾರ ವಳಕೇರಿ ಅವರು ಪ್ರತಿಭಟನೆಯ ನೇತೃತ್ವವಹಿಸಿದ್ದರು. ಇದು ಆತ್ಮಹತ್ಯೆಯಲ್ಲ ಕೊಲೆ. ವಸತಿ ಶಾಲೆಯವರೇ ಕೊಲೆ ಮಾಡಿ ಫ್ಯಾನಿಗೆ ನೇತು ಹಾಕಿ ಆತ್ಮಹತ್ಯೆಯ ಕತೆ ಕಟ್ಟಿದ್ದಾರೆ ಎಂದು ಆರೋಪಿಸಿದರು. ಮೃತ ಬಾಲಕನ ಕುಟುಂಬಕ್ಕೆ 5 ಲಕ್ಷ ರೂ ಪರಿಹಾರ ನೀಡಿದ್ದು ಅದನ್ನು ಪಾಲಕರು ನಿರಾಕರಿಸಿ, 25 ಲಕ್ಷ ರೂ ಪರಿಹಾರ ನೀಡಬೇಕು. ಹಾಗೂ ಮೃತ ವಿದ್ಯಾರ್ಥಿಯ ತಾಯಿಗೆ ಸರಕಾರಿ ನೌಕರಿ ನೀಡಬೇಕು ಎಂದು ಆಗ್ರಹಿಸಿದರು.

### ಪ್ರೇಮಿಗಳು ಶವವಾಗಿ ಪತ್ತೆ

• ಉದಯವಾಹಿನಿ ಕೊಪ್ಪಳ

ಪ್ರೇಮಿಗಳಾದ ತಾಲ್ಲೂಕಿನ ಹೊಸ ಲಿಂಗಾಪುರ ಗ್ರಾಮದ ಪ್ರವೀಣ ಹಾಗೂ ಗಂಗಾವತಿ ತಾಲ್ಲೂಕಿನ ಸಾಣಾಪುರದ ಅಂಜಲಿ ಎನ್ನುವವರು ಬುಧವಾರ ತುಂಗಭದ್ರಾ ಎಡದಂಡೆ ಕಾಲುವೆಗೆ ಹಾರಿದ್ದರು. ಅವರ ಮೃತದೇಹಗಳು ಶುಕ್ರವಾರ ಶಿವಪುರದ ಕೆರೆ (ಬೋರಕಾ ವಿದ್ಯುತ್ ಉತ್ಪಾದನಾ ಕೇಂದ್ರದ ಬಳಿ) ಪತ್ತೆಯಾಗಿವೆ.

ಈ ಯುವ ಪ್ರೇಮಿಗಳು ಕೂಡಿ ಬದುಕಲು ಊರು ತೊರೆದು ಹೋಗಿದ್ದರು. ಪ್ರವೀಣ ಅವರನ್ನು ಮರಳಿ ಕರೆತರಲು ಅವರ ತಾಯಿ ಮನವೊಲಿಸಿ ಕಾರು ಕಳುಹಿಸಿದ್ದರು. ಊರಿಗೆ ವಾಪಸ್ ಬರುತ್ತಿದ್ದಾಗ ಪ್ರೇಮಿಗಳು ಶೌಚಾಲಯಕ್ಕೆ ಹೋಗುವುದಾಗಿ ಕಾರು ಚಾಲಕನಿಗೆ ತಿಳಿಸಿ ಕಾಲುವೆಗೆ ಹಾರಿದ್ದರು. ಯುವತಿಯ ಧರಿಸಿದ್ದ ವೇಲ್ ಇಬ್ಬರೂ ಕೈಗೆ ಕಟ್ಟಿಕೊಂಡ ಸ್ಥಿತಿಯಲ್ಲಿ ಮೃತದೇಹ ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಎರಡು ದಿನಗಳಿಂದ ಪೊಲೀಸರು, ಅಗ್ನಿ ಶಾಮಕ ದಳ ಸಿಬ್ಬಂದಿ ಶೋಧ ಕಾರ್ಯ ನಡೆಸಿದ್ದರು. ಈ ಕುರಿತು ಮುನಿರಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಹಲ್ಲೆ ಖಂಡಿಸಿ ತಹಶೀಲ್ದಾರ್‌ಗೆ ಮನವಿ

• ಉದಯವಾಹಿನಿ ಗುಳೇದಗುಡ್ಡ

ರಾಜ್ಯ ಎಸ್ಸಿ, ಎಸ್ಟಿ ಅಲೆಮಾರಿ ಅಭಿವೃದ್ಧಿ ನಿಗಮದ ರಾಜ್ಯ ಘಟಕದ ಅಧ್ಯಕ್ಷೆ ಪಲ್ಲವಿ, ಕೊರಮ ಕೊರಚ ಜನಾಂಗದ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಪ್ರಭಾವತಿ ಮೇಲೆ ಆದ ಹಲ್ಲೆಯನ್ನು ಖಂಡಿಸಿ ಅಖಿಲ ಕರ್ನಾಟಕ ಕುಳುವ ಮಹಾಸಂಘ ತಾಲ್ಲೂಕು ಘಟಕ ವತಿಯಿಂದ ತಹಶೀಲ್ದಾರ್‌ಗೆ ಮನವಿ ಸಲ್ಲಿಸಲಾಯಿತು. ಇಬ್ಬರು ಮಹಿಳೆಯರ ಜನಪ್ರಿಯತೆ, ಪ್ರಾಮಾಣಿಕತೆ, ದಕ್ಷ ಆಡಳಿತ, ಪರಿಶ್ರಮದ ಸೇವೆ ಸಹಿಸದೆ ಹಲವು ಬಿಜೆಪಿ ಮುಖಂಡರು ಈ ರೀತಿ ಅವರ ಮೇಲೆ ಹಲ್ಲೆ ಮಾಡಿರುವುದು ಸಮಾಜಕ್ಕೆ ಮಾಡಿದ ಅವಮಾನವಾಗಿದೆ ಎಂದು ಸಮಾಜದ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಾಜಿ ಸಚಿವ ಎಚ್.ಆಂಜನೇಯ ನೇತೃತ್ವದಲ್ಲಿ ನಡೆದ ರಾಜ್ಯದ ಅಲೆಮಾರಿ ಮುಖಂಡರ ಸಭೆಯಲ್ಲಿ ಕೊರಮ, ಕೊರಚ ಸಮಾಜದ ನಮ್ಮ ಮುಖಂಡರಿಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಅಪಮಾನ ಮಾಡಿದ್ದಾರೆ. ಸಮಾಜದಲ್ಲಿ 51 ಜಾತಿಗಿದ್ದು, ಕೇವಲ 49 ಜಾತಿ ಮುಖಂಡರನ್ನು ಸಭೆಗೆ ಕರೆದು ಸಭೆ ನಡೆಸಿರುವುದು ಇದು ಸರಿಯಾದ ಕ್ರಮವಲ್ಲ. ಇದನ್ನು ಪ್ರಶ್ನಿಸಿದಕ್ಕೆ ಈ ಇಬ್ಬರು ಸಮಾಜದ ಮಹಿಳೆಯರ ಮೇಲೆ ಅವಾಚ್ಯವಾಗಿ ನಿಂದಿಸಿ ಹಲ್ಲೆ ಮಾಡಿದ್ದಾರೆ. ಹಲ್ಲೆ ಮಾಡಿದವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ಕುಳುವ ಮಹಾಸಂಘ ತಾಲ್ಲೂಕು ಘಟಕದ ಎ.ಕೆ.ಎಂ.ಎಸ್. ರಾಜ್ಯ ಸಮಿತಿ ನಾಮನಿರ್ದೇಶಕ ಸದಸ್ಯ ಶಾಮಸುಂದರ್ ಕೊರವರ ಆಕ್ರೋಶ ವ್ಯಕ್ತಪಡಿಸಿದರು.

### ಕರಾವಳಿ ಕರ್ನಾಟಕದಲ್ಲಿ ಆರೆಂಜ್ ಅಲರ್ಟ್

• ಉದಯವಾಹಿನಿ ಉಡುಪಿ

ಭಾರತ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆಯ ಪ್ರಕಾರ, ಜುಲೈ 10 ರಿಂದ 15 ರವರೆಗೆ ಕರಾವಳಿ ಪ್ರದೇಶಕ್ಕೆ ಆರೆಂಜ್ ಅಲರ್ಟ್ ನೀಡಲಾಗಿದ್ದು, ಈ ಅವಧಿಯಲ್ಲಿ ಮಧ್ಯಮದಿಂದ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಕರಾವಳಿ ಪ್ರದೇಶದಾದ್ಯಂತ ಬುಧವಾರ ಸಾಧಾರಣ ಮಳೆ ಸುರಿದಿದೆ, ಜಿಲ್ಲೆಯ ಹಲವು ಭಾಗಗಳಲ್ಲಿ ತುಂತುರು ಮಳೆಯಾಗಿದೆ ಎನ್ನಲಾಗಿದೆ. ಮಂಗಳೂರಿನಲ್ಲಿ ಬಿಸಿಲು ಮತ್ತು ಮೋಡ ಕವಿದ ವಾತಾವರಣವಿದೆ. ಉಡುಪಿ ಜಿಲ್ಲೆಯಲ್ಲಿ ಸಾಧಾರಣ ಮಳೆಯಾಗಿದೆ. ಬೆಳಿಗ್ಗೆಯಿಂದ ಮಧ್ಯಾಹ್ನದವರೆಗೆ ಮೋಡ ಕವಿದ ವಾತಾವರಣವಿದ್ದು, ಸಾಂದರ್ಭಿಕವಾಗಿ ಬಿಸಿಲು ಇತ್ತು ಎನ್ನಲಾಗಿದೆ. ಐಎಂಡಿ ಮುನ್ಸೂಚನೆಯ ಪ್ರಕಾರ, ಮುಂದಿನ ಕೆಲವು ದಿನಗಳಲ್ಲಿ ಈ ಪ್ರದೇಶದಾದ್ಯಂತ ಮಧ್ಯಮ ಮಳೆ ಮುಂದುವರಿಯುವ ಸಾಧ್ಯತೆಯಿದೆ.

### ಗುರು ಪೂರ್ಣಿಮೆ ಆಚರಣೆ

• ಉದಯವಾಹಿನಿ ಹಾವೇರಿ

ಗುರುಬ್ರಹ್ಮ, ಗುರುವಿಷ್ಣು, ಗುರುದೇವೋ ಮಹೇಶ್ವರ, ಗುರುಸಾಕ್ಷಾತ್ ಪರಬ್ರಹ್ಮ ತಸ್ಮೈಶ್ರೀ ಗುರುವೇ ನಮ ಎಂಬ ಮಾತಿನಂತೆ ತಂದೆ-ತಾಯಿ, ಗುರುಗಳಿಗೆ ನಮನ ಸಲ್ಲಿಸುವ ಗುರು ಪೂರ್ಣಿಮೆಯನ್ನು ಜಿಲ್ಲೆಯಾದ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ಜಿಲ್ಲೆಯ ಹಲವು ದೇವಸ್ಥಾನ ಹಾಗೂ ಮಠಗಳಲ್ಲಿ ಬೆಳಿಗ್ಗೆಯಿಂದ ವಿಶೇಷ ಪೂಜೆಗಳು ನಡೆದವು. ಭಕ್ತರು ದೇವಸ್ಥಾನಗಳಿಗೆ ಹೋಗಿ, ಗುರು ಸ್ವರೂಪಿ ದೇವರಿಗೆ ನಮಿಸಿದರು.

ಇಲ್ಲಿಯ ಹುಕ್ಕೇರಿಮಠದ ಶಿವಾನುಭವ ಮಂಟಪದಲ್ಲಿ ಗುರು ಪೂರ್ಣಿಮೆ ನಿಮಿತ್ತ ಭಕ್ತರು ಸದಾಶಿವ ಸ್ವಾಮೀಜಿಯವರ ಪಾದಪೂಜೆ ಮಾಡಿದರು.

**ಕನಕ ಗುರುಪೀಠದಲ್ಲೂ ಆಚರಣೆ:** ಬ್ಯಾಡಗಿ ತಾಲ್ಲೂಕಿನ ಕಾಗಿನೆಲೆಯಲ್ಲಿರುವ ಮಹಾಸಂಸ್ಥಾನ ಕನಕ ಗುರುಪೀಠದಲ್ಲಿ ಬೀರೇಂದ್ರ ಕೇಶವ ತಾರಕಾನಂದಪುರಿ ಸ್ವಾಮೀಜಿಯವರ 19ನೇ ವರ್ಷದ ಪುಣ್ಯಾರಾಧನೆಯ ಗುರು ಪೂರ್ಣಿಮ ಮಹೋತ್ಸವ ನಡೆಯಿತು. ಅಹಿಲ್ಯಾಬಾಯಿ ಹೋಳಕರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಮಹೋತ್ಸವದಲ್ಲಿ ನಿರಂಜನಾನಂದಪುರಿ ಸ್ವಾಮೀಜಿ ಅವರಿಗೆ ಭಕ್ತರು ಪುಷ್ಪ ನಮನ ಸಲ್ಲಿಸಿದರು. ಸ್ವಾಮೀಜಿಯವರಿಂದ ಆಶೀರ್ವಾದ ಪಡೆದುಕೊಂಡರು.

**ಶಿರಡಿ ಸಾಯಿ ಬಾಬಾ ಮಂದಿರ:** ಹಾವೇರಿಯ ಅಶ್ವಿನಿನಗರ ಹಾಗೂ ದೇವಗಿರಿ ಯಲ್ಲಾಪುರದಲ್ಲಿರುವ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗುರು ಪೂರ್ಣಿಮೆ ಮಹೋತ್ಸವ ವಿಜೃಂಭಣೆಯಿಂದ ಜರುಗಿತು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಕೆಲಸದಲ್ಲಿ ಹಿರಿಯರಿಂದ ಒತ್ತಡ, ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು.

**ವೃಷಭ** ಸ್ವಲ್ಪ ಸಂಘರ್ಷದ ಹೊರತಾಗಿಯೂ, ನಿಮ್ಮ ಪ್ರೀತಿಯ ಜೀವನವು ಇಂದು ಉತ್ತಮವಾಗಿರುತ್ತದೆ. ನೀವು ನಿಮ್ಮ ಸಂಗಾತಿಯನ್ನು ಸಂತೋಷವಾಗಿಡಲು ಯಶಸ್ವಿಯಾಗುತ್ತೀರಿ ಇಡೀ ದಿನ ನೀವು ಖಾಲಿಯಾಗಿರಬಹುದು.

**ಮಿಥುನ** ಬಿಡುವಿನ ವೇಳೆಯಲ್ಲಿ ನೀವು ಸೃಜನಾತ್ಮಕವಾಗಿ ಏನಾದರೂ ಮಾಡಬಹುದು. ಮದುವೆಗಳು ಏಕೆ ಸ್ವರ್ಗದಲ್ಲಿ ಮಾಡಲ್ಪಟ್ಟಿವೆ ಎಂದು ನಿಮಗೆ ಇಂದು ತಿಳಿಯುತ್ತದೆ.

**ಕರ್ಕಾಟಕ** ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ.

**ಸಿಂಹ** ನೀವೇ ಮರುಚೈತನ್ಯ ಹೊಂದುತ್ತೀರಿ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡು ಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ.

**ಕನ್ಯಾ** ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸಲು ನಿರಾಕರಿಸಿ. ಇದು ಅನಾರೋಗ್ಯದ ವಿರುದ್ಧ ಪ್ರಬಲ ಚುಚ್ಚುಮದ್ದು. ನಿಮ್ಮ ಸರಿಯಾದ ಮನೋಭಾವ ತಪ್ಪು ಮನೋಭಾವವನ್ನು ಸೋಲಿಸುತ್ತದೆ.

**ತುಲಾ** ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ನಿಮ್ಮ ಹೂಡಿಕೆಗಳು ಬಗ್ಗೆ ನಿಮ್ಮ ಭವಿಷ್ಯದ ಗುರಿಗಳ ಬಗ್ಗೆ ರಹಸ್ಯಮಯವಾಗಿರಿ.

**ವೃಶ್ಚಿಕ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ನಿಮ್ಮ ಸ್ನೇಹಿತರ ಸಹಾಯದಿಂದ ಹಣ ಕಾಸು ಸಮಸ್ಯೆಗಳು ನಿವಾರಣೆಯಾಗುತ್ತವೆ.

**ಧನಸ್ಸು** ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ.

**ಮಕರ** ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು.

**ಕುಂಭ** ನಿಮ್ಮ ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡ ಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯೆಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ.

**ಮೀನ** ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳನ್ನು ಒಳಗೊಂಡಿರಬೇಕು. ಈ ರಾಶಿಚಕ್ರದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ಯಾವುದೇ ವಿಷಯಕ್ಕೆ ಹಣವನ್ನು ಖರ್ಚು ಮಾಡಬೇಕಾಗಬಹುದು.

## ಟೋಕಾಪುರ ಗ್ರಾಮದಲ್ಲಿ ಆರೋಗ್ಯ ಉಪ ಕೇಂದ್ರ ಸ್ಥಾಪಿಸುವಂತೆ ಕರವೇ ಮನವಿ

• ಉದಯವಾಹಿನಿ ವಡಗೇರಾ

ತಾಲ್ಲೂಕಿನ ಟೋಕಪುರ ಗ್ರಾಮದಲ್ಲಿ ಹೊಸದಾಗಿ ಆರೋಗ್ಯ ಉಪ ಕೇಂದ್ರ ಸ್ಥಾಪಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ಟೋಕಾಪುರ ಗ್ರಾಮ ಘಟಕದ ಅಧ್ಯಕ್ಷ ಮಲ್ಲು ಪಾಟೀಲ್ ನೇತೃತ್ವದಲ್ಲಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಅವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು. ನಮ್ಮ ಗ್ರಾಮವು ತಡಬಿಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಗೆ ಬರುತ್ತಿದ್ದು ನಮ್ಮ ಗ್ರಾಮದಿಂದ ಅಲ್ಲಿಗೆ ಹೋಗಿ ಬರಲು ಸರಿಯಾದ ಅನುಕೂಲವಿಲ್ಲ ಮತ್ತು ತುಂಬಾ ದೂರ ಆಗುತ್ತದೆ ನಮ್ಮ ಗ್ರಾಮದಲ್ಲಿ ಸುಮಾರು ನಾಲ್ಕು ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದ್ದು ಇಲ್ಲಿ ಆರೋಗ್ಯ ಉಪ ಕೇಂದ್ರದ ಅವಶ್ಯಕತೆ


ಉದಯವಾಹಿನಿ ಚಿತ್ರ

ಇದೆ ಸಾರ್ವಜನಿಕರ ಆರೋಗ್ಯ ಸಮಸ್ಯೆ ಕಂಡುಬಂದಲ್ಲಿ ಚಿಕ್ಕ ಮಕ್ಕಳನ್ನು ವೃದ್ಧರನ್ನು ದೂರದ ಪಟ್ಟಣಗಳಿಗೆ ಕರೆದುಕೊಂಡು ಹೋಗುವ ಪರಿಸ್ಥಿತಿ ಎದುರಾಗಿದೆ ಸರಿಯಾದ ಸಮಯಕ್ಕೆ ಚಿಕಿತ್ಸೆ ಸಿಗದೇ ಅದೆಷ್ಟು ಜನರ ಪ್ರಾಣ ಕಳೆದುಕೊಂಡಿದ್ದಾರೆ ಆದ್ದರಿಂದ ನಮ್ಮ ಗ್ರಾಮದಲ್ಲಿ ನೂತನವಾಗಿ ಆರೋಗ್ಯ ಉಪ ಕೇಂದ್ರ ಸ್ಥಾಪಿಸಿದ್ದೆ ಆದಲ್ಲಿ ಈ ಭಾಗದ ಸಾರ್ವಜನಿಕರಿಗೆ ತುಂಬಾ ಅನುಕೂಲವಾಗಲಿದೆ ಆದ್ದರಿಂದ ದಯಾಳಗಳಾದ ತಾವು ಕೂಡಲೇ ನಮ್ಮ ಗ್ರಾಮದಲ್ಲಿ ಹೊಸದಾಗಿ ಆರೋಗ್ಯ ಉಪ ಕೇಂದ್ರ ಸ್ಥಾಪಿಸುವಂತೆ ಕೋರಿದರು ಮನವಿಗೆ ಸ್ಪಂದಿಸಿದ ಶಾಸಕರು ಈ ಕುರಿತು ಸಂಬಂಧಿಸಿದ ಅಧಿಕಾರಿಗಳಿಂದ ಮಾಹಿತಿ ತರಿಸಿಕೊಂಡು ಹೊಸದಾಗಿ ಆರೋಗ್ಯ ಉಪ ಕೇಂದ್ರ ಸ್ಥಾಪಿಸುವ ಭರವಸೆ ನೀಡಿದರು.

**ಉಪ ಕೇಂದ್ರ ಸ್ಥಾಪಿಸುವ ಭರವಸೆ**

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಸಿದ್ದು ಪೂಜಾರಿ, ಗ್ರಾಮ ಘಟಕ ಅಧ್ಯಕ್ಷರಾದ ಮಲ್ಲು ಪಾಟೀಲ್, ಮಲ್ಲು ದೊರೆ, ಮಲ್ಲಿಕಾರ್ಜುನ ಕಂಟ್ರೋಲ್, ಭಾಷಾ ಹವಾಲ್ದಾರ್, ಭೀಮರೆಡ್ಡಿ ಟೋಕಪೂರ್, ಮಲ್ಲಿಕಾರ್ಜುನ ದೊರನಹಳ್ಳಿ, ಈಶಪ್ಪ ಮಾಲಿ ಪಾಟೀಲ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ರಾಜ್ಯ ಹೆದ್ದಾರಿಯಲ್ಲಿ ವಾಹನಗಳ ತೂಗುಯ್ಯಾಲೆ

• ಉದಯವಾಹಿನಿ ಎಂ.ಕೆ.ಹುಬ್ಬಳ್ಳಿ

ಇಲ್ಲಿನ ಖಾನಾಪುರ- ಗೋವಾ ಸಂಪರ್ಕಿಸುವ ರಾಜ್ಯ ಹೆದ್ದಾರಿಯಲ್ಲಿ ಬೃಹದಾಕಾರದ ಗುಂಡಿಗಳು ಬಿದ್ದಿದ್ದು, ವಾಹನಗಳ ಸಂಚಾರ ಉಯ್ಯಾಲೆಯಂತಾಗಿದೆ. ಪ್ರತಿ ದಿನ ಒಂದಿಲ್ಲೊಂದು ಅಪಘಾತ ಸಂಭವಿಸುತ್ತಲೇ ಇದೆ. ರಸ್ತೆ ಹಾಳಾಗಿ ಹಲವು ವರ್ಷ ಕಳೆದರು ಅಭಿವೃದ್ಧಿಗೊಂಡಿಲ್ಲ, ಮಳೆಗಾಲಕ್ಕೊಮ್ಮೆ ಗುಂಡಿಗಳಿಗೆ ಕಲ್ಲು-ಮಣ್ಣು ಸುರಿದು ಸಮಸ್ಯೆಗೆ ತಾತ್ಕಾಲಿಕ ಪರಿಹಾರ ಒದಗಿಸಲು ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಪ್ರಯತ್ನಿಸುತ್ತಿದ್ದಾರೆ. ಭಾರಿ ಮಳೆ, ಅತಿಯಾದ ವಾಹನಗಳ ಸಂಚಾರದಿಂದ ಎರಡೇ ದಿನಕ್ಕೆ ಮತ್ತೆ ಗುಂಡಿಗಳು ಬಾಯ್ದೆರೆದು ಸಂಚಾರಕ್ಕೆ ಕಂಟಕವಾಗಿ ಕಾಡುತ್ತಿವೆ. ಜನರ ಸಮಸ್ಯೆ ಆಡಳಿತ ವರ್ಗಕ್ಕೆ ಕಾಣಿಸುತ್ತಿಲ್ಲವೇ ಎಂದು ನಾಗರಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ರಸ್ತೆ ಅಭಿವೃದ್ಧಿಗೆ ಇನ್ನೆಷ್ಟು ವರ್ಷ ಕಾಯಬೇಕೆಂದು ಪ್ರಶ್ನಿಸುತ್ತಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರೇ ಲೋಕೋಪಯೋಗಿ ಇಲಾಖೆ ಸಚಿವರೂ ಆಗಿದ್ದಾರೆ. ಈ ಮಾರ್ಗದಲ್ಲಿ ಆಗಿರುವ ರಸ್ತೆಯ ಸಮಸ್ಯೆಯನ್ನು ಬಗೆಹರಿಸುವಲ್ಲಿ ಗಮನ ಹರಿಸಬೇಕು ಎಂಬುದು ಜನರ ಆಗ್ರಹ.


ಉದಯವಾಹಿನಿ ಚಿತ್ರ

**ಮಾರ್ಗದುದ್ದಕ್ಕೂ ಬೃಹದಾಕಾರದ ತಗ್ಗು-ಗುಂಡಿಗಳು, ಪ್ರಯಾಣಿಕರ ಜೀವಕ್ಕೆ ಬಂದಿದೆ ಕುತ್ತು**

### ಪ್ರವಾಸಿ ತಾಣದ ರಸ್ತೆ

ಎಂ.ಕೆ.ಹುಬ್ಬಳ್ಳಿ ಪಟ್ಟಣದ ಬಳಿಯಿರುವ ಪುಣೆ- ಬೆಂಗಳೂರು ರಾಷ್ಟ್ರೀಯ ಹೆದ್ದಾರಿ-4ರಿಂದ ಖಾನಾಪುರ ಮತ್ತು ಗೋವಾ ರಾಜ್ಯಕ್ಕೆ ಸಂಪರ್ಕ ಕಲ್ಪಿಸುತ್ತದೆ. ಈ ರಸ್ತೆ ಕಿತ್ತೂರು ಮತಕ್ಷೇತ್ರದ ಗಡಿ ರಸ್ತೆಯಾಗಿದೆ. ಎಂ.ಕೆ.ಹುಬ್ಬಳ್ಳಿಯಿಂದ ಕೇವಲ 5ಕಿ.ಮೀ ಸಾಗಿದರೆ ಖಾನಾಪುರ ಮತಕ್ಷೇತ್ರದ ರಸ್ತೆ ಆರಂಭವಾಗುತ್ತದೆ. ಆ ರಸ್ತೆ ಕೆಲವರ್ಷಗಳ ಹಿಂದೆ ಅಭಿವೃದ್ಧಿಗೊಂಡಿದ್ದು, ಕಿತ್ತೂರು ಮತಕ್ಷೇತ್ರದ ವ್ಯಾಪ್ತಿಯ 5 ಕಿ.ಮೀ ರಸ್ತೆ ಸಂಪೂರ್ಣ ಹದಗೆಟ್ಟಿದೆ. ಹೀಗಾಗಿ, ವಾಹನ ಸಂಚಾರ ಇಲ್ಲಿ ದುಸ್ತರವಾಗಿದ್ದು, ಬೇಗನೆ ರಸ್ತೆ ಅಭಿವೃದ್ಧಿ ಪಡಿಸಬೇಕೆಂಬುದು ಸ್ಥಳೀಯರ ಮತ್ತು ಪ್ರಯಾಣಿಕರ ಆಗ್ರಹ. ಎಂ.ಕೆ.ಹುಬ್ಬಳ್ಳಿ, ಚನ್ನಮ್ಮನ ಕಿತ್ತೂರು ಹಾಗೂ ಖಾನಾಪುರಗಳು ಪ್ರವಾಸಿ ತಾಣಗಳಾಗಿದ್ದರಿಂದ ಈ ಮಾರ್ಗದಲ್ಲಿ ಪ್ರತಿದಿನವೂ ವಾಹನ ಸಂಚಾರ ಹೆಚ್ಚಾಗಿರುತ್ತದೆ. ಆದರೆ, ತಗ್ಗು-ಗುಂಡಿಗಳಲ್ಲಿ ಸಾಗುವ ವಾಹನದಿಂದ ಜನ ಮೈ ಕೈ ನೋವು ಮಾಡಿಕೊಳ್ಳುವ ಪರಿಸ್ಥಿತಿ ಬಂದಿದೆ.

ಈಗಾಗಲೇ ಇಲಾಖೆ ಮೂಲಕ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಿದ್ದೇವೆ. ಸಂಚಾರಕ್ಕೆ ತೊಂದರೆಯಾಗಬಾರದೆಂದು ಗುಂಡಿಗಳನ್ನು ಮುಚ್ಚಲಾಗುತ್ತಿದೆ -ಸಂಜೀವ ಮಿರಜಕರ್, ಎಇಇ ಲೋಕೋಪಯೋಗಿ ಇಲಾಖೆ ಕಿತ್ತೂರು

### ಕಾರ್, ಬೈಕ್, ಟ್ರ್ಯಾಕ್ಟರ್, ಚಕ್ಕಡಿಗಳ ಸಂಚಾರ ಕಷ್ಟ

ಪುಣೆ- ಬೆಂಗಳೂರು ರಾಷ್ಟ್ರೀಯ ಹೆದ್ದಾರಿ 4ರಿಂದ ಗೋವಾ ರಾಜ್ಯಕ್ಕೆ ಸಂಪರ್ಕ ಕಲ್ಪಿಸುವ ಅನುಕೂಲಕರ ರಸ್ತೆ ಇದಾಗಿರುವುದರಿಂದ ಪ್ರತಿದಿನ ರಾಜ್ಯದ ವಾಹನಗಳಷ್ಟೆ ಅಲ್ಲದೇ ಹೊರರಾಜ್ಯದ ನೂರಾರು ವಾಹನಗಳು ಈ ರಸ್ತೆ ಮೂಲಕವೇ ಸಾಗುತ್ತವೆ. ಆದರೆ, ರಸ್ತೆ ತುಂಬ ಬೃಹದಾಕಾರದ ಗುಂಡಿಗಳೇ ಆವರಿಸಿ ಮಳೆನೀರು ತುಂಬಿಕೊಂಡ ಕಾರಣದಿಂದ ಚಾಲಕರು ವಾಹನ ಓಡಿಸಲು ಹರಸಾಹಸ ಪಡುವಂತಾಗಿದೆ. ದೊಡ್ಡ ವಾಹನಗಳು ಉಯ್ಯಾಲೆಯಾಡುತ್ತ ಸಂಚರಿಸುತ್ತಿವೆ. ಕಾರ್, ಬೈಕ್, ರೈತರ ಟ್ರ್ಯಾಕ್ಟರ್, ಚಕ್ಕಡಿಗಳು ಗುಂಡಿಗಳ ಮಧ್ಯೆ ಸಿಲುಕಿಕೊಳ್ಳುತ್ತವೆ. ಅದೆಷ್ಟೋ ವಾಹನಗಳು ಹಾಳಾದ ರಸ್ತೆಯಲ್ಲಿ ನಿಯಂತ್ರಣ ತಪ್ಪಿ ಉರುಳಿಬಿದ್ದ ಉದಾಹರಣೆಗಳು ಇವೆ. ಕಾರ್ ಮೂಲಕ ಕುಟುಂಬ ಸಮೇತ ಪ್ರಯಾಣ ಬೆಳೆಸುವ ಪ್ರಯಾಣಿಕರು ಅಂಗೈಯಲ್ಲಿ ಜೀವ ಹಿಡಿದು ಸಾಗುವಂತಾಗಿದೆ.

ಹೊರರಾಜ್ಯಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಿದು. ಹಾಳಾಗಿ ಹಲವು ವರ್ಷವಾಗಿದೆ. ತಗ್ಗುಗಳು ಪ್ರಯಾಣಿಕರ ಜೀವ ಹಿಂಡುತ್ತಿವೆ. ಮಳೆಯಿಂದ ರಸ್ತೆ ಕೆರೆಯಂತಾಗಿದೆ -ರಾಜು ಮುತ್ನಾಳ, ಸ್ಥಳೀಯ ನಿವಾಸಿ

## ಭಾರತೀಯ ಯೋಗ ಶಿಕ್ಷಣ ಸಂಸ್ಥೆ ವತಿಯಿಂದ ಗುರುಪೂರ್ಣಿಮೆ ಕಾರ್ಯಕ್ರಮ

• ಉದಯವಾಹಿನಿ ಚಿತ್ರದುರ್ಗ

ಗುರುಪೂರ್ಣಿಮೆಯ ಅಂಗವಾಗಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಹಾಗೂ ಬ್ಯಾಂಕ್ ಕಾಲೋನಿ ಬಾಲಗೋಕುಲ ಸಮಿತಿ ವತಿಯಿಂದ ನಗರದ ತುರುವನೂರು ರಸ್ತೆಯ ಶ್ರೀ ಪ್ರಸನ್ನ ವೆಂಕಟರಮಣ ಸ್ವಾಮಿ ದೇವಾಲಯದ ಕಲ್ಯಾಣ ಮಂಟಪದಲ್ಲಿ ಗುರುವಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು

ಬೆಳಗಿನ 5:00 ಗಂಟೆಗೆ ಕೊರೆಯುವ ಚಳಿಯಲ್ಲಿ ಅಭ್ಯಂಗ ಸ್ನಾನ ಮಾಡಿ ಬಂದಿದ್ದ ಯೋಗ ಸಂಸ್ಥೆಯ ಮಹಿಳಾ ಯೋಗ ಸಾಧಕಿಯರು ಪವಿತ್ರವಾದ ಅಗ್ನಿಹೋತ್ರ ಹೋಮವನ್ನು ನಡೆಸಿ ಗುರುಭಜನೆ, ದೇವರ ನಾಮಗಳನ್ನು ಹಾಡಿ ಶ್ರೀ ಗುರು ವೇದವ್ಯಾಸ ಮುನಿಗಳ ಭಾವಚಿತ್ರಕ್ಕೆ ಭಕ್ತಿಯಿಂದ ಪೂಜೆಯನ್ನು ಸಲ್ಲಿಸಿದರು. ಕಾರ್ಯಕ್ರಮ ಕುರಿತು ಮಾತನಾಡಿದ


ಉದಯವಾಹಿನಿ ಚಿತ್ರ

ಬ್ಯಾಂಕ್ ಕಾಲೋನಿ ಯೋಗ ಸಮಿತಿಯ ಅಧ್ಯಕ್ಷೆ ಶ್ರೀಮತಿ ವನಜಾಕ್ಷಮ್ಮ ಮಾತನಾಡಿ ಭಾರತೀಯ ಸಂಸ್ಕೃತಿಯಲ್ಲಿ ಗುರುಗಳಿಗೆ ಅತ್ಯುನ್ನತ ಸ್ಥಾನಮಾನವಿದೆ. 'ಗು' ಎಂದರೆ ಅಂಧಕಾರ, 'ರು' ಎಂದರೆ ಬೆಳಕು. ಅಜ್ಞಾನದ ಅಂಧಕಾರದಿಂದ ಜ್ಞಾನದ ಬೆಳಕಿನೆಡೆಗೆ ನಮ್ಮನ್ನು ಕೊಂಡೊಯ್ಯುವವರೇ ಗುರು. ಇಂದು ಮಹರ್ಷಿ ವೇದವ್ಯಾಸರ ಜನ್ಮದಿನವೂ ಆಗಿರುವುದರಿಂದ ಗುರುಪೂರ್ಣಿಮೆಯನ್ನು ವ್ಯಾಸ ಪೂರ್ಣಿಮಾ ಎಂದೂ ಕರೆಯಲಾಗುತ್ತದೆ. ಗುರುಪೂರ್ಣಿಮೆ ಗುರು ಮತ್ತು ಶಿಷ್ಯರ ನಡುವಿನ ಪವಿತ್ರ ಬಂಧವನ್ನು ಎತ್ತಿಹಿಡಿಯುತ್ತದೆ. ಗುರುಗಳು ನಮಗೆ ಜೀವನದ ಪಾಠಗಳನ್ನು ಕಲಿಸಿ, ಮಾರ್ಗದರ್ಶನ ನೀಡುವ ಮೂಲಕ ನಮ್ಮ ವ್ಯಕ್ತಿತ್ವವನ್ನು ರೂಪಿಸಲು ಸಹಾಯ ಮಾಡುತ್ತಾರೆ. ಈ ದಿನ ಅವರ ಕೊಡುಗೆಗಳನ್ನು ಸ್ಮರಿಸಿ, ಅವರಿಗೆ ಕೃತಜ್ಞತೆ ಸಲ್ಲಿಸುವುದು ಶಿಷ್ಯರಾದವರ ಕರ್ತವ್ಯ ಎಂದು ಅಭಿಪ್ರಾಯಪಟ್ಟರು.

**'ಗು' ಎಂದರೆ ಅಂಧಕಾರ, 'ರು' ಎಂದರೆ ಬೆಳಕು**

ಇದೇ ಸಂದರ್ಭದಲ್ಲಿ ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ನಿರಂತರ ಉಚಿತ ಯೋಗ ತರಬೇತಿಗಳನ್ನು ನಡೆಸಿಕೊಂಡು ಬರುತ್ತಿರುವ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯ ಯೋಗ ಶಿಕ್ಷಕಿಯರಾದ ಶ್ರೀಮತಿ ವಸಂತಲಕ್ಷ್ಮಿ ಹಾಗೂ ಶ್ರೀಮತಿ ಮಂಜುಳಾ ಇವರನ್ನು ಸನ್ಮಾನಿಸಲಾಯಿತು. ಬ್ಯಾಂಕ್ ಕಾಲೋನಿ ಯೋಗ ಸಾಧಕರಾದ ಶ್ರೀಮತಿ ರೇಣುಕಮ್ಮ ಭಾಗ್ಯಲಕ್ಷ್ಮಿ ನಿರ್ಮಲ ಸುಧಾ ಶ್ರೀಮತಿ ಅರುಣ ತಿಪ್ಪಮ್ಮ ಅನಿತಾ ಸುನಿತಾ ಶೈಲಜಾ ಸುಜಾತ ನಳಿನ ಸರಸ್ವತಿ ಸುಕನ್ಯ ಹಾಗೂ ಭಾರತೀಯ ಯೋಗಾಸನ ಸಂಸ್ಥೆಯ ಯೋಗ ಪ್ರಚಾರಕ ರವಿ ಕೆ.ಅಂಬೇಕರ್, ಸಂಸ್ಥೆಯ ನಿರ್ದೇಶಕ ಮಲ್ಲಿಕಾರ್ಜುನಚಾರ್ ಪಾಲ್ಗೊಂಡಿದ್ದರು.

## ಆಡು ಮುಟ್ಟದ ಸೊಪ್ಪಿಲ್ಲ ಬೋಸಲೆಯವರು ಅರಿಯದ ವಿದ್ಯೆ ಇಲ್ಲ: ರಫೀಕ್

• ಉದಯವಾಹಿನಿ ಮುದ್ದೇಬಿಹಾಳ

ಮುದ್ದೇಬಿಹಾಳ ಸರಕಾರಿ ಆಸ್ಪತ್ರೆಗೆಯಲ್ಲಿ ಶುಶ್ರೂಷಕರಾಗಿ ಸೇವೆ ಸಲ್ಲಿಸುತ್ತಿದ್ದ ಮೂರು ಜನ ಹಿರಿಯ ಶುಶ್ರೂಷಕ ಅಧಿಕಾರಿಗಳನ್ನು ನಾವೆಲ್ಲರೂ ಭಾರವಾದ ಹೃದಯದಿಂದ ಬೀಳ್ಕೊಡುವ ಸಮಾರಂಭ ಶುಕ್ರವಾರ ಜರಗಿತು.

ಯಾವ ರೀತಿ ಅಂದ್ರೆ ಪುರದ ಪುಣ್ಯಂ ಪುರುಷರೂಪಿಂದೆ ಹೋಗುತ್ತಿದೆ ಎನ್ನುವ ವ್ಯಕ್ತಿಯಂತೆ ಇರುವ ಸಂಜಯ್ ಬೋಸ್ಲೆ ಅವರು ಹಾಗೂ ಶ್ರೀಮತಿ ಬಸಮ್ಮ ಸಾರವಾಡ್ ಶ್ರೀಮತಿ ರೇಣುಕಾ ಅರ್ದಾವುರ್ ರವರು. ಇವರ ಸೇವೆ ಅಮೋಘ ಯಾಕಂದ್ರೆ ಸುಮಾರು ವರ್ಷಗಳಿಂದ ಇವರೆಲ್ಲರೂ ತುಂಬಾ ಚೆನ್ನಾಗಿ ತಮ್ಮ ತನು ಮನವನ್ನು ಅರ್ಪಿಸಿ , ಮುದ್ದೇಬಿಹಾಳ ತಾಲ್ಲೂಕಿನ ಎಲ್ಲಾ ನಾಗರಿಕರಿಗೆ


ಉದಯವಾಹಿನಿ ಚಿತ್ರ

ಸೇವೆಯನ್ನು ಒದಗಿಸಿದ್ದಾರೆ.

ಆಸ್ಪತ್ರೆಯಲ್ಲಿ ಎಲ್ಲಾ ಸಮಸ್ಯೆಗೂ ರೂಮ್ ನಂಬರ್ 21ರಲ್ಲಿ ಪರಿಹಾರವಿತ್ತು ಆ ಪರಿಹಾರ ಇವತ್ತು ನಮ್ಮಿಂದ ಮತ್ತೊಂದು ಕಡೆ ವರ್ಗಾವಣೆಗೊಂಡಿದೆ ಸಂಜಯ ಬೋಸ್ಲೆ ಅವರು ಬಿಡುಗಡೆಗೊಂಡು ಹೋಗುವಾಗ ಆಸ್ಪತ್ರೆಯ ಎಲ್ಲಾ ಹೃದಯವಂತ ಸಿಬ್ಬಂದಿಯವರ ಕಣ್ಣಲ್ಲಿ ನೀರು ಧಾರಾಕಾರವಾಗಿ ಹರಿಯುತ್ತಿತ್ತು ಬಿಟ್ಟು ಹೋಗುವಾಗ ದುಃಖ ಉಮ್ಮಳಿಸಿ ಬರುತ್ತಿತ್ತು ಅವರು ಎಷ್ಟು ತಡೆದರು ತಡೆಯಲಾಗಲಿಲ್ಲ ಅವರು ಸಹ ಕಣ್ಣಲ್ಲಿ ನೀರು ಆನಂದ ಭಾಷ್ಪ ವಾಗಿ ಬರುತ್ತಿತ್ತು. ಮುಂದಿನ ಅವರ ಜೀವನ ಸುಖಕರವಾಗಿರಲಿ ಎಂದು ಹಾರೈಸಿದ್ದರು. ಸರಕಾರಿ ಆಸ್ಪತ್ರೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸಂಜಯ್ ಬೋಸಲೇ ಅವರು ಆಡು ಮುಟ್ಟದ ಸೊಪ್ಪಿಲ್ಲ ಬೋಸಲೆಯವರು ಅರಿಯದ ವಿದ್ಯೆ ಇಲ್ಲಾ -ರಫೀಕ್ ಬಾಗವಾನ, ಶುಶ್ರೂಷಕ ಅಧಿಕಾರಿ

## ಕದ್ರಿ ಟ್ರಾಫಿಕ್ ಠಾಣೆ ಸಿಬ್ಬಂದಿ ಲೋಕಾ ಬಲೆಗೆ

• ಉದಯವಾಹಿನಿ ಮಂಗಳೂರು

ಅಪಘಾತಕ್ಕೀಡಾದ ಕಾರನ್ನು ಪೊಲೀಸ್ ಠಾಣೆಯಿಂದ ಬಿಡಿಸಲು ಲಂಚಕ್ಕೆ ಬೇಡಿಕೆಯಿಟ್ಟು, ಅದು ಆಗದಿದ್ದಾಗ ಬಲವಂತವಾಗಿ ಮೊಬೈಲ್ ಫೋನ್ ವಶದಲ್ಲಿರಿಸಿ, ಅದನ್ನು ಬಿಡಿಸಲು ಲೈಸನ್ಸ್ ಪಡೆದು, ಲೈಸನ್ಸ್ ಬಿಡಿಸಿಕೊಳ್ಳಲು 5 ಸಾವಿರ ರೂ. ಲಂಚ ಸ್ವೀಕರಿಸಿದ ಕದ್ರಿ ಟ್ರಾಫಿಕ್ ಪೊಲೀಸ್ ಠಾಣೆ ಸಿಬ್ಬಂದಿ ತಸ್ಲಿಂ ರೆಡ್‌ಹ್ಯಾಂಡ್ ಆಗಿ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.



ನಗರದ ನಂತೂರು ಸರ್ಕಲ್‌ನಲ್ಲಿ ಇತ್ತೀಚೆಗೆ ದೂರುದಾರರ ಕಾರು ಮತ್ತು ಸ್ಕೂಟರ್ ಮಧ್ಯೆ ಅಪಘಾತವಾಗಿದ್ದು, ಈ ಕುರಿತು ಕದ್ರಿ ಟ್ರಾಫಿಕ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಠಾಣೆಯ ಸಿಬ್ಬಂದಿ ತಸ್ಲಿಂ ಅವರು ದೂರುದಾರರಿಗೆ ಕಾರಿನ ದಾಖಲಾತಿಗಳನ್ನು ಠಾಣೆಗೆ ತಂದು ಕೊಡುವಂತೆ ತಿಳಿಸಿದ್ದು, ಅದರಂತೆ ದಾಖಲೆಗಳನ್ನು ನೀಡಿದ್ದರು. ಬಳಿಕ ಕಾರನ್ನು ಪೊಲೀಸ್ ಠಾಣೆಯಿಂದ ಬಿಡಿಸಿಕೊಡಲು ತಸ್ಲಿಂ 50 ಸಾವಿರ ರು. ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದಾರೆ. ದೂರುದಾರರ ವಕೀಲರು ಠಾಣೆಗೆ ಭೇಟಿ ನೀಡಿ ಕಾರನ್ನು ಬಿಟ್ಟುಕೊಡುವಂತೆ ಕೇಳಿಕೊಂಡಾಗ ಫಿರ್ಯಾದಿದಾರರು ಕಾರನ್ನು ಸ್ವೀಕರಿಸಿರುತ್ತಾರೆ ಎಂದು ಸಹಿ ಪಡೆದುಕೊಂಡು ಕಾರನ್ನು ಮಾತ್ರ ಠಾಣೆಯಿಂದ ಬಿಟ್ಟುಕೊಟ್ಟಿಲ್ಲ. ಕೊನೆಗೆ ದೂರುದಾರರ ಮೊಬೈಲ್‌ನ್ನು ಬಲವಂತವಾಗಿ ಪಡೆದು ಕಾರು ಬಿಟ್ಟು ಕಳುಹಿಸಿದ್ದಾರೆ.

## ಶ್ರೀ ಹಡಪದ ಅಪ್ಪಣ್ಣನವರ ಜಯಂತಿ

• ಉದಯವಾಹಿನಿ ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಶ್ರೀ ಹಡಪದ ಅಪ್ಪಣ್ಣನವರ ಜಯಂತಿಯನ್ನು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಆಚರಿಸಲಾಯಿತು.

ಶ್ರೀ ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್ ಅವರುಗಳು ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಮರ್ಪಿಸಿದರು.

## ವಿವಿಧ ಬೇಡಿಕೆಗಳು ಈಡೇರಿಸುವಂತೆ ವಿವಿಧ ಸಂಘಟನೆಗಳಿಂದ ಪ್ರತಿಭಟನೆ, ಮನವಿ

• ಉದಯವಾಹಿನಿ,ಚಿಂಚೋಳಿ

ವಿವಿಧ ಬೇಡಿಕೆಗಳನ್ನು ಈಡೇರಿಸಲು ರಾಷ್ಟ್ರವ್ಯಾಪ್ತಿ ಕರೆನೀಡಿದ ಕಾರ್ಮಿಕರ ಸಂಘಟನೆಗಳ ಮೇರೆಗೆ ಪಟ್ಟಣದ ಬಸ್ ನಿಲ್ದಾಣ ಎದುರು ಕರ್ನಾಟಕ ಪ್ರಾಂತ ರೈತ ಸಂಘ,ಕೂಲಿಕಾರ್ಮಿಕರ ಸಂಘ,ಅಕ್ಷರ ದಾಸೋಹ ನೌಕರರ ಸಂಘ,ಅಂಗನವಾಡಿ ಕಾರ್ಯಕರ್ತೆ ಸಂಘ,ವಸತಿನಿಲಯಗಳ ಹೊರಗುತ್ತಿಗೆ ನೌಕರರು ಸೇರಿದಂತೆ ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಬಸ್ ನಿಲ್ದಾಣದವರೆಗೆ ವಿವಿಧ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ಪಾದಯಾತ್ರೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಪ್ರಧಾನ ಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಿದರು. ವಸತಿನಿಲಯದ ಹೊರಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷ ಭೀಮಶೆಟ್ಟಿ ಎಂಪಳ್ಳಿ ಮಾತನಾಡಿದ ಅವರು,ರೈತರು ಬೆಳೆದ ಬೆಳೆಗಳಿಗೆ ಸಿ2ಪ್ಲಸ್ 59 ಸೇರಿಸಿ ಬೆಂಬಲ ಬೆಲೆ ಖಾತ್ರಿ ಕಾನೂನು ಜಾರಿ ಮಾಡಬೇಕು,ಸಾಲಭಾದೆ ತಾಳಲಾರದೆ ರೈತರು ಆತ್ಮಹತ್ಯೆ ಮಾಡಿಕೊಳ್ಳುವುದು ತಡೆಗಟ್ಟಬೇಕು, ಕಲಬುರ್ಗಿ ಜಿಲ್ಲೆಯಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆ ಭರ್ತಿಗೊಳಿಸಬೇಕು,ಪಂಪ್ಸೆಟ್‌ಗಳಿಗೆ ಸ್ಮಾರ್ಟ್ ಮೀಟರ್ ಅಳವಡಿಸುವುದು ತಡೆಗಟ್ಟಬೇಕು, ಭೂಸುಧಾರಣೆ ಕಾಯ್ದೆ ವಾಪಸ್ಸು ಪಡೆಯಬೇಕು, ರೈತರ ಬೆಳೆವಿಮೆ ಹಣ ಬಿಡುಗಡೆ ಮಾಡಬೇಕು, ರೈತರ ಸಾಲ ಮನ್ನಾ ಮಾಡಬೇಕು,ಗೈರಾಣಿ ಅರಣ್ಯ ಭೂಮಿ


ಉದಯವಾಹಿನಿ ಚಿತ್ರ

ಸಾಗುವಳಿದಾರರಿಗೆ ಒಕ್ಕಲೆಬ್ಬಿಸುತ್ತಿರುವುದು ತಡೆಗಟ್ಟಿ ಹಕ್ಕು ಪತ್ರ ನೀಡಬೇಕು,ರೈತರ ಸರಿಯಾಗಿ ಟಿಪ್ಪಣಿ ತಯ್ಯಾರಿಸಿ ಕೊಡಬೇಕು,ಜಿಲ್ಲೆಯಾದ್ಯಂತ ಹದಗೆಟ್ಟ ರಸ್ತೆಗಳು ಡಾಂಬರಿಕರಣ ಮಾಡಬೇಕು,ವಿದ್ಯುತ್ ತಿದ್ದುಪಡಿ ಕಾಯ್ದೆ 2022 ವಾಪಸ್ಸು ಪಡೆಯಬೇಕು,ರಾಷ್ಟ್ರೀಯ ಶಿಕ್ಷಣ ನೀತಿ 2020ರದ್ದುಗೊಳಿಸಬೇಕು,ಕಾರ್ಮಿಕ ವಿರೋಧಿ ನಾಲ್ಕು ಸಹಿತಗಳನ್ನು ರದ್ದುಪಡಿಸಬೇಕು,ಇವತ್ತಿನ ಬೆಲೆಗಳಿಗೆ ಅನುಗುಣವಾಗಿ ಎಲ್ಲಾ ಸಂಘಟಿತ ಅಸಂಘಟಿತ ಗುತ್ತಿಗೆ ಕಾರ್ಮಿಕರು ಮತ್ತು ಸ್ಕಿಮ್ ನೌಕರರಿಗೂ ರಾಷ್ಟ್ರವ್ಯಾಪ್ತಿ 26 ಸಸಾವಿರ ರೂ.ಹಾಗೂ ರಾಜ್ಯ ವ್ಯಾಪ್ತಿ 36ಸಾವಿರ ಕನಿಷ್ಠ ವೇತನ ನಿಗಧಿಪಡಿಸಬೇಕು ಎಂದರು.

ಹೀಗೆ ಹತ್ತಾರು ಬೇಡಿಕೆಗಳ ಮನವಿಪತ್ರ ಸಲ್ಲಿಸಿದರು. ಕರ್ನಾಟಕ ಪ್ರಾಂತ ರೈತ ಸಂಘದ ಅಧ್ಯಕ್ಷ ಜಾಫರಖಾನ್ ಮಿರಿಯಾಣ,ವಿ ೀರಶೆಟ್ಟಿ ಸಜ್ಜನ, ಸಿದ್ದಲಿಂಗಯ್ಯ ಸ್ವಾಮಿ, ಪ್ರಭು ಪ್ಯಾರಾಬದ್ದಿ, ಸಿದ್ದಾರ್ಥ,ಶಂಕರಯ್ಯ,ಸ್ವಾಮಿ, ಮಹಾದೇವಿ ಪೋಲಕಪಳ್ಳಿ, ಶಾಂತ ಕಲ್ಲೂರ, ವಿಜಯಲಕ್ಷ್ಮಿ ಹೊಡೆಬೀರನಳ್ಳಿ, ದ್ರೂಪತಿ ಗೋಖಲೆ,ಮಾರುತಿ, ಸೇರಿದಂತೆ ನೂರಾರು ಮಹಿಳೆಯರು ಇದ್ದರು.

## ತಾಲ್ಲೂಕಿಗೊಂದು ಮತಕ್ಷೇತ್ರವಾದರೆ ಉತ್ತಮ: ಎಸ್.ಜಿ.ನಂಜಯ್ಯನಮಠ

• ಉದಯವಾಹಿನಿ ಬಾಗಲಕೋಟೆ

ಕ್ಷೇತ್ರ ಪುನರ್ವಿಂಗಡಣೆ ಮಾಡುವ ಸಂದರ್ಭದಲ್ಲಿ ಒಂದು ತಾಲ್ಲೂಕಿಗೊಂದು ಮತಕ್ಷೇತ್ರ ಮಾಡಿ ಒಬ್ಬ ಶಾಸಕರನ್ನು ಮಾಡುವುದು ಮತ್ತು ಜಿಲ್ಲೆಗೆ ಒಬ್ಬ ಸಂಸದರನ್ನು ಮಾಡುವ ಕಾನೂನು ತಿದ್ದುಪಡಿಯಾಗಬೇಕು ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ ತಿಳಿಸಿದರು.

ರಾಜ್ಯದಲ್ಲಿ ಒಬ್ಬೊಬ್ಬ ಶಾಸಕರಿಗೆ ಮೂರು ತಾಲ್ಲೂಕಿನ ಗ್ರಾಮಗಳು ವ್ಯಾಪ್ತಿಯಲ್ಲಿ ಬರುತ್ತಿವೆ. ಇದರಿಂದ ಆಡಳಿತ ನಡೆಸಲು ತುಂಬಾ ಕಷ್ಟವಾಗುತ್ತಿದೆ ಎಂದರು. 2028 ರಲ್ಲಿ ಕ್ಷೇತ್ರಗಳ ಪುನರ್ವಿಂಗಡಣೆಯಾಗುವ ಸಾಧ್ಯತೆ ಇದೆ. ರಾಜ್ಯದಲ್ಲಿ 236 ತಾಲ್ಲೂಕು ಇದ್ದು 224 ಕ್ಷೇತ್ರಗಳು ಇವೆ. ಈ ಭಾರಿ ಜನಸಂಖ್ಯೆ ಹೆಚ್ಚಾಗುವ ಕಾರಣ 224 ಕ್ಷೇತ್ರಗಳ ಬದಲಾಗಿ 236 ಮತಕ್ಷೇತ್ರಕ್ಕೆ ವಿಸ್ತರಿಸಿ ತಾಲ್ಲೂಕಿಗೆ ಒಬ್ಬರನ್ನು ಶಾಸಕರಂತೆ ತೀರ್ಮಾನದ ಅವಶ್ಯಕತೆ ಇದೆ. ಇದನ್ನು ಮಾಡಿದರೆ ಶಾಸಕರು ಆಡಳಿತ ಸೂಸತ್ರವಾಗಿ ನಡೆಯಲಿದೆ ಎಂದು ತಿಳಿಸಿದರು.

# ಡೆಂಗಿ ಇಳಿಮುಖ: ಕಳೆದ ವರ್ಷ 254, ಈ ವರ್ಷ 62 ಪ್ರಕರಣ ದೃಢ


● ಈ ವರ್ಷ ಮುಂಗಾರು ಪೂರ್ವ ಅವಧಿಯಲ್ಲಿ ಸುರಿದ ವಿಪರೀತ ಮಳೆಯಿಂದ ಡೆಂಗಿ ಪ್ರಕರಣ ಹೆಚ್ಚಾಗುವ ಸಾಧ್ಯತೆ ಇತ್ತು

• ಉದಯವಾಹಿನಿ ಹುಬ್ಬಳ್ಳಿ

ಮಳೆಗಾಲ ಆರಂಭವಾದರೆ ಸಾಕು, ಸೊಳ್ಳೆಗಳ ಕಾಟ ಹೆಚ್ಚಾಗುತ್ತದೆ. ಮಲೇರಿಯಾ, ಡೆಂಗಿಯ ಹರಡುವ ಆತಂಕ ಕಾಡುತ್ತದೆ. ಈ ಬಾರಿ ಸಮಾಧಾನಕರ ಸಂಗತಿಯೆಂದರೆ, ಡೆಂಗಿ ಪ್ರಕರಣಗಳು ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಕಡಿಮೆಯಿದೆ.

ಕಳೆದ ವರ್ಷ 872 ಡೆಂಗಿ ದೃಢಪಟ್ಟಿದ್ದವು. ಮೊದಲ 6 ತಿಂಗಳಲ್ಲಿ ಜನವರಿ 1ರಿಂದ ಜೂನ್ 30ರವರೆಗೆ 254 ಡೆಂಗಿ ಪ್ರಕರಣಗಳು ದೃಢಪಟ್ಟಿದ್ದವು. ಈ ವರ್ಷ ಜನವರಿಯಿಂದ ಜೂನ್‌ವರೆಗೆ ಕೇವಲ 62 ಪ್ರಕರಣ ದೃಢಪಟ್ಟಿವೆ. ಡೆಂಗಿ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಿದೆ.

ಈ ವರ್ಷ ಮುಂಗಾರು ಪೂರ್ವ ಅವಧಿಯಲ್ಲಿ ಸುರಿದ ವಿಪರೀತ ಮಳೆಯಿಂದ ಡೆಂಗಿ ಪ್ರಕರಣ ಹೆಚ್ಚಾಗುವ ಸಾಧ್ಯತೆ ಇತ್ತು. ಇದನ್ನು ಎದುರಿಸಲು ಸಕಲ ಸಿದ್ಧತೆ ಮಾಡಿಕೊಂಡೆವು. ಡೆಂಗಿ. ಮಲೇರಿಯಾ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು, ಕಸ ಸಂಗ್ರಹಿಸುವ ವಾಹನಗಳಲ್ಲಿ ಡೆಂಗಿ ಮುನ್ನೆಚ್ಚರಿಕೆಯ ಸಂದೇಶಳ ಪ್ರಚಾರ, ಶಾಲಾ- ಕಾಲೇಜುಗಳಲ್ಲಿ ವಿದ್ಯಾರ್ಥಿಗಳಲ್ಲಿ


ಉದಯವಾಹಿನಿ ಚಿತ್ರ

ಆರೋಗ್ಯ ಇಲಾಖೆಯ ಸಿಬ್ಬಂದಿ ಸಮೀಕ್ಷೆಗಾಗಿ ಮನೆಗೆ ಬಂದಾಗ ಜನರು ಸಹಕರಿಸಬೇಕು. ಅಗತ್ಯ ಮಾಹಿತಿಯನ್ನು ನೀಡಬೇಕು. ಸಿಬ್ಬಂದಿಯ ಸಲಹೆ-ಸೂಚನೆ ಪಾಲಿಸಬೇಕು. -ಡಾ.ಎಸ್.ಎಂ. ಹೊನಕೇರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಧಾರವಾಡ

ಅರಿವು ಮೂಡಿಸುವುದು, ದೀರ್ಘ ಕಾಲ ನೀರು ಸಂಗ್ರಹವಾಗದಂತೆ ಎಚ್ಚರವಹಿಸುವ ಬಗ್ಗೆ ಜಾಗೃತಿ ಮೂಡಿಸಲಾಯಿತು' ಎಂದು ಆರೋಗ್ಯ ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದರು.

### ಸೊಳ್ಳೆ ಕಚ್ಚುವಿಕೆಯಿಂದ ಡೆಂಗಿ

ಸೋಂಕು ಹೊಂದಿದ ಈಡಿಸ್ ಈಜಿಪ್ಟ್ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಡೆಂಗಿ ಹರಡುತ್ತದೆ. ಈ ಸೊಳ್ಳೆಗಳು ಸಾಮಾನ್ಯವಾಗಿ ಸ್ವಚ್ಛ ನೀರಿನಲ್ಲಿ ಸಂತಾನಾಭಿವೃದ್ಧಿ ಮಾಡುತ್ತವೆ ಹಾಗೂ ಹಗಲು ಹೊತ್ತಿನಲ್ಲಿ ಮನುಷ್ಯರನ್ನು ಕಚ್ಚುತ್ತವೆ.



ನೀರಿನ ಶೇಖರಣೆಗಳಾದ ಸಿಮೆಂಟ್ ತೊಟ್ಟಿ ಡ್ರಮ್ಮು ಬ್ಯಾರೆಲ್ ಮಣ್ಣಿನ ಮಡಿಕೆ ಮುಂದಾದ ಕಡೆ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕಿದೆ. ಇದ್ದಕ್ಕಿದ್ದಂತೆ ತೀವ್ರ ಜ್ವರ ವಿಪರೀತ ತಲೆನೋವು ಕಣ್ಣುಗಳ ಹಿಂಭಾಗ ನೋವು ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಳ್ಳುತ್ತದೆ. ಬಾಯಿ ಮೂಗು ಮತ್ತು ಒಸಡುಗಳಿಂದ ರಕ್ತಸ್ರಾವ ಮತ್ತು ಚರ್ಮದ ಮೇಲೆ ಅಲ್ಲಲ್ಲಿ ರಕ್ತಸ್ರಾವದ ಗುರುತು ಕಾಣಿಸುವುದು ಡೆಂಗಿ ಲಕ್ಷಣಗಳಾಗಿವೆ. ಇವು ಕಂಡುಬಂದರೆ ತಕ್ಷಣ ವೈದ್ಯರನ್ನು ಭೇಟಿಯಾಗಬೇಕು' ಎಂದು ಆರೋಗ್ಯ ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದರು.

'ಆರೋಗ್ಯ ಇಲಾಖೆ ಸಿಬ್ಬಂದಿ ಜೊತೆಗೆ ಆಶಾ ಕಾರ್ಯಕರ್ತೆಯರು ಹಾಗೂ ಸ್ವಯಂ ಸೇವಕರು ಕೈಜೋಡಿಸಿದ್ದಾರೆ. ಲಾರ್ವಾ ಸಮೀಕ್ಷೆ ಕಾರ್ಯ ನಿರಂತರ ನಡೆದಿದೆ. ಡೆಂಗಿಗೆ ಕಾರಣ ಆಗುವ ಈಡೀಸ್ ಲಾರ್ವಾ ಸೊಳ್ಳೆ ಪತ್ತೆ ಹಚ್ಚಲಾಗುತ್ತಿದೆ.

ಸೊಳ್ಳೆಗಳು ಕಂಡುಬಂದರೆ, ಆ ಪ್ರದೇಶವನ್ನು ಸ್ವಚ್ಛಗೊಳಿಸಲಾಗುವುದು. ಆ ಪ್ರದೇಶದಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಲಾಗುತ್ತಿದೆ. ಸಂತಾನೋತ್ಪತ್ತಿ ಮಾಡದಂತೆ ಫಾಗ್ಗಿಂಗ್ ಮಾಡಲಾಗುತ್ತಿದೆ' ಎಂದು ಆರೋಗ್ಯ ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದರು.

### ಜೂನ್ ಸೃಷ್ಟಿಸಿದ ಆತಂಕ

ಈ ವರ್ಷ ಮುಂಗಾರು ಅವಧಿಗೂ ಮುಂಚೆಯೇ ಆರಂಭವಾಗಿತ್ತು. ಇದಲ್ಲದೇ, ಧಾರವಾಡ ಜಿಲ್ಲೆಯಲ್ಲಿ ಜೂನ್ ತಿಂಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ಇದರ ಪರಿಣಾಮ ಸೊಳ್ಳೆಗಳ ಸಂಖ್ಯೆ ವಿಪರೀತ ಹೆಚ್ಚಾಗಿ. ಡೆಂಗಿ ಆತಂಕ ಸೃಷ್ಟಿಸಿತ್ತು. ಕಳೆದ ವರ್ಷ ಜೂನ್ ಒಂದೇ ತಿಂಗಳಲ್ಲಿ 134 ಡೆಂಗಿ ಪ್ರಕರಣಗಳು ದೃಢಪಟ್ಟಿದ್ದವು. ಆರೋಗ್ಯ ಇಲಾಖೆಯ ಕ್ರಮದಿಂದ ಕಳೆದ ತಿಂಗಳು ಜೂನ್‌ನಲ್ಲಿ ಕೇವಲ 10 ಪ್ರಕರಣಗಳು ದೃಢಪಟ್ಟಿವೆ.

## ವಿಮಾ ನೌಕರರಿಂದ ಮುಷ್ಕರ

• ಉದಯವಾಹಿನಿ ಬಳ್ಳಾರಿ

ಅಖಿಲ ಭಾರತ ವಿಮಾ ನೌಕರರ ಸಂಘ ದೇಶವ್ಯಾಪಿ ಸಾರ್ವತ್ರಿಕ ಒಂದು ದಿನದ ಮುಷ್ಕರ ಹಮ್ಮಿಕೊಂಡಿದೆ. ಇದರ ಅಂಗವಾಗಿ ಬಳ್ಳಾರಿ ವಿಮಾ ನೌಕರರ ಸಂಘಟನೆಯು ಕೇಂದ್ರ ಸರಕಾರದ ಜನವಿರೋಧಿ, ರೈತ ವಿರೋಧಿ ಹಾಗೂ ಕಾರ್ಮಿಕ ವಿರೋಧಿ ನೀತಿಗಳನ್ನು ವಿರೋಧಿಸಿ ಘೋಷಣೆಗಳನ್ನು ಕೂಗಿ ವೇತನ ರಹಿತ ಮುಷ್ಕರದಲ್ಲಿ ಪಾಲ್ಗೊಂಡಿದ್ದರು.

ವಿಮಾ ಕಂತಿನ ಮೇಲೆ ಜಿ ಎಸ್ ಟಿ, ಹೊಸ ಪಿಂಚಣಿ ವಿರೋಧಿಸಿ, ಹಳೆ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಬೇಕೆಂದು ಒತ್ತಾಯಿಸಿದರಲ್ಲದೇ, ವಿಮಾ ವಲಯದಲ್ಲಿ ವಿದೇಶಿ ನೇರ ಬಂಡವಾಳ ವಿರೋಧಿಸಿ ಎಲೈಸಿ ಯಲ್ಲಿ ವರ್ಗ 3 ಮತ್ತು 4ರ ನೇಮಕಾತಿಗಾಗಿ ಆಗ್ರಹಿಸಿ ಕಾರ್ಮಿಕರ ಹೊರ ಗುತ್ತಿಗೆ ವಿರೋಧಿಸಿ ಇನ್ನು ಮುಂತಾದ ಬೇಡಿಕೆಗಳ ಕುರಿತು ಶಾಖಾ ಘಟಕದ ಅಧ್ಯಕ್ಷ ಕಾಮರೇಡ್ ಕಮಲ್ ಹಾಸನ್ ಮಾತನಾಡಿದರು. ಕಾರ್ಯದರ್ಶಿ ಕಾಮರೇಡ್ ಅನಿಲ್ ಕುಮಾರ್, ಕಾಮರೇಡ್ ಕೀರ್ತಿ ಖಜಾಂಚಿ ಮತ್ತು ಇತರ ಸದಸ್ಯರಾದ ಕಾಮರೇಡ್ ರಮೇಶ್, ಕಾಮರೇಡ್ ಶೈಲಜಾ, ಕಾಮರೇಡ್ ಸಂತೋಷ್ ಹಾಗೂ ಶಾಖೆಯ ಎಲ್ಲಾ ಸಂಗಾತಿಗಳು ಹಾಜರಿದ್ದರು. ನಂತರ ಇತರ ಕಾರ್ಮಿಕ ಸಂಘಟನೆಗಳ ನೇತೃತ್ವದಲ್ಲಿ ನಡೆದ ಸಾರ್ವಜನಿಕ ಮುಷ್ಕರದಲ್ಲಿಯೂ ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು.

## 49 ಸಾವಿರ ಕೋಟಿ ರೂ ಹಗರಣ : ಪಿಎಸಿಎಲ್ ನಿರ್ದೇಶಕ ಗುರ್ನಾಮ್ ಸಿಂಗ್ ಬಂಧನ

**ಲಕ್ನೋ :** ಸುಮಾರು 49,000 ಕೋಟಿ ರೂಪಾಯಿಗಳ ವಂಚನೆಗೆ ಸಂಬಂಧಿಸಿದಂತೆ ಉತ್ತರ ಪ್ರದೇಶ ಪೊಲೀಸರ ಆರ್ಥಿಕ ಅಪರಾಧ ವಿಭಾಗ, ಪಂಜಾಬ್‌ನ ರೂಪನಗರ ಜಿಲ್ಲೆಯಲ್ಲಿ ಗುರ್ನಮ್ ಸಿಂಗ್ ಎಂಬ ವ್ಯಕ್ತಿಯನ್ನು ಬಂಧಿಸಿದೆ. ಗುರ್ನಮ್ ಸಿಂಗ್ ಪರ್ಲ್ಸ್ ಆಗ್ರೋ-ಟೆಕ್ ಕಾರ್ಪೊರೇಷನ್ ಲಿಮಿಟೆಡ್ ಕಂಪನಿಯ ನಿರ್ದೇಶಕರಾಗಿದ್ದಾರೆ. ಅವರನ್ನು ಬಂಧಿಸಲಾಗಿದೆ. ಈತ ಐದು ಕೋಟಿಗೂ ಹೆಚ್ಚು ಹೂಡಿಕೆದಾರರಿಗೆ ವಂಚನೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಇದು ಪೊಂಜಿ ಮಾದರಿಯ ವಂಚನೆ ಎಂದು ಹೇಳಲಾಗಿದೆ.

**10 ರಾಜ್ಯಗಳಲ್ಲಿ ವಂಚನೆ:** ಗುರ್ನಮ್ ಸಿಂಗ್ ಅವರಿಗೆ 69 ವರ್ಷ ವಯಸ್ಸಾಗಿದೆ. ಉತ್ತರ ಪ್ರದೇಶ, ಪಂಜಾಬ್, ದೆಹಲಿ, ರಾಜಸ್ಥಾನ, ಬಿಹಾರ ಮತ್ತು ಕೇರಳ ಸೇರಿದಂತೆ 10 ರಾಜ್ಯಗಳಲ್ಲಿ ಅವರು ವಂಚನೆ ಮಾಡಿದ್ದಾರೆ. ಪಿಎಸಿಎಲ್ ಕಂಪನಿಯು ನಕಲಿ ರಿಯಲ್ ಎಸ್ಟೇಟ್ ಯೋಜನೆಗಳ ಮೂಲಕ ಹೂಡಿಕೆದಾರರನ್ನು ಆಕರ್ಷಿಸಿತ್ತು. ಭೂಮಿ ಮತ್ತು ಹೆಚ್ಚಿನ ಲಾಭದ ಆಮಿಷವನ್ನು ನೀಡಲಾಗಿತ್ತು. ಆದರೆ, ಈ ಕಂಪನಿಯು NBFC ಆಗಿ ನೋಂದಣಿಯಾಗಿರಲಿಲ್ಲ, ಇದರಿಂದಾಗಿ ನಿಯಮಗಳನ್ನು ಉಲ್ಲಂಘಿಸಿದೆ. ನಿರ್ದೇಶಕರಾದ ನೀರಾ ರಾವತ್ ಅವರು ಈ ಬಗ್ಗೆ ಮಾಹಿತಿ ನೀಡಿದ್ದಾರೆ.



ಈ ಕಂಪನಿಯು ಒಂದು ರೀತಿಯ ಪಿರಮಿಡ್ ಮಾದರಿಯ ವ್ಯವಹಾರವಾಗಿತ್ತು. ಮೊದಲ ಹೂಡಿಕೆದಾರರಿಗೆ ಹೊಸ ಹೂಡಿಕೆದಾರರಿಂದ ಹಣವನ್ನು ನೀಡಲಾಗುತ್ತಿತ್ತು. ಏಜೆಂಟರು ಹೆಚ್ಚಿನ ಕಮಿಷನ್ ಪಡೆದು, ತಮ್ಮ ಕುಟುಂಬ ಮತ್ತು ಸ್ನೇಹಿತರನ್ನು ಸೇರಿಸಲು ಪ್ರೋತ್ಸಾಹಿಸುತ್ತಿದ್ದರು. ದೊಡ್ಡ ಸಮಾರಂಭಗಳನ್ನು ನಡೆಸಿ ಜನರನ್ನು ಆಕರ್ಷಿಸುತ್ತಿದ್ದರು ಎಂದು ಅವರು ಹೇಳಿದ್ದಾರೆ.

ಈ ಕಂಪನಿಯನ್ನು 1996 ರಲ್ಲಿ ಜೈಪುರದಲ್ಲಿ ಗುರುವಂತ್ ಆಗ್ರೋ-ಟೆಕ್ ಲಿಮಿಟೆಡ್ ಎಂದು ನೋಂದಾಯಿಸಲಾಯಿತು. 2011 ರಲ್ಲಿ, ಇದನ್ನು ಪಿಎಸಿಎಲ್ ಲಿಮಿಟೆಡ್ ಎಂದು ಬದಲಾಯಿಸಲಾಯಿತು. ಇದರ ಮುಖ್ಯ ಕಚೇರಿ ದೆಹಲಿಯ ಬಾರಾಖಂಬಾ ರಸ್ತೆಯಲ್ಲಿದೆ. ಉತ್ತರ ಪ್ರದೇಶದಲ್ಲಿ ಅನೇಕ ಶಾಖೆಗಳನ್ನು ತೆರೆಯಲಾಗಿತ್ತು. ಮಹೋಬಾ, ಜಲೌನ್, ಸುಲ್ತಾನ್‌ಪುರ ಮತ್ತು ಫರೂಖಾಬಾದ್‌ನಲ್ಲಿ ನಕಲಿ ಭೂಮಿ ಯೋಜನೆಗಳನ್ನು ಮಾರಾಟ ಮಾಡಲಾಗಿತ್ತು. ಹೂಡಿಕೆದಾರರಿಗೆ ರಸೀದಿಗಳನ್ನು ನೀಡಲಾಗಿತ್ತು. ಆದರೆ, ಅವರಿಗೆ ಭೂಮಿ ಅಥವಾ ಲಾಭವನ್ನು ನೀಡಿರಲಿಲ್ಲ.

**ಸೆಬಿ ತನಿಖೆ:** ದೂರುಗಳು ಬಂದ ನಂತರ, ಸೆಬಿ ತನಿಖೆ ನಡೆಸಿತು. ನಂತರ ಕಾನ್ಪುರದಲ್ಲಿ ಪ್ರಕರಣ ದಾಖಲಿಸಲಾಯಿತು ಜಾರಿ ನಿರ್ದೇಶನಾಲಯ ಕೂಡ ಪಿಎಸಿಎಲ್ ಮತ್ತು ಅದರ ಸಹವರ್ತಿಗಳ ವಿರುದ್ಧ ದೂರು ದಾಖಲಿಸಿದೆ. ಉತ್ತರ ಪ್ರದೇಶದಲ್ಲಿ ಸಂಗ್ರಹಿಸಿದ 19,000 ಕೋಟಿ ರೂ.ಗಳನ್ನು ಬೇರೆ ಕಂಪನಿಗಳ ಮೂಲಕ ವರ್ಗಾಯಿಸಲಾಗಿದೆ ಎಂದು ಇ ಡಿ ಹೇಳಿದೆ. ಈ ಹಣವನ್ನು ಹರ್ಸತಿಂದರ್ ಪಾಲ್ ಸಿಂಗ್ ಹಾಯರ್ ಎಂಬುವರು ನಿಯಂತ್ರಿಸುತ್ತಿದ್ದರು. ಅವರು ಪಿಎಸಿಎಲ್ ಸ್ಥಾಪಕ ನಿರ್ಮಲ್ ಸಿಂಗ್ ಭಾಂಗೂ ಅವರ ಅಳಿಯ. ಹಾಯರ್ ಅವರನ್ನು ಈಗಾಗಲೇ ಬಂಧಿಸಲಾಗಿದೆ.

## ಮಿನಿ ನ್ಯೂಸ್

### ಟಿಎಂಸಿ ನಾಯಕನ ಹತ್ಯೆ

**ಕೋಲ್ಕತ್ತಾ:** ಪಶ್ಚಿಮ ಬಂಗಾಳದ ದಕ್ಷಿಣ 24 ಪರಗಣ ಜಿಲ್ಲೆಯಲ್ಲಿ 38 ವರ್ಷದ ತೃಣಮೂಲ ಕಾಂಗ್ರೆಸ್ ನಾಯಕನನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದೆ. ತಡರಾತ್ರಿ ಭಂಗಾರ್ ಪ್ರದೇಶದಲ್ಲಿ ಈ ಘಟನೆ ನಡೆದಿದ್ದು, ಟಿಎಂಸಿಯ ಕ್ಯಾನಿಂಗ್ ಪುರ್ಬಾ ಶಾಸಕ ಸೌಕತ್ ಮೊಲ್ಲಾ ಅವರ ಆಪ್ತ ಸಹಾಯಕ ರಜ್ಜಕ್ ಖಾನ್ ಅವರ ಮೇಲೆ ಕೆಲವು ಬಂದೂಕುಧಾರಿಗಳು ಗುಂಡು ಹಾರಿಸಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಟಿಎಂಸಿ ಕಾರ್ಯಕಾರಿಣಿಯ ಹತ್ಯೆಗೆ ಸಂಬಂಧಿಸಿದಂತೆ ಇದುವರೆಗೆ ಯಾರನ್ನೂ ಬಂಧಿಸಲಾಗಿಲ್ಲ ಎಂದು ಅವರು ಹೇಳಿದರು. ಟಿಎಂಸಿಯ ಚಲ್ತಾಬೇರಿಯಾ ಘಟಕದ ಅಧ್ಯಕ್ಷ ಖಾನ್ ಅವರು ಅಲ್ಲಿ ನಡೆದ ಪಕ್ಷದ ಸಭೆಯಲ್ಲಿ ಭಾಗವಹಿಸಿ ಮನೆಗೆ ಹಿಂತಿರುಗುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ಅಧಿಕಾರಿ ಹೇಳಿದರು. ಮೃತ ವ್ಯಕ್ತಿಗೆ ಮೂರು ಗುಂಡುಗಳು ತಗುಲಿರುವುದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ. ಅವರ ಸಾವನ್ನು ಖಚಿತಪಡಿಸಿಕೊಳ್ಳಲು ದಾಳಿಕೋರರು ಅವರನ್ನು ಹಲವು ಬಾರಿ ಇರಿದಿದ್ದಾರೆ ಎಂದು ಕಾಶಿಪುರ ಪೊಲೀಸ್ ಠಾಣೆಯ ಹಿರಿಯ ಅಧಿಕಾರಿ ತಿಳಿಸಿದ್ದಾರೆ.

### ಅಮರನಾಥನ ದರ್ಶನಕ್ಕೆ 6400 ಭಕ್ತರು

**ಜಮ್ಮು:** ದಕ್ಷಿಣ ಕಾಶ್ಮೀರ ಹಿಮಾಲಯದಲ್ಲಿರುವ 3,880 ಮೀಟರ್ ಎತ್ತರದ ಅಮರನಾಥ ಗುಹಾ ದೇವಾಲಯದ ಅವಳಿ ಮೂಲ ಶಿಬಿರಗಳಿಗೆ ಇಂದು 6,400 ಕ್ಕೂ ಹೆಚ್ಚು ಯಾತ್ರಿಕರು ತೆರಳಿದ್ದಾರೆ. ಜುಲೈ 3 ರಂದು ಅನಂತನಾಗ್ ಜಿಲ್ಲೆಯ ಪಹಲ್ಗಾಮ್ ಮತ್ತು ಗಂಡೇರ್ಬಾಲ್ ಜಿಲ್ಲೆಯ ಬಾಲ್ಟಾಲ್ ಜೋಡಿ ಹಳಿಗಳ ಮೂಲಕ 38 ದಿನಗಳ ವಾರ್ಷಿಕ ಯಾತ್ರೆ ಪ್ರಾರಂಭವಾದಾಗಿನಿಂದ 1.30 ಲಕ್ಷಕ್ಕೂ ಹೆಚ್ಚು ಯಾತ್ರಿಕರು ದೇಗುಲದಲ್ಲಿ ಪೂಜೆ ಸಲ್ಲಿಸಿದ್ದಾರೆ.

ಸಿಆರ್‌ಪಿಎಫ್ , ಪೊಲೀಸ್ ಸಿಬ್ಬಂದಿಯ ಬೆಂಗಾವಲಿನೊಂದಿಗೆ, 4,838 ಪುರುಷರು, 1,387 ಮಹಿಳೆಯರು, 16 ಮಕ್ಕಳು ಮತ್ತು 241 ಸನ್ಯಾಸಿಗಳು ಸೇರಿದಂತೆ 6,482 ಯಾತ್ರಿಕರ 10 ನೇ ಬ್ಯಾಚ್ ಬೆಳಗಿನ ಜಾವ 3:20 ರಿಂದ ಬೆಳಗಿನ ಜಾವ 4:04 ರ ನಡುವೆ 268 ವಾಹನಗಳಲ್ಲಿ ಇಲ್ಲಿನ ಭಗವತಿ ನಗರ ಶಿಬಿರದಿಂದ ಹೊರಟಿತು.

### 75 ವರ್ಷ ಕುರಿತ ಆರ್‌ಎಸ್‌ಎಸ್ ಹೇಳಿಕೆ : ಮೋದಿ ಕಾಲೆಳೆದ ಕಾಂಗ್ರೆಸ್

**ನವದೆಹಲಿ:** ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರು 75 ವರ್ಷ ತುಂಬಿದವರು ಪಕ್ಷದಿಂದ ಕೆಳಗಿಳಿಯುವ ಬಗ್ಗೆ ನೀಡಿರುವ ಹೇಳಿಕೆಗೆ ಕಾಂಗ್ರೆಸ್ ಪಕ್ಷ ಪ್ರಧಾನಿ ನರೇಂದ್ರ ಮೋದಿ ಅವರನ್ನು ಟೀಕಿಸಿದ್ದು, ವಿದೇಶದಿಂದ ಹಿಂದಿರುಗಿದ ಪ್ರಧಾನಿಗಳಿಗೆ ಸರಸಂಘಚಾಲಕ್ ಅವರು 75 ವರ್ಷ ತುಂಬುತ್ತಿರುವುದನ್ನು ನೆನಪಿಸಿದ್ದು ಮಾತ್ರ ವಿಪರ್ಯಾಸ ಎಂದಿದೆ. ನಾಗ್ಪುರದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ, ಆರ್‌ಎಸ್‌ಎಸ್ ಮುಖ್ಯಸ್ಥ ಭಾಗವತ್ ಅವರು 75 ವರ್ಷ ವಯಸ್ಸಿನ ನಂತರ ಪಕ್ಷದಿಂದ ಕೆಳಗಿಳಿಯುವ ಬಗ್ಗೆ ಸಂಘದ ಸಿದ್ಧಾಂತವಾದಿ ದಿವಂಗತ ಮೊರೋಪಂತ್ ಪಿಂಗ್ಲೆ ಅವರ ಹೇಳಿಕೆಯನ್ನು ಉಲ್ಲೇಖಿಸಿದರು.

75 ವರ್ಷಗಳ ಶಾಲು ನಿಮ್ಮ ಮೇಲೆ ಹೊದಿಸಿದರೆ, ನೀವು ಒಂದು ನಿರ್ದಿಷ್ಟ ವಯಸ್ಸನ್ನು ತಲುಪಿದ್ದೀರಿ ಮತ್ತು ಪಕ್ಷದಿಂದ ಕೆಳಗಿಳಿದು ಇತರರಿಗೆ ಕೆಲಸ ಮಾಡಲು ಬಿಡಬೇಕು ಎಂಬ ಪಿಂಗ್ಲೆ ಅವರ ಹೇಳಿಕೆಯನ್ನು ಭಾಗವತ್ ನಿರ್ದಿಷ್ಟವಾಗಿ ಉಲ್ಲೇಖಿಸಿದರು.

### ಪೊಲೀಸ್ ನೇಮಕಾತಿ ಹಗರಣದಲ್ಲಿ ಮತ್ತೆ ಮೂವರ ಬಂಧನ

**ಜೈಪುರ:** ಕಳೆದ 2021ನಲ್ಲಿ ರಾಜಸ್ಥಾನ ಪೊಲೀಸರ ವಿಶೇಷ ಕಾರ್ಯಾಚರಣೆ ಪಡೆಯ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಬಂಧಿಸಲಾಗಿರುವ ಕಿಂಗ್‌ಪಿಂಗ್‌ನ ಬಾಬುಲಾಲ್ ಕಟಾರಾ ಅವರ ಸಹಚರ ಕುಂದನ್ ಕುಮಾರ್ ಪಾಂಡ್ಯ, ಅವರ ಮಗಳು, ಸೋದರಳಿಯ ಮತ್ತು ಸೊಸೆಯನ್ನು ಬಂಧಿಸಲಾಗಿದೆ.

ಕಳೆದ 2021ರ ನೇಮಕಾತಿ ಪರೀಕ್ಷೆಯ ಪ್ರಶ್ನೆ ಪತ್ರಿಕೆಯನ್ನು ಕಟಾರಾ, ತನ್ನ ಸಹಚರ ಪಾಂಡ್ಯ ಅವರಿಗೆ ನೀಡಿದ್ದ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಈ ಪ್ರಶ್ನೆ ಪತ್ರಿಕೆಗಳನ್ನು ತಮ್ಮ ಮಗಳು ರಿದ್ದಿ, ಸೋದರಳಿಯ ನೈತಿಕ್ ಮತ್ತು ಸೊಸೆ ನೇಹಾ ಅವರಿಗೆ ನೀಡಿದ್ದರು. ಮೂವರೂ ಪತ್ರಿಕೆಯನ್ನು ಪಡೆದ ನಂತರ ಪರೀಕ್ಷೆ ಬರೆದು ಉತ್ತೀರ್ಣರಾದರು, ಆದರೆ ಅವರು ದೈಹಿಕ ಪರೀಕ್ಷೆಯಲ್ಲಿ ವಿಫಲರಾಗಿದ್ದರು. ನೇಮಕಾತಿ-ಪರೀಕ್ಷೆಯ ಸೋರಿಕೆ ಬಹಿರಂಗಗೊಂಡ ನಂತರ ತನಿಖಾ ತಂಡವನ್ನು ರಚಿಸಲಾಗಿತ್ತು ಎಂದು ಹೆಚ್ಚುವರಿ ಮಹಾನಿರ್ದೇಶಕ ವಿ.ಕೆ. ಸಿಂಗ್ ಹೇಳಿದ್ದಾರೆ. ಪ್ರಸ್ತುತ ಎಸ್‌ಒಜಿ ತಂಡವು ಸ್ವೀಕರಿಸಿದ ಮಾಹಿತಿಯ ಆಧಾರದ ಮೇಲೆ ಕಟಾರಾ ಅವರ ಸಹಚರನ ಮಗಳು, ಸೋದರಳಿಯ ಮತ್ತು ಸೊಸೆಯನ್ನು ಬಂಧಿಸಲಾಗಿದೆ.

### ಇಂದೋರ್ ಜೈಲಿನಲ್ಲಿ ಕೈದಿಗಳು ತಯಾರಿಸಿದ ಮಸಾಲೆಗಳ ಮಾರಾಟ

**ಇಂದೋರ್:** ಇಲ್ಲಿನ ಕೇಂದ್ರ ಕಾರಾಗೃಹದ ಕೈದಿಗಳು ಶೀಘ್ರದಲ್ಲೇ ಜೈಲಿನ ಸ್ವಂತ ಅಡುಗೆಮನೆಯ ಜೊತೆಗೆ ಹೊರ ಪ್ರಪಂಚಕ್ಕೂ ಲಭ್ಯವಾಗುವಂತೆ ಮಸಾಲೆಗಳನ್ನು ತಯಾರಿಸಲಿದ್ದಾರೆ. ಮಧ್ಯ ಪ್ರದೇಶದ ಜೈಲು ಮತ್ತು ತಿದ್ದುಪಡಿ ಸೇವೆಗಳ ಇಲಾಖೆಯ ಮಹಾನಿರ್ದೇಶಕ ಗೋವಿಂದ ಪ್ರತಾಪ್ ಸಿಂಗ್ ಅವರು ಗುರು ಪೂರ್ಣಿಮೆಯ ಸಂದರ್ಭದಲ್ಲಿ ಕೇಂದ್ರ ಕಾರಾಗೃಹದಲ್ಲಿ ಅಹಲ್ಯಾ ಮಸಾಲಾ ಉದ್ಯೋಗ ಕೇಂದ್ರವನ್ನು ಉದ್ಘಾಟಿಸಿ ಹೊಸ ಪ್ರಯೋಗಕ್ಕೆ ಚಾಲನೆ ನೀಡಿದ್ದಾರೆ. ನಾವು ಇದನ್ನು ಪ್ರಾರಂಭಿಸಲು ಕಡಿಮೆ ಬಂಡವಾಳದಲ್ಲಿ ಅಗತ್ಯವಿರುವ ವಿವಿಧ ಕೈಗಾರಿಕೆಗಳಲ್ಲಿ ಕೈದಿಗಳಿಗೆ ತರಬೇತಿ ನೀಡುತ್ತಿದ್ದೇವೆ. ಜೈಲಿನಿಂದ ಬಿಡುಗಡೆಯಾದ ನಂತರ ಸ್ವಯಂ ಉದ್ಯೋಗವನ್ನು ಕಂಡುಕೊಳ್ಳುವಲ್ಲಿ ಇದು ಅವರಿಗೆ ಸಹಾಯಕವಾಗುತ್ತದೆ ಎಂದು ಅವರು ಹೇಳಿದರು.

ಜೈಲು ಸೂಪರಿಂಟೆಂಡೆಂಟ್ ಅಲ್ಕಾ ಸೋಂಕರ್ ಮಾತನಾಡಿ, ಕೈದಿಗಳು ಸ್ವಯಂಚಾಲಿತ ಯಂತ್ರಗಳನ್ನು ಬಳಸಿಕೊಂಡು ಕೊತ್ತಂಬರಿ, ಅರಿಶಿನ, ಕಾಶ್ಮೀರಿ ಕೆಂಪು ಮೆಣಸಿನಕಾಯಿ ಮತ್ತು ಗರಂ ಮಸಾಲದಂತಹ ಮಸಾಲೆಗಳನ್ನು ತಯಾರಿಸುತ್ತಾರೆ ಎಂದು ಹೇಳಿದರು. ಕೈದಿಗಳು ತಯಾರಿಸಿದ ಮಸಾಲೆಗಳನ್ನು ಇಂದೋರ್ ಮತ್ತು ಸುತ್ತಮುತ್ತಲಿನ ಜಿಲ್ಲೆಗಳ ಜೈಲುಗಳ ಅಡುಗೆ ಮನೆಗಳಲ್ಲಿ ಬಳಸಲಾಗುವುದು. ಕೇಂದ್ರ ಜೈಲಿನ ಹೊರಗಿನ ಮಾರಾಟ ಮಳಿಗೆಯಲ್ಲಿ 250 ಗ್ರಾಂ, 500 ಗ್ರಾಂ ಮತ್ತು 1ಕೆ.ಜಿ. ಪ್ಯಾಕೆಟ್‌ಗಳಲ್ಲಿ ಸಾರ್ವಜನಿಕರಿಗೆ ಲಭ್ಯವಿರುತ್ತದೆ ಎಂದು ಅವರು ಹೇಳಿದರು.

---

● ಟ್ರಂಪ್ ಮನೆಯಲ್ಲಿ ಸೂರ್ಯ ಸ್ನಾನ ಮಾಡುವಾಗ ಹೊಟ್ಟೆಗೆ ಡ್ರೋನ್ ಅಪ್ಪಳಿಸಬಹುದು: ಇರಾನ್ ಸುಮ್ಮನಿರದು

## ಜಾವದ್ ಡ್ರೋನ್ ದಾಳಿ ಎಚ್ಚರಿಕೆಗೆ: ಡೊನಾಲ್ಡ್ ಟ್ರಂಪ್ ವ್ಯಂಗ್ಯ

**ಟೆಹ್ರಾನ್:** ಇರಾನ್-ಇಸ್ರೇಲ್-ಅಮೆರಿಕ ತ್ರಿಕೋನ ಸಂಘರ್ಷ ಕೊನೆಗೊಂಡಿದ್ದರೂ, ಮೂರೂ ರಾಷ್ಟ್ರಗಳ ನಡುವಿನ ವಾಕ್ಸಮರ ಮಾತ್ರ ಕೊನೆಯಾಗಿಲ್ಲ. ನಿತ್ಯವೂ ಪರಸ್ಪರರನ್ನು ಎಚ್ಚರಿಸುವ ಹೇಳಿಕೆಗಳು ಹೊರಬರುತ್ತಲೇ ಇದ್ದು, ಈ ವಾಕ್ಸಮರ ಯಾವಾಗ ಗಂಭೀರ ಸ್ವರೂಪ ಪಡೆಯಲಿದೆ ಎಂಬ ಆತಂಕ ಮನೆ ಮಾಡಿದೆ. ಅದರಲ್ಲೂ ಪರಸ್ಪರ ಉನ್ನತ ನಾಯಕರನ್ನು ಕೊಲ್ಲುವ ಹೇಳಿಕೆಗಳು, ಮಧ್ಯಪ್ರಾಚ್ಯದಲ್ಲಿ ಮತ್ತೊಂದು ಸುತ್ತಿನ ಬಡಿದಾಟ

- ಡೊನಾಲ್ಡ್ ಟ್ರಂಪ್ ಸೂರ್ಯಸ್ನಾನ ಮಾಡುವಾಗ ಎಚ್ಚರದಿಂದ ಇರುವಂತೆ ಸೂಚಿಸಿದ ಇರಾನ್ ನಾಯಕ.
- ಮೊಹಮ್ಮದ್-ಜಾವದ್ ಲಾರಿಜಾನಿ ಡ್ರೋನ್ ದಾಳಿ ಎಚ್ಚರಿಕೆಗೆ ಡೊನಾಲ್ಡ್ ಟ್ರಂಪ್ ವ್ಯಂಗ್ಯದ ಪ್ರತಿಕ್ರಿಯೆ.
- ನನಗೆ ಸೂರ್ಯ ಸ್ನಾನದಲ್ಲಿ ಆಸಕ್ತಿ ಇಲ್ಲ ಎಂದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್.

ಆರಂಭವಾಗುವ ಬೆದರಿಕೆ ತಂದೊಡ್ಡಿದೆ.

ಇರಾನ್‌ನ ಸರ್ವೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಅವರ ಮಾಜಿ ಹಿರಿಯ ಸಲಹೆಗಾರ ಮೊಹಮ್ಮದ್-ಜಾವದ್ ಲಾರಿಜಾನಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಫ್ಲೋರಿಡಾದಲ್ಲಿರುವ ತಮ್ಮ ಮಾರ್-ಎ-ಲಾಗೊ ಭವನದಲ್ಲಿ ಸೂರ್ಯ ಸ್ನಾನ ಮಾಡುವಾಗ ಇರಾನ್ ಅವರ ಮೇಲೆ ಕ್ಷಿಪಣಿ ದಾಳಿ ಮಾಡಬಹುದು

**ವಾಕ್ಸಮರ ಗಂಭೀರ ಸ್ವರೂಪ**



ಎಂದು ಎಚ್ಚರಿಸಿದ್ದಾರೆ. ಈ ಹೇಳಿಕೆ ಇರಾನ್ ಮತ್ತು ಅಮೆರಿಕ ನಡುವಿನ ರಾಜತಾಂತ್ರಿಕ ಸಂಬಂಧವನ್ನು ಮತ್ತಷ್ಟು ಹದಗೆಡಿಸಿದೆ. ಇತ್ತೀಚೆಗೆ ಇರಾನ್‌ನ ಉನ್ನತ ಶಿಯಾ ಧರ್ಮಗುರು ಗ್ರ್ಯಾಂಡ್ ಅಯತೊಲ್ಲಾ ನಾಸರ್ ಮಕರೆಮ್ ಶಿರಾಜಿ ಅವರು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರಂತಹ ದೇವರ ಶತ್ರುಗಳ ಹತ್ಯೆಗೆ ಫತ್ವಾ ಹೊರಡಿಸಿದ್ದನ್ನು ಇಲ್ಲಿ ಸ್ಮರಿಸಬಹುದು.




**ನಕ್ಕು ಸುಮ್ಮನಾದ ಟ್ರಂಪ್**

ಇನ್ನು ತಮ್ಮ ಹೊಟ್ಟೆಗೆ ಡ್ರೋನ್ ಅಪ್ಪಳಿಸಲಿದೆ ಎಂಬ ಇರಾನ್ ನಾಯಕನ ಹೇಳಿಕೆಗೆ ವ್ಯಂಗ್ಯವಾಗಿ ಪ್ರತಿಕ್ರಿಯಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ನಾನು ಬಹುಶಃ ಏಳು ವರ್ಷದವನಿದ್ದಾಗ ಸೂರ್ಯ ಸ್ನಾನ ಮಾಡಿದ್ದೆ. ಅದಾದ ಬಳಿಕ ನಾನು ಸೂರ್ಯನಿಗೆ ಮೈಯೊಡ್ಡಿಲ್ಲ, ಏಕೆಂದರೆ ನನಗೆ ಸೂರ್ಯ ಸ್ನಾನ ಮಾಡುವುದು ಸೇರುವುದಿಲ್ಲ ಎಂದು ಹಾಸ್ಯ ಚಟಾಕಿ ಹಾರಿಸಿದ್ದಾರೆ.


ಡೊನಾಲ್ಡ್ ಟ್ರಂಪ್ ಅವರು ಮಾರ್-ಎ-ಲಾಗೊದಲ್ಲಿ ಇನ್ನು ಮುಂದೆ ಸೂರ್ಯನ ಸ್ನಾನ ಮಾಡುವಾಗ ಎಚ್ಚರದಿಂದ ಇರಬೇಕು. ಅಮೆರಿಕ ಅಧ್ಯಕ್ಷರು ತಮ್ಮ ಹೊಟ್ಟೆಯನ್ನು ಸೂರ್ಯನಿಗೆ ಒಡ್ಡಿಕೊಂಡು ಮಲಗಿರುವಾಗಲೇ, ಒಂದು ಸಣ್ಣ ಡ್ರೋನ್ ಅವರ ಹೊಟ್ಟೆಗೆ ಡಿಕ್ಕಿ ಹೊಡೆಯಬಹುದು. ಇಂತಹ ದಾಳಿ ಮಾಡುವುದು ಇರಾನ್‌ಗೆ ತುಂಬ ಸುಲಭ ಎಂದು ಮೊಹಮ್ಮದ್-ಜಾವದ್ ಲಾರಿಜಾನಿ ಹೇಳಿಕೆ ನೀಡಿದ್ದಾರೆ.

2020ರಲ್ಲಿ ಇರಾನ್‌ನ ಮೇಜರ್ ಜನರಲ್ ಖಾಸಿಮ್ ಸೊಲೈಮಾನಿ ಅವರನ್ನು ಕ್ಷಿಪಣಿ ದಾಳಿ ನಡೆಸಿ ಕೊಲ್ಲುವಂತೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆದೇಶಿಸಿದ್ದರು.

> ಮೊಹಮ್ಮದ್-ಜಾವದ್ ಲಾರಿಜಾನಿ ಅವರ ಜೀವ ಬೆದರಿಕೆ ಬಗ್ಗೆ ನಾನು ತಲೆಕೆಡಿಸಿಕೊಳ್ಳುವುದಿಲ್ಲ. ನನಗೆ ಸೂರ್ಯ ಸ್ನಾನದಲ್ಲಿ ಆಸಕ್ತಿ ಇಲ್ಲ. ಆದರೆ ಇಂತಹ ಹೇಳಿಕೆಗಳಿಂದ ಉಭಯ ರಾಷ್ಟ್ರಗಳ ನಡುವಿನ ಸೂಕ್ಷ್ಮ ಸಂಬಂಧಗಳ ಮೇಲೆ ಏನು ಪರಿಣಾಮ ಬೀರಬಹುದು ಎಂಬುದನ್ನು ಇರಾನ್ ನಾಯಕರು ಮನಗಾಣಬೇಕು -ಟ್ರಂಪ್

ಅಂತದ್ದೇ ಡ್ರೋನ್ ದಾಳಿಯನ್ನು ಅವರೂ ಕೂಡ ಎದುರಿಸಬಹುದು ಎಂದು ಮೊಹಮ್ಮದ್-ಜಾವದ್ ಲಾರಿಜಾನಿ ಎಚ್ಚರಿಸಿದ್ದಾರೆ. ಇರಾನ್‌ನ ಪರಮಾಣು ಮತ್ತು ಮಿಲಿಟರಿ ಸೌಲಭ್ಯಗಳ ಮೇಲೆ ಅಮೆರಿಕ ಬಾಂಬ್ ದಾಳಿ ಮಾಡಿದ ಎರಡು ವಾರಗಳ ನಂತರ, ಇರಾನ್‌ನ ಉನ್ನತ ನಾಯಕರೊಬ್ಬರು ಡೊನಾಲ್ಡ್ ಟ್ರಂಪ್ ಅವರಿಗೆ ಜೀವ ಬೆದರಿಕೆ ಹಾಕಿರುವುದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ. ಇತ್ತೀಚಿಗೆ ಡೊನಾಲ್ಡ್ ಟ್ರಂಪ್ ಅವರು ಅಮೆರಿಕ ಅಧ್ಯಕ್ಷರಾಗಿ ಕೆಲಸ ಮಾಡುವುದು ಅಪಾಯಕಾರಿ ಎಂದು ಹೇಳಿದ್ದನ್ನು ಇಲ್ಲಿ ಸ್ಮರಿಸಬಹುದು.

## ಜಪಾನ್ ಮಿಲಿಟರಿ ಸಮೀಪ ಚೀನಾ ಫೈಟರ್ ಜೆಟ್ ಹಾರಾಟ



**ಟೋಕಿಯೊ:** ಚೀನಾ ತನ್ನ ಫೈಟರ್ ಜೆಟ್‌ಗಳನ್ನು ಜಪಾನಿನ ಗುಪ್ತಚರ ಸಂಗ್ರಹಣಾ ವಿಮಾನಗಳ ಹತ್ತಿರ ಅಸಹಜವಾಗಿ ಹಾರಿಸುವುದನ್ನು ನಿಲ್ಲಿಸುವಂತೆ ಎಚ್ಚರಿಕೆ ನೀಡಿದೆ. ಇದು ಪದೇ ಪದೇ ನಡೆಯುತ್ತಿದೆ ಇದನ್ನು ನಿಲ್ಲಿಸದಿದ್ದರೆ ಘರ್ಷಣೆಗೆ ಕಾರಣವಾಗಬಹುದು ಎಂದು ಅದು ಜಪಾನ್ ಹೇಳಿದೆ.ಜಪಾನ್ ವಾಯುಪಡೆಯ ಎಲೆಕ್ಟ್ರಾನಿಕ್‌ಗುಪ್ತಚರ ವಿಮಾನದ (98 ಅಡಿ) ಹತ್ತಿರದಲ್ಲಿ ಚೀನಾದ -ಎಫ್ 7 ಫೈಟರ್ ಬಾಂಬರ್ ಜೆಟ್ ಹಾರಾಟ ನಡೆಸಿದೆ ಎಂದು ಹೇಳಿದೆ ಜಪಾನ್‌ನ ರಕ್ಷಣಾ ಸಚಿವಾಲಯ ತಿಳಿಸಿದೆ. ಪೂರ್ವ ಚೀನಾ ಸಮುದ್ರದ ಜಪಾನಿನ ವಾಯುಪ್ರದೇಶದ ಹೊರಗೆ ಈ ಘಟನೆ ಸಂಭವಿಸಿದೆ.

ಇದರಿಂದ ಜಪಾನಿನ ಭಾಗಕ್ಕೆ ಯಾವುದೇ ಹಾನಿಯಾಗಿಲ್ಲ ಎಂದು ಸಚಿವಾಲಯ ಹೇಳಿದೆ.ಇದರ ಬಗ್ಗೆ ಚೀನಾ ಸದ್ಯಕ್ಕೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

ಚೀನಾದ ಸಾಮಾನ್ಯ ಮಿಲಿಟರಿ ಚಟುವಟಿಕೆಯ ಮೇಲೆ ಬೇಹುಗಾರಿಕೆ ನಡೆಸುತ್ತಿದೆ ಎಂದು ಬೀಜಿಂಗ್ ಆರೋಪಿಸಿದೆ ಮತ್ತು ಆದರೆ ಜಪಾನ್ ಇದನ್ನು ನಿರಾಕರಿಸಿದೆ ಮತ್ತು ತನ್ನ ಆಕ್ರಮಣಾ ಕ್ರಮಗಳನ್ನು ನಿಲ್ಲಿಸುವಂತೆ ಒತ್ತಾಯಿಸಿದೆ.

ವಿಶೇಷವಾಗಿ ಜಪಾನ್‌ನ ನೈಋತ್ಯ ಪ್ರದೇಶಗಳಲ್ಲಿ ಚೀನಾ ತನ್ನ ಮಿಲಿಟರಿ ನಿರ್ಮಾಣವನ್ನು ವೇಗಗೊಳಿಸುತ್ತಿರುವ ಬಗ್ಗೆ ಜಪಾನ್ ಕಳವಳ ವ್ಯಕ್ತಪಡಿಸಿದೆ. ತಡರಾತ್ರಿ, ಜಪಾನ್ ವಿದೇಶಾಂಗ ಸಚಿವಾಲಯದ ಉಪ ಸಚಿವ ಟಕೆಹಿರೊ ಫುನಕೋಶಿ ಜಪಾನ್‌ನಲ್ಲಿರುವ ಚೀನಾ ರಾಯಭಾರಿ ವೂ ಜಿಯಾಂಗ್ ಹಾವೊ ಅವರಿಗೆ ಆಕಸಿಕ ಘರ್ಷಣೆಗೆ ಕಾರಣವಾಗುವ ಇಂತಹ ಚಟುವಟಿಕೆಯನ್ನು ನಿಲ್ಲಿಸುವಂತೆ ಬೀಜಿಂಗ್ ಅನ್ನು ಬಲವಾಗಿ ವಿನಂತಿಸಿದ್ದಾರೆ ಮತ್ತು ಇದೇ ರೀತಿಯ ಕ್ರಮಗಳು ಪುನರಾವರ್ತನೆಯಾಗದಂತೆ ನೋಡಿಕೊಳ್ಳುವಂತೆ ಚೀನಾವನ್ನು ಬಲವಾಗಿ ಒತ್ತಾಯಿಸಿದ್ದಾರೆ.

## ಇಂಟರ್‌ನೆಟ್‌ನಲ್ಲಿ ವಿಶ್ವ ದಾಖಲೆ ದೃಷ್ಟಿಸಿದ ಜಪಾನ್

**ನವದೆಹಲಿ:** ಜಪಾನ್ ತನ್ನ ತಂತ್ರಜ್ಞಾನದಿಂದ ಜನರನ್ನು ಅಚ್ಚರಿಗೊಳಿಸುತ್ತಲೇ ಬಂದಿದೆ. ಈಗ ಜಪಾನಿನ ಸಂಶೋಧಕರು ಪ್ರತಿ ಸೆಕೆಂಡಿಗೆ 1.02 ಪೆಟಾಬಿಟ್‌ಗಳ ಅದ್ಭುತ ಇಂಟರ್ನೆಟ್ ವೇಗವನ್ನು ಸಾಧಿಸುವ ಮೂಲಕ ಹೊಸ ವಿಶ್ವ ದಾಖಲೆಯನ್ನು ಸೃಷ್ಟಿಸಿದ್ದಾರೆ. ಈ ವೇಗ ಅಮೆರಿಕ ಮತ್ತು ಭಾರತದ ಸರಾಸರಿ ಇಂಟರ್ನೆಟ್ ಗಿಂತ ಹೆಚ್ಚಿನದಾಗಿದೆ.

**ಅದ್ಭುತ ಇಂಟರ್ನೆಟ್ ವೇಗ**



ಜಪಾನ್‌ನ ರಾಷ್ಟ್ರೀಯ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ ಸಂಸ್ಥೆ (ಎನ್‌ಐಸಿಟಿ) ಸುಮಿಟೊಮೊ ಎಲೆಕ್ಟ್ರಿಕ್ ಮತ್ತು ಯುರೋಪಿಯನ್ ಪಾಲುದಾರರ ಸಹಯೋಗದೊಂದಿಗೆ ಈ ದಾಖಲೆ ಮುರಿಯುವ ಸಾಧನೆಯನ್ನು ಸಾಧಿಸಿದೆ. ಅವರ ವಿಶಿಷ್ಟ 19 ಕೋರ್ ಆಪ್ಟಿಕಲ್ ಫೈಬರ್ ಕೇಬಲ್ 1,808 ಕಿಲೋಮೀಟರ್‌ಗಳಿಗಿಂತ ಹೆಚ್ಚು ಶಕ್ತಿಶಾಲಿ ವೇಗದಲ್ಲಿ ಡೇಟಾವನ್ನು ರವಾನಿಸಿದೆ, ಇದು ಲಂಡನ್‌ನಿಂದ ರೋಮ್‌ಗೆ ಇರುವ ದೂರಕ್ಕೆ ಬಹುತೇಕ ಸಮಾನವಾಗಿದೆ. ಈ ವೇಗವು ಅಮೆರಿಕದಲ್ಲಿನ ಸರಾಸರಿ ಇಂಟರ್ನೆಟ್ ಸಂಪರ್ಕಕ್ಕಿಂತ 35 ಲಕ್ಷ ಪಟ್ಟು ವೇಗವಾಗಿದೆ ಮತ್ತು ಭಾರತದ ಸರಾಸರಿ ವೇಗವಾದ 63.55 ಎಂಬಿಪಿಎಸ್ ಗಿಂತ 1.6 ಕೋಟಿ ಪಟ್ಟು ವೇಗವಾಗಿದೆ. ಈ ವೇಗದೊಂದಿಗೆ, ಹೊಸ ತಂತ್ರಜ್ಞಾನವು ಸಂಪೂರ್ಣ ನೆಟ್‌ಫ್ಲಿಕ್ಸ್ ಲೈಬ್ರರಿಯನ್ನು ಒಂದು ಸೆಕೆಂಡಿಗಿಂತ ಕಡಿಮೆ ಅವಧಿಯಲ್ಲಿ ಡೌನ್‌ಲೋಡ್ ಮಾಡಬಹುದು ಅಥವಾ ವಾರ್‌ಝೋನ್‌ನಂತಹ ದೊಡ್ಡ 150ಜಿಬಿ ವಿಡಿಯೋ ಗೇಮ್ ಕ್ಷಣಾರ್ಧದಲ್ಲಿ ಡೌನ್‌ಲೋಡ್ ಮಾಡಬಹುದು. ಈ ಪರೀಕ್ಷೆಯಲ್ಲಿ ಸಾಧಿಸಿದ 1,020,000,000 ಎಂಬಿಪಿಎಸ್‌ಗೆ ಹೋಲಿಸಿದರೆ, ಅಮೆರಿಕದಲ್ಲಿನ ಸರಾಸರಿ ಬ್ರಾಡ್‌ಬ್ಯಾಂಡ್ ವೇಗವು 290 ಎಂಬಿಪಿಎಸ್ ಗಿಂತ ಕಡಿಮೆಯಿದೆ.

**ಕೇಬಲ್‌ನ ವಿನ್ಯಾಸದಿಂದ ಈ ಪ್ರಗತಿಯು ಬಂದಿತು;** ಒಂದೇ ಬೆಳಕಿನ ಮಾರ್ಗವನ್ನು ಬಳಸುವ ಬದಲು, ಫೈಬರ್ ಅಸ್ತಿತ್ವದಲ್ಲಿರುವ ಕೇಬಲ್‌ಗಳಂತೆಯೇ ಅದೇ ಪ್ರಮಾಣಿತ ವ್ಯಾಸದಲ್ಲಿ 19 ಪ್ರತ್ಯೇಕ ಕೋರ್‌ಗಳನ್ನು ಸಂಯೋಜಿಸುತ್ತದೆ. ಇದು ಅಸ್ತಿತ್ವದಲ್ಲಿರುವ ಮೂಲಸೌಕರ್ಯದೊಂದಿಗೆ ಕೆಲಸ ಮಾಡಬಹುದಾದ ಡೇಟಾ ಪ್ರಸರಣಕ್ಕಾಗಿ 19-ಲೇನ್ ಸೂಪರ್‌ಹೈವೇ ಅನ್ನು ಸೃಷ್ಟಿಸುತ್ತದೆ.

## ಜು.14 ರಂದು ಬಾಹ್ಯಾಕಾಶದಿಂದ ಭೂಮಿಗೆ ಬರಲಿದ್ದಾರೆ ಶುಕ್ಲಾ

**ವಾಷಿಂಗ್ಟನ್:** ಭಾರತೀಯ ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರನ್ನು ಒಳಗೊಂಡ ಆಕ್ಸಿಯಮ್ -4 ಮಿಷನ್ ಜುಲೈ 14 ರಂದು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಹಿಂತಿರುಗಲಿದೆ ಎಂದು ಕಂಪನಿಯು ಸಾಮಾಜಿಕ ಮಾಧ್ಯಮದಲ್ಲಿ ಪ್ರಕಟಿಸಿದೆ.

ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ. (ಆಕ್ಸಿಯಮ್ ಸ್ಪೇಸ್) ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ. (ಆಕ್ಸಿಯಮ್ ಸ್ಪೇಸ್) ಅನುಕೂಲಕರ ಹವಾಮಾನ ಪರಿಸ್ಥಿತಿಗಳು ಬಾಕಿ ಇರುವುದರಿಂದ, ಆಕ್ಸಿಯಮ್ ಮಿಷನ್ 4 ಸಿಬ್ಬಂದಿ ಜುಲೈ 14 ರ ಸೋಮವಾರ ಬೆಳಿಗ್ಗೆ 7:05 (ಸಂಜೆ 4.35 ) ಕ್ಕೆ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ಅನ್‌ಡಾಕ್ ಮಾಡಲು ಸಿದ್ಧರಾಗಿದ್ದಾರೆ ಎಂದು ಆಕ್ಸಿಯಮ್ ಸ್ಪೇಸ್ ಇಂಕ್‌ನಲ್ಲಿ ತಿಳಿಸಿದೆ.

ಈ ವಾರದ ಆರಂಭದಲ್ಲಿ, ಪೋಲಿಷ್ ಗಗನಯಾತ್ರಿ ಉಜ್ನಾನ್ಸ್ಕಿ-ವಿಸ್ನಿವ್ಸ್ಕಿಯನ್ನು ನಿಯೋಜಿಸಿರುವ



ಯುರೋಪಿಯನ್ ಬಾಹ್ಯಾಕಾಶ ಸಂಸ್ಥೆ, ಸಿಬ್ಬಂದಿ ಸದಸ್ಯರಿಗೆ ಹಿಂದಿರುಗುವ ದಿನಾಂಕವಾಗಿ ಜುಲೈ 14 ಅನ್ನು ಸೂಚಿಸಿದೆ.ವೇಳಾಪಟ್ಟಿಯ ಪ್ರಕಾರ, ಕೆಳ ಕಕ್ಷೆಯ ಪ್ರಯೋಗಾಲಯದಲ್ಲಿ ಅವರ ವಾಸ್ತವ್ಯದ ಅವಧಿ ಎರಡು ವಾರಗಳ ಕಾಲ ಇತ್ತು, ಅದು ಜುಲೈ 10 ರಂದು ಕೊನೆಗೊಳ್ಳಬೇಕಿತ್ತು. ಸ್ಪೇಸ್ ಎಕ್ಸ್ ಡ್ರ್ಯಾಗನ್ ಬಾಹ್ಯಾಕಾಶ ನೌಕೆ ಗ್ರೇಸ್‌ನಲ್ಲಿ ಡಾಕ್ ಮಾಡಿದಾಗಿನಿಂದ ಜೂನ್ 26 ರಂದು -4 ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಶುಕ್ಲಾ, 31 ದೇಶಗಳನ್ನು ಪ್ರತಿನಿಧಿಸುವ 60 ಪ್ರಯೋಗಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಇವು ಮುಂದುವರಿದ ವೈಜ್ಞಾನಿಕ ಅಧ್ಯಯನಗಳನ್ನು ಹೊಂದಿವೆ, ಹೊಸ ತಂತ್ರಜ್ಞಾನಗಳನ್ನು ಪರೀಕ್ಷಿಸಿವೆ ಮತ್ತು ಜಾಗತಿಕ ಸಂಪರ್ಕ ಪ್ರಯತ್ನಗಳಲ್ಲಿ ತೊಡಗಿಸಿಕೊಂಡಿವೆ ಎಂದು ಆಕ್ಸಿಯಮ್ ಸ್ಪೇಸ್ ಹೇಳಿದೆ.

> ಅಮೆರಿಕ ಮೂಲದ ಬಾಹ್ಯಾಕಾಶ ಸಂಸ್ಥೆಯು ಕಮಾಂಡರ್ ಪೆಗ್ಗಿ ವಿಟ್ಸನ್, ಪೈಲಟ್ ಶುಭಾಂಶು ಶುಕ್ಲಾ ಮತ್ತು ಮಿಷನ್ ಸ್ಪೆಷಲಿಸ್ಟ್‌ಗಳಾದ ಸ್ಲಾವೋಸ್ಜ್ ಸುವೇವ್ ಉಜ್ನಾನ್ಸ್ಕಿ-ವಿಸ್ನಿವ್ಸ್ಕಿ ಮತ್ತು ಟಿಬೋರ್ ಕಾಪು ಕಕ್ಷೆಯಲ್ಲಿ ತಮ್ಮ ಕೊನೆಯ ದಿನಗಳನ್ನು ಸದುಪಯೋಗಪಡಿಸಿಕೊಳ್ಳುತ್ತಿದ್ದಾರೆ, ಬಾಹ್ಯಾಕಾಶ ಪರಿಶೋಧನೆಯ ಭವಿಷ್ಯವನ್ನು ರೂಪಿಸುವ ಮತ್ತು ಭೂಮಿಯ ಮೇಲಿನ ಜೀವನವನ್ನು ಸುಧಾರಿಸುವ ವ್ಯಾಪಕ ಶ್ರೇಣಿಯ ಪ್ರಯೋಗಗಳನ್ನು ಮುಂದಕ್ಕೆ ಸಾಗಿಸುತ್ತಿದ್ದಾರೆ ಎಂದು ಹೇಳಿದೆ.

## ಪಾಕಿಸ್ತಾನದ ಬಲೂಚಿಸ್ತಾನದಲ್ಲಿ 9 ಪ್ರಯಾಣಿಕರ ಹತ್ಯೆ

**ಬಲೂಚಿಸ್ತಾನ:** ಪಾಕಿಸ್ತಾನದ ಹಿಂಸಾಪೀಡಿತ ಬಲೂಚಿಸ್ತಾನ ಪ್ರಾಂತ್ಯದಲ್ಲಿ ಬಸ್‌ನಿಂದ ಪ್ರಯಾಣಿಕರ ಇಳಿಸಿದ ನಂತರ ದಂಗೆಕೋರರು 9 ಜನರನ್ನು ಗುಂಡು ಹಾರಿಸಿ ಕೊಂದಿದ್ದಾರೆ. ಪಂಜಾಬ್ ಪ್ರಾಂತ್ಯದ ಝೋಬ್ ಪ್ರದೇಶದ ರಾಷ್ಟ್ರೀಯ ಹೆದ್ದಾರಿಯಲ್ಲಿ ಈ ಘಟನೆ ನಡೆದಿದೆ ಎಂದು ಸಹಾಯಕ ಆಯುಕ್ತ ಝೋಬ್ ನವೀದ್ ಆಲಂ ಹೇಳಿದ್ದಾರೆ.

ಶಸ್ತ್ರಸಜ್ಜಿತ ದಂಗೆಕೋರರು ಪ್ರಯಾಣಿಕರ ಗುರುತಿನ ಚೀಟಿಗಳನ್ನು ಪರಿಶೀಲಿಸಿ ಅವರಲ್ಲಿ ಒಂಬತ್ತು ಜನರನ್ನು ಕ್ವೆಟ್ಟಾದಿಂದ ಲಾಹೋರ್‌ಗೆ ಹೋಗುತ್ತಿದ್ದವರನ್ನು ಗುರಿಯಾಗಿಸಿ ಅವರನ್ನು ಗುಂಡಿಕ್ಕಿ ಕೊಂದ್ದಾರೆ. ಎಲ್ಲಾ ಒಂಬತ್ತು ಮಂದಿ ಪಂಜಾಬ್ ಪ್ರಾಂತ್ಯದ ವಿವಿಧ ಭಾಗಗಳಿಗೆ ಸೇರಿದವರು ಎಂದು ಆಲಂ ಹೇಳಿದರು.

ದಂಗೆಕೋರರು ಪಂಜಾಬ್ ಪ್ರಾಂತ್ಯಕ್ಕೆ ಸೇರಿದ ಜನರು ಮತ್ತು ಬಲೂಚಿಸ್ತಾನದ ವಿವಿಧ ಹೆದ್ದಾರಿಗಳಲ್ಲಿ ಚಲಿಸುವ ಪ್ರಯಾಣಿಕ ಬಸ್‌ಗಳನ್ನು ಗುರಿಯಾಗಿಸಿಕೊಂಡಿರುವುದು ಇದೇ ಮೊದಲಲ್ಲ ಎಂದು ಸುದ್ದಿ ಮಾಧ್ಯಮಕ್ಕೆ ತಿಳಿಸಿದ್ದಾರೆ. ಯಾವುದೇ ಗುಂಪು ದಾಳಿಯ ಹೊಣೆಯನ್ನು ಹೊತ್ತುಕೊಂಡಿಲ್ಲ, ಹಿಂದೆ, ಜನಾಂಗೀಯ ಬಲೂಚ್ ಭಯೋತ್ಪಾದಕ ಗುಂಪುಗಳು ಪಂಜಾಬ್ ಜನರ ವಿರುದ್ಧಇಂತಹದಾಳಿಗಳನ್ನು ನಡೆಸಿದ್ದವು.



ಏತನ್ಮಧ್ಯೆ, ಕ್ವೆಟ್ಟಾ, ಲೊರಾಲೈ ಮತ್ತು ಮಸ್ತಂಗ್‌ನಲ್ಲಿ ದಂಗೆಕೋರರು ದಾಳಿಗಳನ್ನು ನಡೆಸಿದ್ದಾರೆ, ಆದರೆ ಬಲೂಚಿಸ್ತಾನ್ ಸರ್ಕಾರದ ವಕ್ತಾರ ಶಾಹಿದ್ ರಿಂಡ್ ಭದ್ರತಾ ಪಡೆಗಳು ಈ ದಾಳಿಗಳನ್ನು ಹಿಮ್ಮೆಟ್ಟಿಸಿದ್ದಾರೆ ಎಂದು ಹೇಳಿದ್ದಾರೆ.

ಲೂಚಿಸ್ತಾನ್ ಮಾಧ್ಯಮಗಳಲ್ಲಿನ ದೃಢೀಕರಿಸದ ವರದಿಗಳ ಪ್ರಕಾರ, ದಂಗೆಕೋರರು ರಾತ್ರಿಯ ಸಮಯದಲ್ಲಿ ಪ್ರಾಂತ್ಯದ ಹಲವಾರು ಸ್ಥಳಗಳಲ್ಲಿ ದಾಳಿ ನಡೆಸಿದ್ದಾರೆ ಮತ್ತು ಚೆಕ್ ಪೋಸ್ಟ್‌ಗಳು, ಸರ್ಕಾರಿ ಕಚೇರಿಗಳು ,ಪೊಲೀಸ್ ಠಾಣೆಗಳು, ಬ್ಯಾಂಕುಗಳು ಮತ್ತು ಸಂವಹನ ಗೋಪುರಗಳ ಮೇಲೆ ದಾಳಿ ಮಾಡುವ ಮೂಲಕ ಭದ್ರತಾ ಪಡೆಗಳ ಮೇಲೆ ಗುಂಡಿನ ದಾಳಿ ತೀವ್ರಗೊಳಿಸಿದ್ದಾರೆ.

## ಆಧಾರ್ ಯಾಕೆ ಬೇಡ? ಈಗ ಈ ಪ್ರಕ್ರಿಯೆ ಬೇಕಿತ್ತಾ?: ಸುಪ್ರೀಂ ಕೋರ್ಟ್

● ಬಿಹಾರ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಚುನಾವಣಾ ಆಯೋಗಕ್ಕೆ ಸುಪ್ರೀಂ ಕೋರ್ಟ್ ಚಾಟಿ

**ಹೊಸದಿಲ್ಲಿ :** ಬಿಹಾರದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ರಾಷ್ಟ್ರ ರಾಜಕಾರಣದಲ್ಲಿ ಬಿರುಗಾಳಿಯನ್ನು ಸೃಷ್ಟಿಸಿದೆ. ಈ ವಿಚಾರವಾಗಿ ಚುನಾವಣಾ ಆಯೋಗಕ್ಕೆ ಸುಪ್ರೀಂ ಕೋರ್ಟ್ ಪ್ರಶ್ನೆಗಳ ಮೇಲೆ ಪ್ರಶ್ನೆಗಳನ್ನು ಕೇಳಿದೆ. ಮತದಾನದ ಹಕ್ಕು ಮತ್ತು ಪೌರತ್ವದ ನಿರ್ಧಾರಗಳ ಬಗ್ಗೆ ಸುಪ್ರೀಂ ಕೋರ್ಟ್ ಗಂಭೀರ ಪ್ರಶ್ನೆಗಳನ್ನು ಎತ್ತಿದೆ.

**ಪೌರತ್ವದ ನಿರ್ಧಾರಗಳ ಬಗ್ಗೆ ಸುಪ್ರೀಂ ಗಂಭೀರ ಪ್ರಶ್ನೆ**

ಅದರಲ್ಲೂ ಆಧಾರ್ ಕಾರ್ಡ್ ಅನ್ನು ಹೊರಗಿಟ್ಟಿರುವುದರ ಬಗ್ಗೆ ಸುಪ್ರೀಂ ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ. ಪ್ರಮುಖವಾಗಿ ಪೌರತ್ವದ ವಿಚಾರ ಗೃಹ ಇಲಾಖೆಗೆ ಸಂಬಂಧಪಟ್ಟಿದ್ದು, ನೀವೇಕೆ ಅದನ್ನು ಟಚ್ ಮಾಡಿದ್ರಿ ಎಂದು ಪ್ರಶ್ನಿಸಿದೆ. ಅದರ ಜೊತೆ ನಿಮ್ಮ ಈ ಪ್ರಕ್ರಿಯೆಯಲ್ಲಿ ಯಾವುದೇ ಸಮಸ್ಯೆ ಇಲ್ಲ.. ಆದರೆ, ಸಮಯವೇ ದೊಡ್ಡ ಸಮಸ್ಯೆಯಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಇದಕ್ಕೆ ಕೌಂಟರ್ ಅಫಿಡವಿಡ್ ಸಲ್ಲಿಸಲು ಚುನಾವಣಾ ಆಯೋಗ ಜುಲೈ 21ರವರೆಗೆ ಸಮಯ ತೆಗೆದುಕೊಂಡಿದ್ದು, ಯಾವ ರೀತಿ ಉತ್ತರ ಕೊಡುತ್ತದೆ ಎಂಬುದನ್ನು ಕಾದುನೋಡಬೇಕಿದೆ.

ಹೌದು, ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಭಾರೀ ವಿವಾದ ಸೃಷ್ಟಿಸಿದೆ. ಈ ಬಗ್ಗೆ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುಧಾಂಶು ಧುಲಿಯಾ ಹಾಗೂ ನ್ಯಾಯಮೂರ್ತಿ ಜೋಯಮಲ್ಯ ಭಾಗ್ಚಿ ಇದ್ದ ಸುಪ್ರೀಂ ಕೋರ್ಟ್‌ನ ಪೀಠ ಚುನಾವಣಾ ಆಯೋಗಕ್ಕೆ ಚಾಟಿ ಬೀಸಿದೆ. ನ್ಯಾಯಮೂರ್ತಿ ಸುಧಾಂಶು ಧುಲಿಯಾ ಅವರು ನಿಮ್ಮ ಪ್ರಕ್ರಿಯೆಯಲ್ಲಿ ಯಾವುದೇ ಸಮಸ್ಯೆ ಇಲ್ಲ. ಆದರೆ, ಸಮಯದ್ದೇ ಸಮಸ್ಯೆ, ಈಗ ಮಾಡುತ್ತಿರುವುದು ಸರಿಯಲ್ಲ.. ಚುನಾವಣೆಯ ಹೊಸ್ತಿಲಲ್ಲಿ ಒಬ್ಬ ವ್ಯಕ್ತಿಯು ತನ್ನ ಮತದಾನದ ಹಕ್ಕನ್ನು ಕಳೆದುಕೊಳ್ಳುತ್ತಾನೆ. ಮತ್ತು ಮತದಾನಕ್ಕೂ ಮುನ್ನ ಅದನ್ನು ಪ್ರಶ್ನಿಸಲು ಆತನಿಗೆ



ಅವಕಾಶವೇ ಸಿಗುವುದಿಲ್ಲ ಎಂದು ನ್ಯಾಯಮೂರ್ತಿ ಸುಧಾಂಶು ಧುಲಿಯಾ ಸ್ಪಷ್ಟಪಡಿಸಿದರು.

ಚುನಾವಣಾ ಆಯೋಗದ ಪರ ವಾದ ಮಂಡಿಸಿದ ಹಿರಿಯ ವಕೀಲ ರಾಕೇಶ್ ದ್ವಿವೇದಿ, ಪರಿಷ್ಕರಣೆ ಪೂರ್ಣಗೊಳ್ಳುವವರೆಗೆ ತೀರ್ಪು ನೀಡಬಾರದು ಎಂದು ಮನವಿ ಮಾಡಿದರು. ಆಗ ನ್ಯಾಯಮೂರ್ತಿಗಳು ಮತದಾರರ ಪಟ್ಟಿ ಅಂತಿಮಗೊಂಡ ನಂತರ ನ್ಯಾಯಾಲಯಗಳು ಅದನ್ನು ಮುಟ್ಟುವುದಿಲ್ಲ. ಅಂದರೆ, ಮತದಾನದ ಹಕ್ಕಿನಿಂದ ವಂಚಿತರಾದ ವ್ಯಕ್ತಿಗೆ ಚುನಾವಣೆಗೆ ಮುನ್ನ ಅದನ್ನು ಪ್ರಶ್ನಿಸುವ ಆಯ್ಕೆಯೇ ಇರುವುದಿಲ್ಲ ಎಂದು ಎಚ್ಚರಿಸಿದರು.



**ಪ್ರಕ್ರಿಯೆ ತಪ್ಪಲ್ಲ. ಆದರೆ, ಸಮಯ ಸರಿಯಿಲ್ಲ!**

ನ್ಯಾಯಮೂರ್ತಿ ಜೋಯ್ಮಾಲಾ ಬಾಗ್ಚಿ ಅವರು, ಅನರ್ಹರನ್ನು ಮತದಾರರ ಪಟ್ಟಿಯಿಂದ ತೆಗೆಯುವುದು ತಪ್ಪಲ್ಲ. ಆದರೆ, ಅದನ್ನು ಚುನಾವಣೆ ಹೊರತಾದ ಸಮಯದಲ್ಲಿ ನಡೆಸಬೇಕು ಎಂದು ಸಲಹೆ ನೀಡಿದರು. ಇದು ಪ್ರಜಾಪ್ರಭುತ್ವದ ಬೇರುಗಳಿಗೆ ಸಂಬಂಧಿಸಿದ ಅತ್ಯಂತ ಪ್ರಮುಖ ವಿಷಯವಾಗಿದೆ ಎಂದ ಸುಪ್ರೀಂ ಕೋರ್ಟ್ ಚುನಾವಣಾ ಆಯೋಗಕ್ಕೆ ಮೂರು ಪ್ರಮುಖ ಪ್ರಶ್ನೆಗಳನ್ನು ಕೇಳಿದೆ. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ನಡೆಸಲು ಆಯೋಗಕ್ಕೆ ಇರುವ ಅಧಿಕಾರದ ಬಗ್ಗೆ ವಿವರಿಸಿ. ಅದಾದ ಬಳಿಕ ಈ ಪರಿಶೀಲನಾ ಕಾರ್ಯವಿಧಾನದ ಸಿಂಧುತ್ವವನ್ನು ವಿವರಿಸಿ. ಈ ಪರಿಷ್ಕರಣೆಯ ಸಮಯದ ಬಗ್ಗೆ ವಿವರಿಸಿ, ಅದರಲ್ಲೂ ಚುನಾವಣೆಗೂ ಮುನ್ನ ಯಾಕೆ ಮಾಡ್ತಿದ್ದೀರಿ ಎಂದು ಪ್ರಶ್ನಿಸಿದೆ. ಪ್ರಜಾಪ್ರತಿನಿಧಿ ಕಾಯ್ದೆಯ ಯಾವ ವಿಭಾಗವು ಈ ವಿಶೇಷ ತೀವ್ರ ಪರಿಷ್ಕರಣೆಗೆ ಅವಕಾಶ ನೀಡುತ್ತದೆ ಎಂದು ನ್ಯಾಯಾಲಯ ಪ್ರಶ್ನಿಸಿತು. ಕಾಯ್ದೆಯಲ್ಲಿ ಸಂಕ್ಷಿಪ್ತ ಪರಿಷ್ಕರಣೆ ಅಥವಾ ತೀವ್ರ ಪರಿಷ್ಕರಣೆ ಇದೆ. ಈ ವಿಶೇಷ ತೀವ್ರ ಪರಿಷ್ಕರಣೆ ಎಲ್ಲಿದೆ? ಎಂದು ಆಯೋಗವನ್ನು ಸುಪ್ರೀಂ ಕೋರ್ಟ್ ಕೇಳಿದೆ. ಅರ್ಜಿದಾರರ ಪರ ವಕೀಲರು ಆಧಾರ್ ಅನ್ನು ಏಕೆ ಸ್ವೀಕರಿಸುತ್ತಿಲ್ಲ ಎಂದು ಕೇಳಿದರು. ಅದಲ್ಲದೇ ದಶಕಗಳಿಂದ ಮತದಾರರ ಪಟ್ಟಿಯಲ್ಲಿರುವವರನ್ನು ಪರಿಶೀಲನೆಗೆ ಒಳಪಡಿಸುತ್ತಿರುವುದನ್ನು ಪ್ರಶ್ನಿಸಿದರು.

ಈ ಬಗ್ಗೆ ಕೂಡ ಸುಪ್ರೀಂ ಕೋರ್ಟ್ ಪ್ರಶ್ನಿಸಿದ್ದು, ಇತರ ದಾಖಲೆಗಳನ್ನು ನೀಡಲು ಸರ್ಕಾರವೇ ಒತ್ತಾಯಿಸುವ ಆಧಾರ್ ಕಾರ್ಡ್ ಅನ್ನು ನೀವು ಗುರುತಿಗಾಗಿ ಏಕೆ ಪರಿಗಣಿಸುತ್ತಿಲ್ಲ ಎಂದು ಆಯೋಗವನ್ನು ಪ್ರಶ್ನಿಸಿದೆ.



## ಅಶ್ಲೀಲ ಸನ್ನೆ ತೋರಿಸಿದ ವ್ಯಕ್ತಿಗೆ ಬಿತ್ತು ಏಟು

ಬಾಲಿವುಡ್ ನಟಿ ಫಾತಿಮಾ ಸನಾ ಷೇಕ್ ಪ್ರತಿಭಾವಂತ ನಟಿಯರಲ್ಲಿ ಒಬ್ಬರು. ಆದರೆ ಅವರಿಗೆ ಸೂಕ್ತ ಅವಕಾಶಗಳು ಹೆಚ್ಚಾಗಿ ಸಿಗುತ್ತಿಲ್ಲ. ಫಾತಿಮಾ ಒಳ್ಳೆಯ ನಟಿ ಆಗಿರುವ ಜೊತೆಗೆ ಗಟ್ಟಿಗಿತ್ತಿಯೂ ಹೌದು. ತಮ್ಮನ್ನು ಕೆಟ್ಟ ಉದ್ದೇಶದಿಂದ ಹಿಂಬಾಲಿಸಿದ ಯುವಕನೊಬ್ಬನಿಗೆ ಬುದ್ಧಿ ಕಲಿಸಿದ ಸಂಘಟನೆಯನ್ನು ಅವರು ಹಂಚಿಕೊಂಡಿದ್ದಾರೆ. ನಟಿ ಫಾತಿಮಾ ಸನಾ ಶೇಖ್, ಆಮಿರ್ ಖಾನ್ ನಟನೆಯ 'ದಂಗಲ್' ಚಿತ್ರದ ಮೂಲಕ ಬಾಲಿವುಡ್‌ಗೆ ಪಾದಾರ್ಪಣೆ ಮಾಡಿದರು. ಈ ಚಿತ್ರದ ಮೂಲಕ ಅವರು ಮನೆಮಾತಾದರು. ಅವರು ಈ ಸಿನಿಮಾದಲ್ಲಿ ದಿಟ್ಟತನ ತೋರಿಸಿದ್ದರು. ಚಿತ್ರದಲ್ಲಿರುವಂತೆಯೇ ನಿಜ ಜೀವನದಲ್ಲೂ ಅವರು ದಿಟ್ಟ ನಟಿ. ಇತ್ತೀಚಿನ ಸಂದರ್ಶನವೊಂದರಲ್ಲಿ ಫಾತಿಮಾ ತಮಗೆ ಸಂಭವಿಸಿದ ಲೈಂಗಿಕ ದೌರ್ಜನ್ಯದ ಘಟನೆಯ ಬಗ್ಗೆ ಮಾತನಾಡಿದ್ದಾರೆ. ಒಬ್ಬ ವ್ಯಕ್ತಿ ಅವರನ್ನು ಮನೆವರೆಗೆ ಹಿಂಬಾಲಿಸಿದ. ಅಷ್ಟೇ ಅಲ್ಲ, ಅವನು ಆಕೆಯ ಕಿವಿಗೂ ಹೊಡೆದ.

ಹಾಟರ್‌ಫ್ಲೈಗೆ ನೀಡಿದ ಸಂದರ್ಶನದಲ್ಲಿ ಫಾತಿಮಾ ತಮಗಾದ ಆಘಾತಕಾರಿ ಅನುಭವವನ್ನು ಹಂಚಿಕೊಂಡರು. ಅವಳನ್ನು ಕೀಟಲೆ ಮಾಡಿದ ವ್ಯಕ್ತಿ ಅವಳ ಮೇಲೆ ಕೈ ಎತ್ತಿದ್ದ. ಈ ಘಟನೆ ಕೋವಿಡ್ ಸಾಂಕ್ರಾಮಿಕ ಸಮಯದಲ್ಲಿ ನಡೆದಿದೆ.

## ಕೊತ್ತಲವಾಡಿ ಟೈಟಲ್ ಟ್ರ್ಯಾಕ್ ರಿಲೀಸ್



**ಕಂಪ್ಲೀಟ್ ಮಾಸ್ ಗೆಟಪ್**

ಯಶ್ ತಾಯಿ ಪುಷ್ಪಾ ಅರುಣ್ ಕುಮಾರ್ ನಿರ್ಮಾಣದ ಚೊಚ್ಚಲ ಚಿತ್ರ ಕೊತ್ತಲವಾಡಿ ಸಿನಿಮಾದ ಟೀಸರ್ ಪ್ರೇಕ್ಷಕ ವಲಯದಿಂದ ಭರಪೂರ ಮೆಚ್ಚುಗೆ ಪಡೆದುಕೊಂಡಿದೆ. ಇದೀಗ ಚಿತ್ರತಂಡ ಕೊತ್ತಲವಾಡಿ ಟೈಟಲ್ ಟ್ರ್ಯಾಕ್ ಅನಾವರಣ ಮಾಡಿದೆ. ಕಿನ್ನಾಲ್ ರಾಜ್ ಸಾಹಿತ್ಯ ಬರೆದಿರುವ ಗೀತೆಗೆ ವ್ಯಾಸರಾಜ್ ಸೋಸಲೆ ಕಂಠ ಕುಣಿಸಿದ್ದಾರೆ. ವಿಕಾಸ್ ವಸಿಷ್ಠ ಸಂಗೀತ ಹಾಡಿನ ತೂಕ ಹೆಚ್ಚಿಸಿದೆ. ನಾಯಕನ ಶೌರ್ಯವನ್ನು ವರ್ಣಿಸುವ ಹಾಡು ಸಖತ್ ಪವರ್ ಫುಲ್ ಆಗಿ ಮೂಡಿ ಬಂದಿದೆ. ಪುಷ್ಪ ಅರುಣ್ ಕುಮಾರ್ ತಮ್ಮದೇ ಪ್ರೊಡಕ್ಷನ್ ನಡಿ ಕೊತ್ತಲವಾಡಿ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ. ಚಿತ್ರಕ್ಕೆ ಯುವ ಪ್ರತಿಭೆ ಶ್ರೀರಾಜ್ ಆಕ್ಷನ್ ಕಟ್ ಹೇಳಿದ್ದು, ಪೃಥ್ವಿ ಅಂಬರ್ ನಾಯಕನಾಗಿ ಹಾಗೂ ಕಿರುತೆರೆ ನಟಿ ಕಾವ್ಯಾ ಶೈವ ನಾಯಕಿಯಾಗಿ ನಟಿಸುತ್ತಿದ್ದಾರೆ. ಗೋಪಾಲಕೃಷ್ಣ ದೇಶಪಾಂಡೆ, ರಾಜೇಶ್ ನಟರಂಗ ಅವರಂತಹ ಅನುಭವಿ ತಾರಾಬಳಗ ಚಿತ್ರದಲ್ಲಿದೆ. ಇಲ್ಲಿಯವರೆಗೂ ಲವರ್ ಬಾಯ್ ಆಗಿ ಕಾಣಿಸಿಕೊಳ್ಳುತ್ತಿದ್ದ ಪೃಥ್ವಿ 'ಕೊತ್ತಲವಾಡಿ' ಚಿತ್ರದಲ್ಲಿ ಕಂಪ್ಲೀಟ್ ಮಾಸ್ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಸಿನಿಮಾದ ಹಾಡುಗಳಿಗೆ ವಿಕಾಸ್ ವಸಿಷ್ಠ ಸಂಗೀತ ಸಂಯೋಜಿಸಿದ್ದಾರೆ.



## ಥೈಲ್ಯಾಂಡ್‌ಗೆ ಹಾರಲಿದ್ದಾರೆ ದರ್ಶನ್

ಕೊಲೆ ಕೇಸ್ ಜೊತೆ ಸಿನಿಮಾ ವಿಚಾರದಲ್ಲೂ ದರ್ಶನ್ ಸೌಂಡ್ ಜೋರಾಗಿದೆ. ಇದೀಗ ಡೆವಿಲ್ ಚಿತ್ರದ ಶೂಟಿಂಗ್ ಮುಗಿಸಿರುವ ದರ್ಶನ್ ಬಾಕಿ ಇರುವ ಒಂದೇ ಒಂದು ಹಾಡಿನ ಚಿತ್ರೀಕರಣಕ್ಕಾಗಿ ವಿದೇಶಕ್ಕೆ ತೆರಳಲು ಅನುಮತಿ ಪಡೆದುಕೊಂಡಿದ್ದಾರೆ. ಕೋರ್ಟ್ ಆದೇಶದಂತೆ ದರ್ಶನ್ ಸೋಮವಾರ ಥಾಯ್ಲೆಂಡ್‌ಗೆ ತೆರಳಲಿದ್ದಾರೆ. ದರ್ಶನ್ ಅವರು ಗುರುವಾರ ರಾತ್ರಿ ಸಿನಿಮಾ ತಂಡದ ಜೊತೆ ಥೈಲ್ಯಾಂಡ್ ಹೋಗಬೇಕಿತ್ತು. ಆದರೆ ಶೂಟಿಂಗ್ ತಂಡ ಮಾತ್ರ ಥಾಯ್ಲೆಂಡ್ ವಿಮಾನ ಹತ್ತಿರುವ ಮಾಹಿತಿ ಸಿಕ್ಕಿದೆ.



ಡೆವಿಲ್ ಚಿತ್ರದ ಡ್ಯುಯೆಟ್ ಹಾಡೊಂದರ ಚಿತ್ರೀಕರಣಕ್ಕೆ ಥೈಲ್ಯಾಂಡ್ ದೇಶದ ಬ್ಯಾಂಕಾಕ್, ಪುಕೆಟ್, ಕ್ರಾಬಿಯಲ್ಲಿ ದರ್ಶನ್ ಹಾಡಿನ ಚಿತ್ರೀಕರಣದಲ್ಲಿ ಭಾಗಿಯಾಗಲಿದ್ದು ಇದು ಕೊಲೆ ಪ್ರಕರಣದ ಬಳಿಕ ದರ್ಶನ್ ತೆರಳುತ್ತಿರುವ ಮೊದಲ ವಿದೇಶ ಪ್ರಯಾಣ. ಡೆವಿಲ್ ಶೂಟಿಂಗ್‌ನಲ್ಲಿ ದರ್ಶನ್ ಸೋಮವಾರ ಟಿಕೆಟ್ ಬುಕ್ ಆಗಿದ್ದು ಸಿನಿಮಾ ಟೀಮ್ ಜೊತೆಗೂಡಿ ತೆರಳಲಿದ್ದಾರೆ.

## ಸಂಜು ಬಸಯ್ಯ ಪತ್ನಿಗೆ ಅಶ್ಲೀಲ ಮೆಸೇಜ್

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ಇಡೀ ರಾಜ್ಯಾದ್ಯಂತ ಸದ್ದು ಮಾಡಿತ್ತು. ನಟಿ ಹಾಗೂ ದರ್ಶನ್ ಆಪ್ತೆ ಪವಿತ್ರಾ ಗೌಡ ಅವರಿಗೆ ಅಶ್ಲೀಲ ಮೆಸೇಜ್ ಕಳಿಸಿದ್ದಕ್ಕೆ ದರ್ಶನ್ ಅಂಡ್ ಗ್ಯಾಂಗ್ ಭೀಕರವಾಗಿ ಹತ್ಯೆ ನಡೆಸಿದ ಆರೋಪ ಈಗಲೂ ಇದೆ. ಇದೇ ರೀತಿ ಪ್ರಕರಣವೊಂದು ಈಗ ಬೆಳಗಾವಿಯಲ್ಲಿ ನಡೆದಿದೆ. ಆದ್ರೆ ಪತ್ನಿಗೆ ಇನ್ಸ್ಟಾಗ್ರಾಮ್ ಅಶ್ಲೀಲವಾಗಿ ಮೆಸೇಜ್ ಕಳಿಸಿದ್ದ ಯುವಕನಿಗೆ ಬುದ್ಧಿ ಹೇಳಿ ಕಳುಹಿಸುವ ಮೂಲಕ ಹಾಸ್ಯನಟ ಸಂಜು ಬಸಯ್ಯ ದರ್ಶನ್ ಮಾದರಿಯಾಗಿದ್ದಾರೆ. ಹೌದು, ಸಂಜು ಬಸಯ್ಯ ಅವರ ಪತ್ನಿ ನಟಿ ಪಲ್ಲವಿ ಸಂಜು ಬಸಯ್ಯ ಅವರಿಗೆ ವಿಜಯನಗರ ಮೂಲದ ಮನೋಜ್ ಎಂಬ ಪಿಯುಸಿ ವ್ಯಾಸಂಗ ಮಾಡುತ್ತಿದ್ದ ಯುವಕ ಇನ್ಸ್ಟಾಗ್ರಾಮ್ ಮೂಲಕ ಅಶ್ಲೀಲ ಸಂದೇಶ ಕಳುಹಿಸಿದ್ದ. ಅಶ್ಲೀಲ ಮೆಸೇಜ್ ಜೊತೆಗೆ ಅಶ್ಲೀಲ ಫೋಟೊಗಳನ್ನೂ ಕಳಿಸಿದ್ದ. ಇದರಿಂದ ಸಂಯಮ ಕಳೆದುಕೊಳ್ಳದ ಸಂಜು ಬಸಯ್ಯ ಅವರು ಬೈಲಹೊಂಗಲ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ದೂರು ದಾಖಲಾಗುತ್ತಿದ್ದಂತೆ ಅಲರ್ಟ್ ಆದ ಪೊಲೀಸರು, ಅಶ್ಲೀಲ ಸಂದೇಶ ಕಳಿಸಿದ ಯುವಕನಿಗೆ ಬುದ್ಧಿ ಹೇಳಿ ಕಳುಹಿಸಿದ್ದಾರೆ.



**ಮೆಸೇಜ್ ಜೊತೆಗೆ ಅಶ್ಲೀಲ ಫೋಟೊ**

## ಬ್ಲಾಕ್ ಬಸ್ಟರ್ 'ಕುಬೇರ' ಬಂದೇ ಬಿಟ್ತು ಒಟಿಟಿಗೆ

**ಬಿಡುಗಡೆ ಆಗುವ ಮುಂಚೆಯೇ ಅಮೆಜಾನ್ ಪ್ರೈಂ**


ಧನುಶ್ ಹಾಗೂ ರಶ್ಮಿಕಾ ಮಂದಣ್ಣ ನಟನೆಯ 'ಕುಬೇರ' ಸಿನಿಮಾ ಕೆಲ ವಾರಗಳ ಹಿಂದಷ್ಟೆ ಬಿಡುಗಡೆ ಆಗಿ ಸೂಪರ್ ಹಿಟ್ ಆಗಿದೆ.

100 ಕೋಟಿಗೂ ಹೆಚ್ಚು ಮೊತ್ತದ ಕಲೆಕ್ಷನ್ ಮಾಡಿದೆ. ಈ ಸಿನಿಮಾ ಒಟಿಟಿಗೆ ಬರುವುದು ಯಾವಾಗ ಎಂದು ಸಿನಿಮಾ ಪ್ರೇಮಿಗಳು ಕಾತರರಾಗಿದ್ದರು. ಇದೀಗ ಸಿನಿಮಾದ ಒಟಿಟಿ ಬಿಡುಗಡೆ ದಿನಾಂಕ ಘೋಷಣೆ ಆಗಿದೆ. ಧನುಶ್ , ರಶ್ಮಿಕಾ ಮಂದಣ್ಣ ನಟಿಸಿರುವ 'ಕುಬೇರ' ಸಿನಿಮಾ ಕೆಲವೇ ವಾರಗಳ ಹಿಂದೆ ಚಿತ್ರಮಂದಿರಗಳಿಗೆ ಬಿಡುಗಡೆ ಆಗಿ ಭಾರಿ ದೊಡ್ಡ ಹಿಟ್ ಆಯ್ತು. ಶೇಖರ್ ಕಮ್ಮುಲ ನಿರ್ದೇಶನ ಮಾಡಿದ್ದ ಈ ಸಿನಿಮಾನಲ್ಲಿ ನಾಗಾರ್ಜುನ ಸಹ ಪ್ರಮುಖ ಪಾತ್ರದಲ್ಲಿ ನಟಿಸಿದ್ದರು. ಸಿನಿಮಾದ ಕತೆ, ಸಂಗೀತ, ನಟರುಗಳ ನಟನೆ ಎಲ್ಲವೂ ಜನರಿಗೆ ಬಹಳ ಇಷ್ಟವಾಗಿತ್ತು. ಫ್ಯಾಮಿಲಿ ಆಡಿಯೆನ್ಸ್ ಸಹ ಕುಟುಂಬ ಸಮೇತ ಚಿತ್ರಮಂದಿರಗಳಿಗೆ ಬಂದು ಸಿನಿಮಾ ನೋಡಿದರು. ಇದೇ ಕಾರಣಕ್ಕೆ ಈ ಸಿನಿಮಾ 100 ಕೋಟಿಗೂ ಹೆಚ್ಚು ಕಲೆಕ್ಷನ್ ಸಹ ಮಾಡಿತು. ಇದೀಗ ಈ ಸಿನಿಮಾ ಒಟಿಟಿಗೆ ಬರುತ್ತಿದೆ. ಇದೀಗ 'ಕುಬೇರ' ಸಿನಿಮಾ ಒಟಿಟಿಗೆ ಬರುತ್ತಿದ್ದು, ಒಟಿಟಿ ಬಿಡುಗಡೆ ದಿನಾಂಕ ಘೋಷಣೆ ಆಗಿದೆ. 'ಕುಬೇರ' ಸಿನಿಮಾ ಅಮೆಜಾನ್ ಪ್ರೈಂನಲ್ಲಿ ಜುಲೈ 18 ರಂದು ಬಿಡುಗಡೆ ಆಗಲಿದೆ. ಭಾರತ ಮಾತ್ರವಲ್ಲದೆ ವಿಶ್ವದ ಹಲವಾರು ರಾಷ್ಟ್ರಗಳಲ್ಲಿ ಏಕಕಾಲಕ್ಕೆ ಈ ಸಿನಿಮಾ ತೆರೆಗೆ ಬರಲಿದೆ. ಒಟಿಟಿಯಲ್ಲಿ ತೆಲುಗು, ತಮಿಳು, ಕನ್ನಡ, ಹಿಂದಿ, ಮಲಯಾಳಂ ಭಾಷೆಗಳಿಗೆ ಡಬ್ ಆಗಿ ಬಿಡುಗಡೆ ಆಗುತ್ತಿದೆ. ಅಮೆಜಾನ್ ಪ್ರೈಂ ಸಹ 'ಕುಬೇರ' ಸಿನಿಮಾವನ್ನು ಚೆನ್ನಾಗಿ ಪ್ರಚಾರ ಮಾಡುತ್ತಿದೆ. 'ಕುಬೇರ' ಸಿನಿಮಾವು ಚಿತ್ರಮಂದಿರದಲ್ಲಿ ಬಿಡುಗಡೆ ಆಗುವ ಮುಂಚೆಯೇ ಅಮೆಜಾನ್ ಪ್ರೈಂ ಜೊತೆಗೆ ದೊಡ್ಡ ಮೊತ್ತದ ಡೀಲ್‌ಗೆ ಸಹಿ ಹಾಕಿತ್ತು. ಬರೋಬ್ಬರಿ 50 ಕೋಟಿ ರೂಪಾಯಿ ಹಣ ನೀಡಿ 'ಕುಬೇರ' ಸಿನಿಮಾದ ಡಿಜಿಟಲ್ ಹಕ್ಕುಗಳನ್ನು ಅಮೆಜಾನ್ ಪ್ರೈಂ ಖರೀದಿ ಮಾಡಿತ್ತು. ಅಮೆಜಾನ್ ಪ್ರೈಂನ ಮುನ್ನೋಟದಂತೆ ಸಿನಿಮಾ ದೊಡ್ಡ ಹಿಟ್ ಆಗಿದ್ದು, ಒಟಿಟಿಯಲ್ಲಿಯೂ ಸಹ 'ಕುಬೇರ' ಸಿನಿಮಾ ಸೂಪರ್ ಹಿಟ್ ಆಗುವ ಎಲ್ಲಾ ಭರವಸೆಗಳನ್ನು ಮೂಡಿಸಿದೆ.

## ಆಂಗ್ಲರನ್ನು ಗೇಲಿ ಮಾಡಿದ ಯಂಗ್ ಇಂಡಿಯಾ

ಲಾರ್ಡ್ಸ್‌ನಲ್ಲಿ ನಡೆಯುತ್ತಿರುವ ಮೂರನೇ ಟೆಸ್ಟ್ ಪಂದ್ಯದ ಮೊದಲ ದಿನ ಇಂಗ್ಲೆಂಡ್ ಬ್ಯಾಟ್ಸ್‌ಮನ್‌ಗಳ ನಿಧಾನಗತಿಯ ಬ್ಯಾಟಿಂಗ್ ಅನ್ನು ಟೀಂ ಇಂಡಿಯಾ ಆಟಗಾರರು ಗೇಲಿ ಮಾಡಿದ್ದಾರೆ. ನಾಯಕ ಶುಭ್‌ಮನ್ ಗಿಲ್ ಮತ್ತು ವೇಗಿ ಸಿರಾಜ್ ಆಂಗ್ಲರ ನಿಧಾನ ಬ್ಯಾಟಿಂಗ್‌ಗೆ ವ್ಯಂಗ್ಯವಾಡಿದರು. ಇದೀಗ ಇದರ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ. ಲಾರ್ಡ್ಸ್ ಮೈದಾನದಲ್ಲಿ ಟೀಂ ಇಂಡಿಯಾ ವಿರುದ್ಧ ನಡೆಯುತ್ತಿರುವ ಮೂರನೇ ಟೆಸ್ಟ್ ಪಂದ್ಯದ ಮೊದಲ ದಿನದಂದು ಇಂಗ್ಲೆಂಡ್ ತಂಡದ ಬ್ಯಾಟ್ಸ್‌ಮನ್‌ಗಳು ತುಂಬಾ ನಿಧಾನವಾಗಿ ಬ್ಯಾಟಿಂಗ್ ಮಾಡಿದರು. ಹೀಗಾಗಿ ಮೊದಲ ದಿನದಾಟದಂತ್ಯದ ವೇಳೆಗೆ ಆತಿಥೇಯ ತಂಡ 4 ವಿಕೆಟ್‌ಗಳಿಗೆ 251 ರನ್ ಗಳಿಸಿದೆ. ಇಂಗ್ಲಿಷ್ ಬ್ಯಾಟ್ಸ್‌ಮನ್‌ಗಳು ಟೆಸ್ಟ್ ಕ್ರಿಕೆಟ್‌ನಲ್ಲಿ ವೇಗವಾಗಿ ರನ್ ಗಳಿಸುವುದಕ್ಕೆ ಹೆಸರುವಾಸಿಯಾಗಿದ್ದರೂ, ಈ ಟೆಸ್ಟ್ ಪಂದ್ಯದಲ್ಲಿ ಅವರು ರನ್ ಗಳಿಸಲು ಕಷ್ಟಪಡುತ್ತಿರುವುದು ಕಂಡುಬಂದಿದೆ. ಒಂದೆಡೆ ಇಂಗ್ಲೆಂಡ್ ಬ್ಯಾಟ್ಸ್‌ಮನ್‌ಗಳು ರನ್ ಗಳಿಸಲು ಕಷ್ಟಪಡುತ್ತಿದ್ದರೆ, ಇನ್ನೊಂದೆಡೆ ಟೀಂ ಇಂಡಿಯಾ ನಾಯಕ ಶುಭ್‌ಮನ್ ಗಿಲ್ ಮತ್ತು ವೇಗಿ ಮೊಹಮ್ಮದ್ ಸಿರಾಜ್ , ಆಂಗ್ಲರನ್ನು ಭಾಝ್ ಬಾಲ್ ಕ್ರಿಕೆಟ್ ಹೆಸರಿನಲ್ಲಿ ಗೇಲಿ ಮಾಡಿದ್ದಾರೆ. ಇದೀಗ ಇದರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ. ಲಾರ್ಡ್ಸ್ ಟೆಸ್ಟ್ ಪಂದ್ಯದ ಮೊದಲ ದಿನದಂದು, ಇಂಗ್ಲಿಷ್ ಬ್ಯಾಟ್ಸ್‌ಮನ್‌ಗಳು ಪ್ರತಿ ರನ್ ಗಳಿಸಲು ಹೆಣಗಾಡುತ್ತಿದ್ದರು. ಹೀಗಾಗಿ ಊಟದ ಸಮಯದ ವೇಳೆಗೆ, ಇಂಗ್ಲೆಂಡ್ 83 ರನ್‌ಗಳಿಗೆ ಎರಡು ವಿಕೆಟ್‌ಗಳನ್ನು ಕಳೆದುಕೊಂಡಿತ್ತು. ಆದರೆ ಆ ಬಳಿಕ ಎಚ್ಚರಿಕೆಯ ಆಟಕ್ಕೆ ಮುಂದಾದ ಆಂಗ್ಲರು, ವಿಕೆಟ್ ಕೈಚೆಲ್ಲದೆ ಇನ್ನಿಂಗ್ಸ್ ಕಟ್ಟಲಾರಂಭಿಸಿದರು.

**'ಬೋರಿಂಗ್ ಟೆಸ್ಟ್ ಕ್ರಿಕೆಟ್‌ಗೆ ಸ್ವಾಗತ'**



ಈ ವೇಳೆ ಇಂಗ್ಲೆಂಡ್ ತಂಡದ ನಿಧಾನಗತಿಯ ಬ್ಯಾಟಿಂಗ್ ನೋಡಿದ ಮೊಹಮ್ಮದ್ ಸಿರಾಜ್, ಸ್ಟ್ರೈಕ್‌ನಲ್ಲಿದ್ದ ಜೋ ರೂಟ್ ಅವರನ್ನು ತಮಾಷೆಯ ರೀತಿಯಲ್ಲಿ ಲೇವಡಿ ಮಾಡಿದರು. 'ಭಾಝ್ ಬಾಲ್ ಎಲ್ಲಿದೆ, ನಾನು ಅದನ್ನು ನೋಡಲು ಬಯಸುತ್ತೇನೆ' ಎಂದು ಹೇಳಿದರು. ಆದಾಗ್ಯೂ ರೂಟ್ ತಮ್ಮ ಎಂದಿನ ಆಟವನ್ನು ಮುಂದುವರೆಸಿದರು. ಇದರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚು ವೈರಲ್ ಆಗುತ್ತಿದೆ. ಸಿರಾಜ್ ಗೂ ಮೊದಲು, ನಾಯಕ ಶುಭ್‌ಮನ್ ಗಿಲ್ ಕೂಡ ನಿಧಾನಗತಿಯ ಬ್ಯಾಟಿಂಗ್ ಮಾಡುತ್ತಿದ್ದ ಇಂಗ್ಲೆಂಡ್ ತಂಡವನ್ನು ಟೀಕಿಸಿದರು.

**ಟೀಕಿಸಿದ ಶುಭ್‌ಮನ್ ಗಿಲ್:** ಸಿರಾಜ್‌ಗೂ ಮೊದಲು, ನಾಯಕ ಶುಭ್ ಮನ್ ಗಿಲ್ ಕೂಡ ಇಂಗ್ಲೆಂಡ್ ತಂಡದ ನಿಧಾನಗತಿಯ ಬ್ಯಾಟಿಂಗ್ ಅನ್ನು ಟೀಕಿಸಿದರು. ಲಾರ್ಡ್ಸ್ ಟೆಸ್ಟ್‌ನ ಮೊದಲ ದಿನದ ಎರಡನೇ ಸೆಷನ್‌ನಲ್ಲಿ, 'ಇನ್ನು ಮುಂದೆ ಮನರಂಜನೆಯ ಕ್ರಿಕೆಟ್ ಇಲ್ಲ, ಸ್ನೇಹಿತರೇ ನೀರಸ ಕ್ರಿಕೆಟ್‌ಗೆ ಸ್ವಾಗತ' ಎಂದು ಹೇಳಿದರು. ಇದು ಸ್ಟಂಪ್ ಮೈಕ್‌ನಲ್ಲಿ ಸ್ಪಷ್ಟವಾಗಿ ರೆಕಾರ್ಡ್ ಆಗಿದೆ. ಇದೀಗ ಇದರ ವೀಡಿಯೊ ಕೂಡ ವೈರಲ್ ಆಗುತ್ತಿದೆ.

**ಶತಕದ ಸಮೀಪದಲ್ಲಿ ಜೋ ರೂಟ್:** ಜೋ ರೂಟ್ ಅದ್ಭುತ ಬ್ಯಾಟಿಂಗ್ ಪ್ರದರ್ಶಿಸಿದರು. ಮೊದಲ ದಿನದಾಟದ ಅಂತ್ಯದವರೆಗೆ ಅವರು ಅಜೇಯ 99 ರನ್ ಬಾರಿಸಿದ್ದರೆ, ನಾಯಕ ಬೆನ್ ಸ್ಟೋಕ್ಸ್ 39 ರನ್ ಗಳಿಸಿದ್ದಾರೆ. ಶತಕದ ಸಮೀಪದಲ್ಲಿರುವ ಜೋ ರೂಟ್ ಇನ್ನೊಂದು ರನ್ ಬಾರಿಸಿದರೆ, ಭಾರತದ ವಿರುದ್ಧ 11ನೇ ಶತಕ ಬಾರಿಸಿದ ದಾಖಲೆ ಸೃಷ್ಟಿಸಲಿದ್ದಾರೆ. ಇವರಿಬ್ಬರ ಹೊರತಾಗಿ, ಓಲ್ಲಿ ಪೋಪ್ 44 ರನ್‌ಗಳ ಇನ್ನಿಂಗ್ಸ್ ಆಡಿದರು. ಆರಂಭಿಕ ಆಟಗಾರರಾದ ಬೆನ್ ಡಕೆಟ್ 23 ರನ್ ಗಳಿಸಿ ಔಟಾದರೆ, ಜ್ಯಾಕ್ ಕ್ರೌಲಿ 18 ರನ್ ಗಳಿಸಿ ಔಟಾದರು. ದಿನದಾಟದ ಅಂತ್ಯಕ್ಕೆ ಇಂಗ್ಲೆಂಡ್ ನಾಲ್ಕು ವಿಕೆಟ್‌ಗಳಿಗೆ 251 ರನ್ ಗಳಿಸಿದರೆ, ಭಾರತದ ಪರ ನಿತೀಶ್ ರೆಡ್ಡಿ ಎರಡು ವಿಕೆಟ್ ಪಡೆದಿದ್ದು, ರವೀಂದ್ರ ಜಡೇಜಾ ಮತ್ತು ಜಸ್ಪ್ರೀತ್ ಬುಮ್ರಾ ತಲಾ 1 ವಿಕೆಟ್ ಉರುಳಿಸಿದ್ದಾರೆ.



## ಕ್ರಿಕೆಟ್ ದೇವರ ದಾಖಲೆ ಸರಿಗಟ್ಟಿದ ಜೋ ರೂಟ್

ಲಾರ್ಡ್ಸ್‌ನಲ್ಲಿ ನಡೆಯುತ್ತಿರುವ ಭಾರತ-ಇಂಗ್ಲೆಂಡ್ ಟೆಸ್ಟ್ ಪಂದ್ಯದ ಎರಡನೇ ದಿನದಾಟದಲ್ಲಿ ಜೋ ರೂಟ್ ತಮ್ಮ 37ನೇ ಟೆಸ್ಟ್ ಶತಕ ಸಿಡಿಸಿ ಇಂಗ್ಲೆಂಡ್ ಇನ್ನಿಂಗ್ಸ್‌ಗೆ ಜೀವ ತುಂಬಿದ್ದಾರೆ. ಮೊದಲ ದಿನದಾಟದ ಅಂತ್ಯಕ್ಕೆ 99 ರನ್‌ಗಳಲ್ಲಿ ಅಜೇಯರಾಗಿದ್ದ ರೂಟ್ ಎರಡನೇ ದಿನದ ಮೊದಲ ಎಸೆತವನ್ನೇ ಬೌಂಡರಿಗಟ್ಟಿ ಶತಕ ಪೂರ್ಣಗೊಳಿಸಿದರು. ಬೆನ್ ಸ್ಟೋಕ್ಸ್ ಜೊತೆ ಅವರು 80 ಕ್ಕೂ ಹೆಚ್ಚು ರನ್‌ಗಳ ಜೊತೆಯಾಟವನ್ನು ನಿರ್ಮಿಸಿ ಇಂಗ್ಲೆಂಡ್ ತಂಡವನ್ನು 250 ರನ್‌ಗಳ ಗಡಿ ದಾಟಿಸಿದರು. ಭಾರತ ಮತ್ತು ಇಂಗ್ಲೆಂಡ್ ನಡುವೆ ಲಾರ್ಡ್ಸ್ ಮೈದಾನದಲ್ಲಿ ನಡೆಯುತ್ತಿರುವ ಮೂರನೇ ಟೆಸ್ಟ್ ಪಂದ್ಯದ ಎರಡನೇ ದಿನದಾಟ ಶುರುವಾಗಿದೆ. ಮೊದಲ ದಿನದಾಟದಂತ್ಯಕ್ಕೆ 4 ವಿಕೆಟ್ ಕಳೆದುಕೊಂಡು 251 ರನ್ ಬಾರಿಸಿದ್ದ ಇಂಗ್ಲೆಂಡ್ ತಂಡ ಇಲ್ಲಿಂದ ತನ್ನ ಎರಡನೇ ದಿನದಾಟವನ್ನು ಮುಂದುವರೆಸಿದೆ. ಇನ್ನು ಮೊದಲ ದಿನದಾಟದಂತ್ಯಕ್ಕೆ 99 ರನ್ ಬಾರಿಸಿ ಅಜೇಯರಾಗಿ ಉಳಿದಿದ್ದ ಮಾಜಿ ನಾಯಕ ಜೋ ರೂಟ್ , ಎರಡನೇ ದಿನದಾಟದ ಮೊದಲ ಎಸೆತವನ್ನೇ ಬೌಂಡರಿಗಟ್ಟುವ ಮೂಲಕ ಶತಕ ಪೂರೈಸಿದರು. 192 ಎಸೆತಗಳಲ್ಲಿ 10 ಬೌಂಡರಿಗಳ ಸಹಿತ ರೂಟ್ ತಮ್ಮ ಟೆಸ್ಟ್ ವೃತ್ತಿಜೀವನದ 37 ನೇ ಶತಕವನ್ನು ಪೂರ್ಣಗೊಳಿಸಿದರು. ಅಲ್ಲದೆ ಟೀಂ ಇಂಡಿಯಾ ವಿರುದ್ಧ ರೂಟ್ ಸಿಡಿಸಿದ 11ನೇ ಟೆಸ್ಟ್ ಶತಕ ಇದಾಗಿದೆ. ಹಾಗೆಯೇ ರೂಟ್, ನಾಯಕ ಬೆನ್ ಸ್ಟೋಕ್ಸ್ ಅವರೊಂದಿಗೆ 80 ಕ್ಕೂ ಹೆಚ್ಚು ರನ್‌ಗಳ ಜೊತೆಯಾಟವನ್ನು ನಡೆಸಿದ್ದು, ಇವರಿಬ್ಬರ ಆಟದಿಂದಾಗಿ ಇಂಗ್ಲೆಂಡ್‌ನ ಸ್ಕೋರ್ ಕೂಡ 250 ರನ್‌ಗಳ ಗಡಿ ದಾಟಿದೆ.

## ಮೈದಾನಕ್ಕಿಳಿಯುವುದಿಲ್ಲ



ಲಾರ್ಡ್ಸ್‌ನಲ್ಲಿ ನಡೆಯುತ್ತಿರುವ ಟೆಸ್ಟ್ ಪಂದ್ಯದ ಮೊದಲ ದಿನ ರಿಷಭ್ ಪಂತ್ ಅವರು ಕೈ ಬೆರಳಿಗೆ ಗಾಯಗೊಂಡು ಪಂದ್ಯದಿಂದ ಹೊರಗುಳಿದಿದ್ದರು. ಇದೀಗ ಎರಡನೇ ದಿನದಾಟದಲ್ಲೂ ಅವರು ಆಡಲಾರರು ಎಂದು ಬಿಸಿಸಿಐ ಅಧಿಕೃತ ಹೇಳಿಕೆ ಬಿಡುಗಡೆ ಮಾಡಿದೆ. ಪಂತ್ ಅವರ ಗಾಯದಿಂದಾಗಿ ಭಾರತ ತಂಡಕ್ಕೆ ದೊಡ್ಡ ಹೊಡೆತ ಬಿದ್ದಿದ್ದು, ಧ್ರುವ್ ಜುರೇಲ್ ಕೀಪಿಂಗ್ ಮಾಡುತ್ತಿದ್ದಾರೆ. ಪಂತ್ ಅವರ ಚೇತರಿಕೆಗೆ ವೈದ್ಯಕೀಯ ತಂಡ ನಿಗಾ ವಹಿಸಿದೆ. ಲಾರ್ಡ್ಸ್ ಟೆಸ್ಟ್‌ನ ಮೊದಲ ದಿನದಾಟದಲ್ಲಿ ಕೈ ಬೆರಳಿಗೆ ಗಾಯ ಮಾಡಿಕೊಂಡು ಪಂದ್ಯದ ಮಧ್ಯದಲ್ಲೇ ಮೈದಾನ ತೊರೆದಿದ್ದ ಟೀಂ ಇಂಡಿಯಾದ ವಿಕೆಟ್ ಕೀಪರ್ ಮತ್ತು ಟೆಸ್ಟ್ ಉಪನಾಯಕ ರಿಷಭ್ ಪಂತ್, ಎರಡನೇ ದಿನದಾಟದಲ್ಲೂ ಮೈದಾನಕ್ಕಿಳಿದಿಲ್ಲ. ಇದನ್ನು ಗಮನಿಸಿದರೆ ಪಂತ್ ಅವರ ಗಾಯ ಎಷ್ಟು ಗಂಭೀರವಾಗಿದೆ ಎಂಬುದನ್ನು ಇಲ್ಲಿ ನಾವು ಊಹಿಸಬಹುದು. ಇದೀಗ ಬಿಸಿಸಿಐ ಪಂತ್ ಅವರ ಗಾಯದ ಬಗ್ಗೆ ಮಾಹಿತಿ ನೀಡಿದ್ದು, ಇದು ಭಾರತೀಯ ಅಭಿಮಾನಿಗಳಿಗೆ ಮತ್ತು ಟೀಮ್ ಇಂಡಿಯಾಕ್ಕೆ ಆಘಾತ ನೀಡಿದೆ.

ಲಾರ್ಡ್ಸ್ ಟೆಸ್ಟ್‌ನ ಎರಡನೇ ದಿನವೂ ರಿಷಭ್ ಪಂತ್ ಮೈದಾನಕ್ಕೆ ಇಳಿಯುವುದಿಲ್ಲ ಎಂದು ಬಿಸಿಸಿಐ ತಿಳಿಸಿದೆ. ಒಂದು ದಿನದ ಮಟ್ಟಿಗೆ ರಿಷಭ್ ಪಂತ್ ಔಟ್ ವಾಸ್ತವವಾಗಿ ಎರಡನೇ ದಿನದಾಟ ಆರಂಭಕ್ಕೂ ಮುನ್ನ ಟೀಂ ಇಂಡಿಯಾದ ಅಭ್ಯಾಸದ ವೇಳೆ ರಿಷಭ್ ಪಂತ್ ಬ್ಯಾಟ್ ಹಿಡಿದು ಶಾಟ್ ಆಡಲು ಪ್ರಯತ್ನಿಸಿದರು. ಆದರೆ ಕೈ ಬೆರಳಿನ ನೋವಿನಿಂದ ಪಂತ್‌ಗೆ ಬ್ಯಾಟಿಂಗ್ ಮಾಡಲು ಸಾಧ್ಯವಾಗಲಿಲ್ಲ. ಆದಾಗ್ಯೂ ಅವರು ಎರಡನೇ ದಿನದಾಟದಲ್ಲಿ ಮೈದಾನದಲ್ಲಿ ಕಾಣಿಸಿಕೊಳ್ಳಬಹುದು ಎಂದು ನಿರೀಕ್ಷಿಸಲಾಗಿತ್ತು. ಆದರೆ ಬಿಸಿಸಿಐ ನೀಡಿರುವ ಮಾಹಿತಿ ಅಭಿಮಾನಿಗಳಲ್ಲಿ ಆತಂಕ ಮೂಡಿಸಿದೆ. ಎರಡನೇ ದಿನದಾಟ ಆರಂಭವಾದ ಕೂಡಲೇ ಪಂತ್ ಬಗ್ಗೆ ಮಾಹಿತಿ ನೀಡಿರುವ ಬಿಸಿಸಿಐ, 'ರಿಷಭ್ ಪಂತ್ ಕೈ ಬೆರಳಿನ ಗಾಯದಿಂದ ಚೇತರಿಸಿಕೊಳ್ಳುತ್ತಿದ್ದು, ವೈದ್ಯಕೀಯ ತಂಡ ಅವರ ಮೇಲೆ ನಿಗಾ ಇರಿಸಿದೆ. ಹೀಗಾಗಿ 2ನೇ ದಿನದಾಟದಲ್ಲೂ ಧೃವ್ ಜುರೇಲ್ ಕೀಪಿಂಗ್ ಮುಂದುವರೆಸಲಿದ್ದಾರೆ' ಎಂದಿದೆ. ಪಂತ್ ಗಾಯಗೊಂಡಿರುವುದು ಭಾರತದ ಬ್ಯಾಟಿಂಗ್ ವಿಭಾಗಕ್ಕೆ ದೊಡ್ಡ ಹೊಡೆತ ಎನ್ನಬಹುದು.

**ಪಂತ್ ಗಾಯದ ಬಗ್ಗೆ ಆಘಾತಕಾರಿ ಮಾಹಿತಿ**

## ಇಂಗ್ಲೆಂಡ್ ಬ್ಯಾಟರ್‌ಗೆ ಜಡೇಜಾ ಚಾಲೆಂಜ್



**ಹೆದರಿದ ಜೋ ರೂಟ್**

ಭಾರತ-ಇಂಗ್ಲೆಂಡ್ ಮೂರನೇ ಟೆಸ್ಟ್‌ನ ಮೊದಲ ದಿನದಂದು ಇಂಗ್ಲೆಂಡ್ ಪರ ಜೋ ರೂಟ್ ಉತ್ತಮವಾಗಿ ಬ್ಯಾಟಿಂಗ್ ಮಾಡಿದರು. ದಿನದ ಅಂತ್ಯದ ವೇಳೆಗೆ ಅವರಿಗೆ ಶತಕ ಪೂರೈಸುವ ಸುವರ್ಣಾವಕಾಶ ಕೂಡ ಇತ್ತು. ಆದರೆ, ಅವರು ರವೀಂದ್ರ ಜಡೇಜಾಗೆ ಹೆದರಿ ಈ ಸಾಹಸದಿಂದ ಹಿಂದೆ ಸರಿದರು. ಭಾರತ ಮತ್ತು ಇಂಗ್ಲೆಂಡ್ ನಡುವೆ ಮೂರನೇ ಟೆಸ್ಟ್ ಪಂದ್ಯ ಪ್ರತಿಷ್ಠಿತ ಲಾರ್ಡ್ಸ್ ಕ್ರೀಡಾಂಗಣದಲ್ಲಿ ನಡೆಯುತ್ತಿದೆ.

ಈ ಪಂದ್ಯದಲ್ಲಿ, ಇಂಗ್ಲೆಂಡ್ ನಾಯಕ ಬೆನ್ ಸ್ಟೋಕ್ಸ್ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಲು ನಿರ್ಧರಿಸಿದರು. ಮೊದಲ ದಿನದಾಟದ ಅಂತ್ಯದ ವೇಳೆಗೆ, ಇಂಗ್ಲೆಂಡ್ ತಂಡವು 4 ವಿಕೆಟ್ ನಷ್ಟಕ್ಕೆ 251 ರನ್ ಗಳಿಸಿದೆ. ಜೋ ರೂಟ್ 99 ರನ್‌ಗಳೊಂದಿಗೆ ಕ್ರೀಸ್‌ನಲ್ಲಿದ್ದಾರೆ ಮತ್ತು ಬೆನ್ ಸ್ಟೋಕ್ಸ್ 39 ರನ್ ಗಳಿಸಿದ್ದಾರೆ. ಜೋ ರೂಟ್‌ಗೆ ಶತಕ ಪೂರ್ಣಗೊಳಿಸಲು ಕೇವಲ ಒಂದು ರನ್ ಮಾತ್ರ ಬಾಕಿಯಿದೆ. ಪಂದ್ಯದ ಮೊದಲ ದಿನದಂದು ಇಂಗ್ಲೆಂಡ್ ಪರ ಜೋ ರೂಟ್ ಉತ್ತಮವಾಗಿ ಬ್ಯಾಟಿಂಗ್ ಮಾಡಿದರು. ದಿನದ ಅಂತ್ಯದ ವೇಳೆಗೆ ಅವರಿಗೆ ಶತಕ ಪೂರೈಸುವ ಸುವರ್ಣಾವಕಾಶ ಕೂಡ ಇತ್ತು. ಆದರೆ, ಜಡೇಜಾ ಅವರಿಗೆ ಹೆದರಿ ಈ ಸಾಹಸದಿಂದ ಹಿಂದೆ ಸರಿದರು. ಮೊದಲ ದಿನದ ಕೊನೆಯ 83ನೇ ಓವರ್ ಅನ್ನು ಆಕಾಶ್ ದೀಪ್ ಎಸೆದರು. ಈ ಓವರ್‌ನ ನಾಲ್ಕನೇ ಎಸೆತದಲ್ಲಿ ರೂಟ್ ಒಂದು ರನ್ ಪಡೆದರು. ಇದರೊಂದಿಗೆ ಅವರು 99 ರನ್‌ಗಳಿಗೆ ತಲುಪಿದರು.

ನಂತರ ಅವರು ಎರಡನೇ ರನ್ ತೆಗೆದುಕೊಳ್ಳಲು ಬಯಸಿದ್ದರು. ಆದರೆ ಚೆಂಡು ಫೀಲ್ಡರ್ ರವೀಂದ್ರ ಜಡೇಜಾ ಅವರ ಕೈಯಲ್ಲಿತ್ತು. ರೂಟ್ ಎರಡು ರನ್ ಗಳಿಸಬಹುದು ಎಂದು ಭಾವಿಸಿದ ಜಡೇಜಾ ಬೇಗನೆ ಚೆಂಡನ್ನು ಹಿಡಿದು ವಿಕೆಟ್ ಕೀಪರ್ ತುದಿಗೆ ಎಸೆಯಲು ಮುಂದಾದರು. ಆದರೆ, ವಿಶ್ವದ ಶ್ರೇಷ್ಠ ಫೀಲ್ಡರ್ ಜಡೇಜಾ ಕೈಯಲ್ಲಿ ಬಾಲ್ ಇದ್ದ ಕಾರಣ ರೂಟ್ ಎರಡು ರನ್ ಓಡಬೇಕೆ ಅಥವಾ ಬೇಡವೆ ಎಂಬ ಗೊಂದಲದಲ್ಲಿದ್ದರು. ಇದೇ ಸಂದರ್ಭ ತಮಾಷೆಯ ಘಟನೆಯೊಂದು ನಡೆಯಿತು. ರೂಟ್ ಬಳಿ ಜಡೇಜಾ ಇನ್ನೊಂದು ರನ್‌ಗಾಗಿ ಓಡಲು ತನ್ನ ಕೈಯಿಂದ ಸಿಗ್ನಲ್ ಮಾಡಲು ಪ್ರಾರಂಭಿಸಿದರು. ಅಷ್ಟೇ ಅಲ್ಲದೆ ಜಡ್ಡು ಚೆಂಡನ್ನು ಪುನಃ ನೆಲಕ್ಕೆ ಬೀಳಿಸಿದರು. ಈ ಸಮಯದಲ್ಲಿ, ರೂಟ್ ಕ್ರೀಸ್‌ನಿಂದ ಹೊರಬಂದರು. ತಕ್ಷಣ ಜಡೇಜಾ ಪುನಃ ಎತ್ತಿ ವಿಕೆಟ್ ಕೀಪರ್ ಕಡೆಗೆ ಎಸೆದರು. ಅತ್ತ ರೂಟ್ ಮುಗುಳ್ನಕ್ಕು ಪುನಃ ಕ್ರೀಸ್ ಒಳಗೆ ಹಿಂತಿರುಗಿದರು. ಜಡೇಜಾ ಕೂಡ ನಗುತ್ತಾ ಪ್ರತಿಕ್ರಿಯಿಸಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966